VOLUME: 16 | 08 APRIL 2026 | ಬುಧವಾರ | RS: 2 | PAGE: 06 ISSUE: 67 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಶ್ರೀಮಂತ ಉದ್ಯಮಿಯನ್ನ ಮದ್ವೆಯಾಗಿ, 4 ಮಕ್ಕಳನ್ನು ಬೆಳೆಸುತ್ತಿದ್ದೇನೆ, ಇನ್ನೇನಾದ್ರು..? ಹೇಳ್ಬೇಕಾ ಅಂತ ಸಿನಿಮಾ ನಿವೃತ್ತಿ ವದಂತಿಗೆ ನಟಿ ತ್ರಿಶಾ ಕೃಷ್ಣನ್ ಕೌಂಟರ್ ಕೊಟ್ಟಿದ್ದಾರೆ. ಚಿತ್ರರಂಗದಿಂದ ತ್ರಿಶಾ ದೂರ ಸರಿಯುತ್ತಿದ್ದಾರೆ ಅಂತ ಕಳೆದ ಕೆಲ ದಿನಗಳಿಂದ ಸೋಷಿಯಲ್ ಮೀಡಿಯಾದಲ್ಲಿ ವದಂತಿ ಹರಿದಾಡ್ತಿದೆ.



BHARATHA SARATHI
KANNADA DAILY NEWS PAPER

CALL 9740160669

# ಭಾರತ ಸಾರಥಿ

RNI KARKAN2011/44806

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ

prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಇರಾನ್ ಮುಗಿಸಲು ಒಂದೇ ಒಂದು ರಾತ್ರಿ ಸಾಕು: ಟ್ರಂಪ್

ವಾಷಿಂಗ್ಟನ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್‌ಗೆ ಕಠಿಣ ಎಚ್ಚರಿಕೆ ನೀಡಿದ್ದಾರೆ. ಹಾರ್ಮುಜ್ ಜಲಸಂಧಿಯನ್ನು ತೆರೆಯದಿದ್ದರೆ ಇರಾನ್ ರಾತ್ರೋರಾತ್ರಿ ನಾಶವಾಗಬಹುದು ಎಂದು ಟ್ರಂಪ್ ಬೆದರಿಸಿದ್ದಾರೆ. ಶ್ವೇತಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿರುವ ಟ್ರಂಪ್, ಇಡೀ ದೇಶ ರಾತ್ರೋ ರಾತ್ರಿ ನಾಶವಾಗಬಹುದು ಮತ್ತು ಆ ರಾತ್ರಿ ಮಂಗಳವಾರವೇ ಆಗಿರಬಹುದು ಎಂದಿದ್ದಾರೆ. ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವ ಬಗ್ಗೆ ಹೆಚ್ಚುತ್ತಿರುವ ಉದ್ವಿಗ್ನತೆ ಮಧ್ಯೆ ಈ ಹೇಳಿಕೆ ಬಂದಿದೆ. ಟ್ರಂಪ್ ಮಂಗಳವಾರ(ಏಪ್ರಿಲ್ 7) ರಾತ್ರಿ 8 ಗಂಟೆಯವರೆಗೆ ಇರಾನ್‌ಗೆ ಸಮಯ ನೀಡಿದ್ದಾರೆ.

ಮಾರ್ಚ್ ಅಂತ್ಯದಲ್ಲಿ ಇರಾನ್‌ಗೆ ಒಪ್ಪಂದಕ್ಕೆ ಬರಲು ಅಥವಾ ಹಾರ್ಮುಜ್ ಜಲಸಂಧಿಯನ್ನು ತೆರೆಯಲು 10 ದಿನಗಳ ಅಲ್ಟಿಮೇಟಂ ನೀಡಿದ್ದರು. ನಂತರ ಇರಾನ್ ಕೋರಿಕೆಯ ಮೇಲೆ ಈ ಅವಧಿಯನ್ನು ಇನ್ನೂ 10 ದಿನಗಳವರೆಗೆ ವಿಸ್ತರಿಸಿದ್ದರು.ಇರಾನ್‌ನಲ್ಲಿ ಅಪಘಾತಕ್ಕೀಡಾದ ತಮ್ಮ ಫೈಟರ್ ಜೆಟ್ ಎಫ್ –15ರ ಪೈಲಟ್‌ನನ್ನು ರಕ್ಷಿಸಲು ಆರಂಭಿಸಲಾದ ಕಾರ್ಯಾಚರಣೆಯನ್ನು ಟ್ರಂಪ್ ಐತಿಹಾಸಿಕ ಎಂದು ಬಣ್ಣಿಸಿದರು.

ಕಳೆದ 37 ದಿನಗಳಲ್ಲಿ, ಅಮೆರಿಕದ ಸಶಸ್ತ್ರ ಪಡೆಗಳು ಇರಾನ್ ಮೇಲೆ 10,000 ಕ್ಕೂ ಹೆಚ್ಚು ಯುದ್ಧ ವಿಮಾನಗಳನ್ನು ಹಾರಿಸಿವೆ. ಇದು ಅಭೂತಪೂರ್ವವಾಗಿದೆ" ಎಂದು ಹೇಳಿದರು. ಕಳೆದ ವಾರ ಇರಾನ್‌ನಲ್ಲಿ ಹೊಡೆದುರುಳಿಸಿದ ಅಮೆರಿಕದ ಎಫ್ –15, ಈ ಸಂಪೂರ್ಣ ಕಾರ್ಯಾಚರಣೆಯ ಸಮಯದಲ್ಲಿ ಶತ್ರುಗಳಿಂದ ಹೊಡೆದುರುಳಿಸಿದ ಮೊದಲ ಮಾನವಸಹಿತ ವಿಮಾನವಾಗಿದೆ ಎಂದು ಅವರು ಹೇಳಿದ್ದಾರೆ.

ಟ್ರಂಪ್ ಅಮೆರಿಕದ ಮಿಲಿಟರಿ ಕಾರ್ಯಾಚರಣೆಯ ವಿವರಗಳನ್ನು ಹಂಚಿಕೊಂಡರು. ತನ್ನ ಪೈಲಟ್‌ಗಳಲ್ಲಿ ಒಬ್ಬರನ್ನು ರಕ್ಷಿಸಲು ಅಮೆರಿಕ ಸೇನೆಯು ಇದುವರೆಗಿನ ಅತಿದೊಡ್ಡ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿದೆ ಎಂದು ಅವರು ವಿವರಿಸಿದರು. ಈ ಪೈಲಟ್ ಇರಾನ್‌ನೊಳಗೆ, ಶತ್ರು ಪ್ರದೇಶದಲ್ಲಿ ಅಪಘಾತಕ್ಕೀಡಾಗಿದ್ದರು. ಅಲ್ಲಿನ ಪರಿಸ್ಥಿತಿಗಳು ಅತ್ಯಂತ ಅಪಾಯಕಾರಿಯಾಗಿದ್ದವು. ಈ ಧೈರ್ಯಶಾಲಿ ಪೈಲಟ್ ಅನ್ನು ರಕ್ಷಿಸಲು ಅಮೆರಿಕ 200 ಅಮೆರಿಕದ ಸೈನಿಕರನ್ನು ನಿಯೋಜಿಸಿತು. 21 ಅಮೆರಿಕದ ವಿಮಾನಗಳು ಇಡೀ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದವು.

## ಭ್ರಷ್ಟರಿಗೆ ಲೋಕಾ ಶಾಕ್..!

ಬೆಂಗಳೂರು: ಅಕ್ರಮ ಆಸ್ತಿಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಮಂಗಳವಾರ ಭ್ರಷ್ಟ ಅಧಿಕಾರಿಗೆ ಶಾಕ್ ನೀಡಿದ್ದು, ರಾಜ್ಯಾದ್ಯಂತ ಎಂಟು ಕಡೆ ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಲೋಕಾಯುಕ್ತ ಮೂಲಗಳ ಪ್ರಕಾರ, ಕೊಡಗು, ಬೀದರ್, ಬಳ್ಳಾರಿ, ಚಿತ್ರದುರ್ಗ ಮತ್ತು ಮೈಸೂರು ಸೇರಿದಂತೆ ವಿವಿಧ ಇಲಾಖೆ ಹಾಗೂ ಜಿಲ್ಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಕನಿಷ್ಠ ಎಂಟು ಅಧಿಕಾರಿಗಳ ಮನೆ ಮತ್ತು ಕಚೇರಿಗಳ ಮೇಲೆ ಬೆಳಗ್ಗೆ ದಾಳಿ ನಡೆಸಲಾಗಿದೆ. ಕೊಡಗು ಜಿಲ್ಲೆಯ ಹಾರಂಗಿ ಅಣೆಕಟ್ಟು ಉಪವಿಭಾಗದಲ್ಲಿ ನಿಯೋಜಿಸಲಾದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ (ಎಇಇ) ಐ ಕೆ ಪುಟ್ಟಸ್ವಾಮಿ ಅವರ ನಿವಾಸ ಹಾಗೂ ಕಚೇರಿ ಮೇಲೆ ದಾಳಿ ನಡೆಸಲಾಗಿದೆ.



ಅಕ್ರಮ ಆಸ್ತಿ ಗಳಿಕೆ ಹಿನ್ನೆಲೆಯಲ್ಲಿ ಲೋಕಾಯುಕ್ತ ವಾಸುದೇವ್ ರಾಮ್ ಹಾಗೂ ಆಜಖಕ ಮೃತ್ಯುಂಜಯ ನೇತೃತ್ವದಲ್ಲಿ ಅಸಿಸ್ಟೆಂಟ್ ಅಕೌಂಟೆಂಟ್ ಮನೆ ಮೇಲೆ ದಾಳಿ ನಡೆಸಿ ದಾಖಲೆ ಪರಿಶೀಲಿಸುತ್ತಿದ್ದಾರೆ. ಬಳ್ಳಾರಿಯಲ್ಲೂ ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಮೀನುಗಾರಿಕ ಇಲಾಖೆ ಸಹಾಯಕ ನಿರ್ದೇಶಕ ಶಿವಣ್ಣ ಮನೆ ಮತ್ತು ಕಚೇರಿ ಮೇಲೆ ದಾಳಿ ಮಾಡಲಾಗಿದೆ. ಬಳ್ಳಾರಿ ನಗರದ ಸಿದ್ಧಾರ್ಥ್ ನಗರದಲ್ಲಿರುವ ಮನೆ ಸೇರಿದಂತೆ ಒಟ್ಟು ನಾಲ್ಕು ಕಡೆ ದಾಳಿ ನಡೆದಿದೆ. ಆದಾಯಕ್ಕಿಂತ ಹೆಚ್ಚಿನ ಆಸ್ತಿ ಗಳಿಕೆ ಬಗ್ಗೆ ಆರೋಪ ಕೇಳಿ ಬಂದಿದ್ದ ಹಿನ್ನೆಲೆಯಲ್ಲಿ ದಾಳಿ ಮಾಡಲಾಗಿದೆ. ಶಿವಣ್ಣ ನಿವಾಸದಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಖಲೆಗಳ ಪರಿಶೀಲನೆ ಮಾಡ್ತಿದ್ದಾರೆ.

ಶಿವಮೊಗ್ಗದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಶೋಭಾ ಅವರ ಕಚೇರಿ ಹಾಗೂ ನಿವಾಸದ ಮೇಲೆ ಲೋಕಾಯುಕ್ತ ಅಧಿಕಾರಿಗಳ ದಾಳಿ ನಡೆದಿದೆ. ಶಿಕಾರಿಪುರ ಬಳಿ ತರಲಘಟ್ಟ ನಿವಾಸ, ಸಾಗರ ತಾಲೂಕಿನ ಆನಂದಪುರ ಬಳಿ ಆಚಾಪುರ ಶಾಲೆ–ಕಚೇರಿ ಹಾಗೂ ಚಾಲುಕ್ಯ ನಗರದ ರಾಘವೇಂದ್ರ ಅವರ ನಿವಾಸ ಸೇರಿ 3–4 ಸ್ಥಳಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ.



# ಇರಾನ್‌ಮೇಲೆ ಅಮೆರಿಕಾ ಡೆಡ್ಲಿ ಅಟ್ಯಾಕ್..!

ವಾಷಿಂಗ್ಟನ್: ರಾತ್ರಿ ಒಂದು ಇಡೀ ನಾಗರಿಕತೆಯೇ ಅಂತ್ಯವಾಗಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ.

ಇರಾನ್‌ಗೆ ನೀಡಿದ 48 ಗಂಟೆಗಳ ಡೆಡ್‌ಲೈನ್ ಅಮೆರಿಕ ಕಾಲಮಾನ ಮಂಗಳವಾರ ರಾತ್ರಿ 8 ಗಂಟೆ ಅಂತ್ಯವಾಗಲಿರುವ ಹಿನ್ನೆಲೆಯಲ್ಲಿ ಟ್ರಂಪ್ ಕೊನೆಯ ಎಚ್ಚರಿಕೆ ಸಂದೇಶವನ್ನು ತಮ್ಮ ಟ್ರೂತ್ ಸಾಮಾಜಿಕ ಜಾಲತಾಣದಲ್ಲಿ ಪ್ರಕಟಿಸಿದ್ದಾರೆ.

ಇಡೀ ನಾಗರಿಕತೆಯು ರಾತ್ರಿ ಸಾಯಲಿದೆ. ಮತ್ತೆಂದೂ ಈ ನಾಗರಿಕತೆ ಮರಳುವುದಿಲ್ಲ. ಈ ಘಟನೆ ಸಂಭವಿಸಬೇಕೆಂದು ನಾನು ಬಯಸುವುದಿಲ್ಲ, ಆದರೆ ಅದು ಬಹುಶಃ ಸಂಭವಿಸುವ ಸಾಧ್ಯತೆಯಿದೆ. ಈಗ ನಾವು ಸಂಪೂರ್ಣ ಆಡಳಿತ ಬದಲಾವಣೆಯನ್ನು ಬಯಸುತ್ತೇವೆ.

ಬಹುಶಃ ಕ್ರಾಂತಿಕಾರಿಯಾಗಿ ಅದ್ಭುತವಾಗಿ ಏನಾದರೂ ಸಂಭವಿಸಬಹುದು, ಯಾರಿಗೆ ತಿಳಿದಿದೆ? ರಾತ್ರಿ ಪ್ರಪಂಚದ ದೀರ್ಘ ಮತ್ತು ಸಂಕೀರ್ಣ ಇತಿಹಾಸದ ಪ್ರಮುಖ ಕ್ಷಣಗಳಲ್ಲಿ ಒಂದಾಗಲಿದೆ.

47 ವರ್ಷಗಳ ಸುಲಿಗೆ, ಭ್ರಷ್ಟಾಚಾರ ಮತ್ತು ಸಾವು ಅಂತಿಮವಾಗಿ ಕೊನೆಗೊಳ್ಳುತ್ತದೆ. ದೇವರು ಇರಾನ್‌ನ ಮಹಾನ್ ಜನರನ್ನು ಆಶೀರ್ವದಿಸಲಿ ಎಂದು ಬರೆದಿದ್ದಾರೆ.

ಹಾರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸಬೇಕು ಅಥವಾ ಒಪ್ಪಂದಕ್ಕೆ ಸಹಿ ಹಾಕಲು ಡೊನಾಲ್ಡ್ ಟ್ರಂಪ್ ಇರಾನ್‌ಗೆ ಅಮೆರಿಕ ಕಾಲಮಾನ ಮಂಗಳವಾರ ರಾತ್ರಿ 8 ಗಂಟೆ(ಭಾರತೀಯ ಕಾಲಮಾನ ಬುಧವಾರ ಬೆಳಗ್ಗೆ 6:30) ಡೆಡ್‌ಲೈನ್ ನೀಡಿದ್ದಾರೆ.

ಈ ಗಡುವು ಮೀರಿದರೆ ಇರಾನ್‌ನ ವಿದ್ಯುತ್ ಸ್ಥಾವರ ಮತ್ತು ಸೇತುವೆಗಳ ಮೇಲೆ ದಾಳಿ ನಡೆಸುವುದಾಗಿ ಎಚ್ಚರಿಸಿದ್ದಾರೆ. ಸ್ರೇಲ್ ಜೊತೆ ಸೇರಿ ಫೆಬ್ರವರಿ 28ರಂದು ಅಮೆರಿಕ ಇರಾನ್ ಮೇಲೆ ದಾಳಿ ಆರಂಭಿಸಿತ್ತು. ಇರಾನ್‌ನ ಸುಪ್ರೀಂ ನಾಯಕನನ್ನು ಕೊಂದು, ಇರಾನ್ ಮೇಲೆ ಡ್ರೋನ್ ದಾಳಿ ನಡೆಸಿದರೆ ಈ ಯುದ್ಧ ಒಂದೆರಡು ದಿನಗಳಲ್ಲೇ ಮುಗಿದು ಹೋಗುತ್ತದೆ ಎಂಬ ಲೆಕ್ಕಾಚಾರ ಟ್ರಂಪ್‌ದಾಗಿತ್ತು. ಆದರೆ, ಸುಪ್ರೀಂ ನಾಯಕ ಸೇರಿದಂತೆ ಮಿಲಿಟರಿಯ ಮುಖ್ಯಸ್ಥರನ್ನೆಲ್ಲ ಕಳೆದುಕೊಂಡರೂ ಇರಾನ್ ಕಂಗೆಡದೆ ಅಮೆರಿಕ ಮತ್ತು ಇಸ್ರೇಲ್‌ನ ವಾಯುನೆಲೆಗಳನ್ನೆಲ್ಲ ಉಡೀಸ್ ಮಾಡಿತ್ತು.

ನಾವು ಸಂಪೂರ್ಣ ನಾಶವಾದರೂ ಪರವಾಗಿಲ್ಲ, ನಮ್ಮ ಶತ್ರುಗಳು ನಮ್ಮ ಅರ್ಧದಷ್ಟಾದರೂ ನಾಶವಾಗಬೇಕೆಂಬ ಹಠ ತೊಟ್ಟ ಇರಾನ್ ಯಾವೆಲ್ಲ ರೀತಿಯಲ್ಲಿ ಸಾಧ್ಯವೋ ಆ ರೀತಿಯಲ್ಲೆಲ್ಲ ವಿಶ್ವದ ದೊಡ್ಡಣ್ಣ ಡೊನಾಲ್ಡ್ ಟ್ರಂಪ್ ನಿದ್ರೆಗೆಡಿಸಿತ್ತು.


ಈ ಯುದ್ಧ ಶುರುವಾಗಿ ತಿಂಗಳೇ ಕಳೆದರೂ ಮೂರೂ ದೇಶಗಳು ಸುಮ್ಮನಾಗುವ ಲಕ್ಷಣಗಳೇ ಕಾಣುತ್ತಿಲ್ಲ.

ಇದರ ನಡುವೆ ಕೊನೆಯ ಅವಕಾಶವಾಗಿ ಕದನವಿರಾಮದ ಒಪ್ಪಂದಕ್ಕೆ ಒಪ್ಪಿಗೆ ನೀಡಲು ಅಮೆರಿಕ ಇರಾನ್‌ಗೆ ನೀಡಿದ್ದ ಗಡುವು ಅಮೆರಿಕದ ಕಾಲಮಾನದ ಪ್ರಕಾರ ಇಂದು ರಾತ್ರಿ ಹಾಗೂ ಭಾರತೀಯ ಕಾಲಮಾನದ ಪ್ರಕಾರ ನಾಳೆ ಬೆಳಗ್ಗೆ 5.30ಕ್ಕೆ ಮುಕ್ತಾಯವಾಗಲಿದೆ. ಈ ಹಿನ್ನೆಲೆಯಲ್ಲಿ ಕೊನೆಯ ಎಚ್ಚರಿಕೆ ನೀಡಿರುವ ಟ್ರಂಪ್ ಇಂದು ರಾತ್ರಿ ಇರಾನ್‌ನ ನಾಗರಿಕತೆಯೇ ನಾಶವಾಗಲಿದೆ. ಇರಾನ್ ಮತ್ತೆ ಎದ್ದುಬರಲು ಸಾಧ್ಯವೇ ಇಲ್ಲ, ಇರಾನ್ ಎಂಬ ದೇಶ ವಿಶ್ವದ ಭೂಪಟದಿಂದಲೇ ಮಾಯವಾಗಲಿದೆ ಎಂದು ಹೇಳಿಕೆ ನೀಡಿದ್ದಾರೆ.

ಇರಾನ್ ವಿರುದ್ಧ ಇದುವರೆಗೆ ಟ್ರಂಪ್ ನೀಡಿದ ಪ್ರಬಲ ಬೆದರಿಕೆಗಳಲ್ಲಿ ಇದು ಒಂದಾಗಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್ ಕದನವಿರಾಮಕ್ಕೆ ಒಪ್ಪದಿದ್ದರೆ ಆಗುವ ವಿನಾಶಕಾರಿ ಪರಿಣಾಮಗಳ ಬಗ್ಗೆ ಎಚ್ಚರಿಕೆ ನೀಡಿದ್ದಾರೆ. ಇಂದು ರಾತ್ರಿ ಇರಾನ್‌ನ ನಾಗರಿಕತೆಯು ಸಂಪೂರ್ಣ ನಾಶವಾಗಬಹುದು ಎಂದು ಬೆದರಿಕೆ ಹಾಕಿದ್ದಾರೆ.

ಟ್ರೂತ್ ಸೋಶಿಯಲ್ ಬಗ್ಗೆ ಟ್ರಂಪ್ ಈ ಬಗ್ಗೆ ಬರೆದಿದ್ದಾರೆ. "ಇರಾನ್‌ನ ಇಡೀ ನಾಗರಿಕತೆಯು ಇಂದು ರಾತ್ರಿ ಸಾಯುತ್ತದೆ, ಮತ್ತೆಂದೂ ಇರಾನ್ ಹಿಂತಿರುಗುವುದಿಲ್ಲ. ಆ ರೀತಿ ಆಗಬೇಕೆಂದು ನಾನು ಬಯಸುವುದಿಲ್ಲ. ಆದರೆ ಆ ರೀತಿ ಆಗುವ ಸಾಧ್ಯತೆಯೂ ಇಲ್ಲದಿಲ್ಲ" ಎಂದು ಟ್ರಂಪ್ ಎಚ್ಚರಿಸಿದ್ದಾರೆ. "ಇಂದು ರಾತ್ರಿ ಏನಾಗಲಿದೆ ಎಂಬುದು ಯಾರಿಗೂ ತಿಳಿದಿಲ್ಲ. ಈ ರಾತ್ರಿ ಪ್ರಪಂಚದ ದೀರ್ಘ ಮತ್ತು ಸಂಕೀರ್ಣ ಇತಿಹಾಸದಲ್ಲಿ ಅತ್ಯಂತ ಪ್ರಮುಖ ಕ್ಷಣಗಳಲ್ಲಿ ಒಂದಾಗಲಿದೆ. 47 ವರ್ಷಗಳ ಸುಲಿಗೆ, ಭ್ರಷ್ಟಾಚಾರ ಮತ್ತು ಸಾವು ಅಂತಿಮವಾಗಿ ಕೊನೆಗೊಳ್ಳುತ್ತದೆ. ಇರಾನ್‌ನ ಜನರನ್ನು ದೇವರು ಆಶೀರ್ವದಿಸಲಿ!" ಎಂದು ಅವರು ಹೇಳಿದ್ದಾರೆ.

## ಪ್ರಜ್ಞಾಹೀನ ಸ್ಥಿತಿಯಲ್ಲಿ ಇರಾನ್ ಸರ್ವೋಚ್ಛ ನಾಯಕ



ಟೆಹ್ರಾನ್: ಅಮೆರಿಕದ ಕದನ ವಿರಾಮಕ್ಕೆ ಒಪ್ಪದ ಇರಾನ್ ಮೇಲೆ ಭೀಕರ ದಾಳಿಯ ಎಚ್ಚರಿಕೆಯನ್ನು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೊಟ್ಟಿದ್ದಾರೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲೇ ಇರಾನ್‌ಗೆ ದೊಡ್ಡ ಆಘಾತ ಎದುರಾಗಿದೆ. ಇರಾನ್‌ನ ಸರ್ವೋಚ್ಛ ನಾಯಕ ಮೊಜ್ತಬಾ ಖಮೇನಿ ಪ್ರಜ್ಞಾಹೀನರಾಗಿದ್ದಾರೆ ಎಂದು ಇಸ್ರೇಲ್–ಅಮೆರಿಕ ಗುಪ್ತಚರ ಮೂಲಗಳನ್ನಾಧರಿಸಿ ಮಾಧ್ಯಮಗಳು ವರದಿ ಮಾಡಿವೆ.

ಮೊಜ್ತಬಾ ಪ್ರಜ್ಞಾಹೀನ ಸ್ಥಿತಿಗೆ ತಲುಪಿದ್ದಾರೆ. ಸದ್ಯ ಅವರನ್ನ ಕೋಮ್ ನಗರದ ರಹಸ್ಯ ಸ್ಥಳದಲ್ಲಿರಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅಮೆರಿಕ ದಾಳಿ ಎಚ್ಚರಿಕೆ ನಡುವೆಯೇ ಈ ಘಟನೆ ಸಂಭವಿಸಿದ್ದು, ನಾಯಕತ್ವದ ಬಗ್ಗೆ ಪ್ರಶ್ನೆಗಳೂ ಎದ್ದಿವೆ. ಆದ್ರೆ ಈ ಬಗ್ಗೆ ಇರಾನ್ ಸರ್ಕಾರವಾಗಲಿ, ಸೇನೆಯಾಗಲಿ ಅಧಿಕೃತ ಮಾಹಿತಿ ಹಂಚಿಕೊಂಡಿಲ್ಲ.

ಅಮೆರಿಕ ಮತ್ತು ಇಸ್ರೇಲ್ ಗುಪ್ತಚರ ಸಂಸ್ಥೆಯ ಮೂಲಗಳನ್ನಾಧರಿಸಿ ವರದಿ ಮಾಡಲಾಗಿದೆ. ಗಲ್ಫ್ ರಾಷ್ಟ್ರಗಳೊಂದಿಗೆ ಹಂಚಿಕೊಳ್ಳಲಾದ ಮಾಹಿತಿ ಪ್ರಕಾರ, ಮೊಜ್ತಬಾ ಖಮೇನಿ ಪ್ರಜ್ಞಾಹೀನ ಸ್ಥಿತಿಗೆ ತಲುಪಿದ್ದಾರೆ. ಗಂಭೀರ ವೈದ್ಯಕೀಯ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಹೀಗಾಗಿ ಕೋಮ್ ನಗರದಲ್ಲಿರಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಇದರಿಂದಾಗಿ ಇರಾನ್ ಆಡಳಿತವು ಯುದ್ಧಕ್ಕೆ ಸಂಬಂಧಿಸಿದ ಮುಂದಿನ ನಿರ್ಧಾರ ತೆಗೆದುಕೊಳ್ಳಲು ಅಥವಾ ಜವಾಬ್ದಾರಿಗಳನ್ನ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ ಎಂದು ಹೇಳಲಾಗ್ತಿದೆ. ಮತ್ತೊಂದು ಕಡೆ ಫೆ.28 ರಂದು ಅಮೆರಿಕ ಇಸ್ರೇಲ್ ಜಂಟಿಯಾಗಿ ನಡೆಸಿದ ದಾಳಿಯಲ್ಲಿ ಹತ್ಯೆಯಾದ ಅಯತೊಲ್ಲಾ ಅಲಿ ಖಮೇನಿ ಅವರ ಸಮಾಧಿಗೆ ಸಿದ್ಧತೆಗಳು ನಡೆಯುತ್ತಿವೆ. ಕೋಮ್ ನಗರದಲ್ಲಿ ಬೃಹತ್ ಸಮಾಧಿ ನಿರ್ಮಿಸಲು ತಯಾರಿಗಳು ಶುರುವಾಗಿದೆ ಎಂದು ವರದಿಗಳು ತಿಳಿಸಿವೆ.

## ಬಹಿರಂಗ ಪ್ರಚಾರಕ್ಕೆ ತೆರೆ

ಬೆಂಗಳೂರು: ಆಡಳಿತರೂಢಾ ಕಾಂಗ್ರೆಸ್ ಹಾಗೂ ಪ್ರತಿಪಕ್ಷವಾದ ಬಿಜೆಪಿ ನಡುವೆ ಜಿದ್ದಾಜಿದ್ದಿಯ ಹೋರಾಟದ ಕಣವಾಗಿರುವ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಬಹಿರಂಗ ಪ್ರಚಾರಕ್ಕೆ ಮಂಗಳವಾರ ಸಂಜೆ ತೆರೆ ಬಿದ್ದಿದೆ. ಕೊನೆ ಕ್ಷಣದ ಗೆಲುವಿನ ರಣತಂತ್ರಕ್ಕೆ ಅಭ್ಯರ್ಥಿಗಳು ಮೊರೆ ಹೋಗಿದ್ದಾರೆ.

ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಮತದಾನ ಏ. 9 ರಂದು ನಡೆಯಲಿದ್ದು, ಇಂದು ಸಂಜೆ 6ಗಂಟೆಗೆ ಬಹಿರಂಗ ಪ್ರಚಾರ ಅಂತ್ಯವಾಯಿತು., ಕ್ಷೇತ್ರದ ಮತದಾರರಲ್ಲದವರು ಕ್ಷೇತ್ರ ಬಿಟ್ಟು ತೆರಳುವಂತೆ ಚುನಾವಣಾ ಆಯೋಗ ಸೂಚನೆ ನೀಡಿದೆ. ಹಾಗಾಗಿ ಕಳೆದ ಹತ್ತು ದಿನಗಳಿಂದ ಎರಡೂ ಕ್ಷೇತ್ರಗಳಲ್ಲಿ ವಾಸ್ತವ್ಯ ಹೂಡಿ ತಮ್ಮ ಪಕ್ಷದ ಅಭ್ಯರ್ಥಿಪರ ಅಬ್ಬರದ ಪ್ರಚಾರ ನಡೆಸಿದ್ದ ಕಾಂಗ್ರೆಸ್ ಹಾಗೂ ಬಿಜೆಪಿಯ ಘಟಾನುಘಟಿ ನಾಯಕರುಗಳು ಕ್ಷೇತ್ರ ಬಿಟ್ಟು ತಮ್ಮತಮ್ಮ ಊರುಗಳಿಗೆ ಮರಳಿದ್ದಾರೆ

ಈ ಎರಡೂ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ನೇರ ಸ್ಪರ್ಧೆ ಏರ್ಪಟಿದ್ದು, ಕಾಂಗ್ರೆಸ್ ಪರವಾಗಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲ ಸೇರಿದಂತೆ ಸಚಿವ ಸಂಪುಟದ ಹಲವು ಸಚಿವರು ಹಾಗೂ ಕಾಂಗ್ರೆಸ್‌ನ ಹಲವು ಶಾಸಕರುಗಳು ಕ್ಷೇತ್ರಗಳಲ್ಲೇ ಬೀಡು ಬಿಟ್ಟು ತಮ್ಮ ಅಭ್ಯರ್ಥಿಪರ ಪ್ರಚಾರ ನಡೆಸಿದ್ದರು. ಕಾಂಗ್ರೆಸ್ ಪಕ್ಷದ ಪ್ರಚಾರಕ್ಕೆ ಸವಾಸೇರು ಎಂಬಂತೆ ಬಿಜೆಪಿ ಸಹ ಅಬ್ಬರದ ಪ್ರಚಾರ ನಡೆಸಿತ್ತು.

ಬಿಜೆಪಿ ಅಭ್ಯರ್ಥಿಪರ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ, ಸದಾನಂದಗೌಡ, ಬಸವರಾಜಬೊಮ್ಮಾಯಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಪ್ರತಿಪಕ್ಷ ನಾಯಕರುಗಳಾದ ಆರ್. ಅಶೋಕ್, ಚಲವಾದಿ ನಾರಾಯಣಸ್ವಾಮಿ, ಕೇಂದ್ರ ಸಚಿವರುಗಳಾದ ಪ್ರಹ್ಲಾದ್ ಜೋಷಿ, ವಿ.ಸೋಮಣ್ಣ, ಶೋಭಾ ಕರಂದ್ಲಾಜೆ ಹಾಗೂ ಹೆಚ್.ಡಿ. ಕುಮಾರಸ್ವಾಮಿ ಅವರು ಪ್ರಚಾರ ನಡೆಸಿದ್ದರು.

ಪ್ರಚಾರ ಸಂದರ್ಭದಲ್ಲಿ ಎರಡೂ ಪಕ್ಷಗಳ ನಾಯಕರುಗಳ ವಾಕ್ಸಮರ ಸಹ ಬಿರುಸಾಗಿ ಆರೋಪ ಪ್ರತ್ಯಾರೋಪಗಳಲ್ಲಿ ತೊಡಗಿದ್ದರು. ಇಂದು ಬಹಿರಂಗ ಪ್ರಚಾರ ಅಂತ್ಯವಾಗಿದೆ, ನಾಳೆ ಮನೆ ಮನೆಯ ಪ್ರಚಾರಕ್ಕೆ ಅವಕಾಶವಿದ್ದು, ಕೊನೆಘಳಿಗೆಯ ಕೊನೆ ಘಳಿಗೆಯ ಕಸರತ್ತು ನಡೆಸಿದ್ದಾರೆ.

## ಮನೆಯಿಂದ ಹೊರ ಬರದಂತೆ ಕಟ್ಟಪ್ಪಣೆ

ನವದೆಹಲಿ: ಇರಾನ್‌ನಲ್ಲಿ ರಾತ್ರಿ ವಿನಾಶವನ್ನುಂಟು ಮಾಡುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೆದರಿಕೆ ಹಾಕಿದ್ದಾರೆ. ಏತನ್ಮಧ್ಯೆ, ಇಸ್ರೇಲ್ ಸೇನೆಯು ಸೋಮವಾರ ರಾತ್ರಿಯಿಂದ ಇರಾನ್‌ನಾದ್ಯಂತ ಭಾರೀ ಬಾಂಬ್ ದಾಳಿ ನಡೆಸುತ್ತಿದೆ.


ಏತನ್ಮಧ್ಯೆ, ಭಾರತದ ವಿದೇಶಾಂಗ ಸಚಿವಾಲಯ ಮತ್ತು ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ತನ್ನ ನಾಗರಿಕರಿಗೆ ತುರ್ತು ಸೂಚನೆಗಳನ್ನು ನೀಡಿದೆ. ಮನೆಯಿಂದ ಹೊರಗೆ ಬರದಂತೆ, ಸೇನಾ ನೆಲೆಗಳಿಂದ ದೂರ ಇರುವಂತೆ ಸಲಹೆ ನೀಡಿದೆ. ರಾಯಭಾರ ಕಚೇರಿಯು ನಾಲ್ಕು ಸಹಾಯವಾಣಿ ಸಂಖ್ಯೆಗಳನ್ನು ಸಹ ಬಿಡುಗಡೆ ಮಾಡಿದೆ. ಭಾರತೀಯ ನಾಗರಿಕರು ಮಾಹಿತಿಯನ್ನು ಪಡೆಯಲು ಇವುಗಳಿಗೆ ಕರೆ ಮಾಡಬಹುದು.

ಇರಾನ್‌ನಲ್ಲಿ ಸಂಭವಿಸುತ್ತಿರುವ ಉದ್ವಿಗ್ನತೆಯನ್ನು ಗಮನದಲ್ಲಿಟ್ಟುಕೊಂಡು, ಪ್ರಸ್ತುತ ಇರಾನ್‌ನಲ್ಲಿರುವ ಭಾರತೀಯ ನಾಗರಿಕರು ತಾವು ಇರುವ ಸ್ಥಳದಲ್ಲಿಯೇ ಉಳಿಯಲು ಮತ್ತು ಪ್ರಯಾಣವನ್ನು ತಪ್ಪಿಸಲು ಸೂಚಿಸಲಾಗಿದೆ ಎಂದು ವಿದೇಶಾಂಗ ಸಚಿವಾಲಯ ಸೂಚಿಸಿದೆ. ಭಾರತೀಯ ರಾಯಭಾರ ಕಚೇರಿಯೊಂದಿಗೆ ಸಮನ್ವಯತೆ ಮತ್ತು ರಾಯಭಾರ ಕಚೇರಿಯಿಂದ ಸ್ಪಷ್ಟ ಮಾರ್ಗದರ್ಶನ ಪಡೆದ ನಂತರವೇ ಇರಾನ್‌ನೊಳಗೆ ಅಥವಾ ಗಡಿ ಪ್ರವೇಶಿಸುವುದನ್ನು ಪರಿಗಣಿಸಬೇಕು ಎಂದು ಸಚಿವಾಲಯ ಸಲಹೆ ನೀಡಿದೆ.

ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ನಾಲ್ಕು ಸಹಾಯವಾಣಿ ಸಂಖ್ಯೆಗಳನ್ನು ಬಿಡುಗಡೆ ಮಾಡಿದೆ. ಭಾರತೀಯ ನಾಗರಿಕರು ಈ ಸಂಖ್ಯೆಗಳ ಮೂಲಕ ರಾಯಭಾರ ಕಚೇರಿಯನ್ನು ಸಂಪರ್ಕಿಸಬಹುದು.

# ಆಟೋ ಚಾಲಕರಿಂದ ಸಚಿವರ ಮನೆಗೆ ಮುತ್ತಿಗೆ

ಬೆಂಗಳೂರು: ಅತ್ತ ಮಧ್ಯಪ್ರಾಚ್ಯದಲ್ಲಿ ಇರಾನ್–ಇಸ್ರೇಲ್ ನಡುವಿನ ಸಂಘರ್ಷ ನಿಲ್ಲುತ್ತಿಲ್ಲ. ಇತ್ತ ರಾಜ್ಯದಲ್ಲಿ ಬಡ ಆಟೋ ಚಾಲಕರಿಗೆ ಎದುರಾಗಿರುವ ಎಲ್‌ಪಿಜಿ ಅಭಾವ ನೀಗುತ್ತಿಲ್ಲ. ಈ ಮಧ್ಯೆ ಜನಪ್ರತಿನಿಧಿಗಳು ಚಾಲಕರಿಗೆ ದನಿ ಆಗಿ ನಿಲ್ಲುತ್ತಿಲ್ಲ. ಬಂಕ್‌ಗಳ ಎದುರು ಕಿಲೋ ಮೀಟರ್ ಉದ್ದಕ್ಕೆ ಕ್ಯೂ ನಿಂತು ಬೇಸತ್ತ ಆಟೋ ಚಾಲಕರು ಇವತ್ತು ಬೆಳ್ಳಂಬೆಳಗ್ಗೆ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್ ಮುನಿಯಪ್ಪ ನಿವಾಸಕ್ಕೆ ಮುತ್ತಿಗೆ ಹಾಕಿದ್ರು. ಸಚಿವರ ಮನೆ ಮುಂಭಾಗಕ್ಕೆ ಆಟೋಗಳನ್ನು ತಂದು ನಿಲ್ಲಿಸಿದ ಚಾಲಕರು ಆಕ್ರೋಶ ಹೊರಹಾಕಿದ್ರು.




ಸಚಿವ ಮುನಿಯಪ್ಪ ಮನೆಗೆ ಮುತ್ತಿಗೆ ಹಾಕಿದ ಆಟೋ ಚಾಲಕರು, ಗ್ಯಾಸ್ ಅಭಾವಕ್ಕೆ ಪರಿಹಾರ ಕೊಡುವಂತೆ ಆಗ್ರಹಿಸಿದ್ರು. ಬೆಂಗಳೂರಿನಲ್ಲಿ ಎಲ್ಲೂ ಎಲ್‌ಪಿಜಿ ಗ್ಯಾಸ್ ಸಿಗುತ್ತಿಲ್ಲ. ಇದರಿಂದ ಹಗಲು ರಾತ್ರಿ ಎನ್ನದೇ ಬಂಕ್‌ಗಳ ಎದುರು ಕ್ಯೂ ನಿಲ್ಲಬೇಕಾದ ಸ್ಥಿತಿ ಬಂದಿದೆ. ಆದರೂ ಗ್ಯಾಸ್ ಸಿಗುತ್ತಿಲ್ಲ. ಅಲ್ಲದೇ ಕೆಲ ಬಂಕ್‌ಗಳು ಮನಬಂದಂತೆ ಗ್ಯಾಸ್ ಬೆಲೆ ಏರಿಕೆ ಮಾಡಿದ್ದಾರೆ. ಪ್ರತಿ ಲೀಟರ್‌ಗೆ 90 ರೂಪಾಯಿಯಿಂದ 135 ರೂಪಾಯಿ ನಿಗದಿ ಮಾಡಿದ್ದಾರೆ. ಇದರಿಂದ ಚಾಲಕರ ಬದುಕು ದುಸ್ತರವಾಗಿದೆ. ಬಂಕ್‌ಗಳಲ್ಲಿ ಸಮರ್ಪಕ ಗ್ಯಾಸ್ ಪೂರೈಕೆ ಮತ್ತು ಬಂಕ್ ದರಕ್ಕೆ ಕಡಿವಾಣ ಹಾಕುವಂತೆ ಮನವಿ ಮಾಡಿದ್ರು.

ಆಟೋ ಚಾಲಕರ ಆಕ್ರೋಶದ ಮನವಿಯನ್ನ ಸ್ವೀಕರಿಸಿದ ಸಚಿವ ಮುನಿಯಪ್ಪ. ಸರ್ಕಾರ ಯಾವುದೇ ದರ ಏರಿಕೆ ಮಾಡಿಲ್ಲ. ಕೇಂದ್ರ ಸರ್ಕಾರದಿಂದ ನಿತ್ಯ ಸುಮಾರು 3 ಸಾವಿರ ಸಿಲಿಂಡರ್‌ಗಳನ್ನು ಒದಗಿಸಲಾಗ್ತಿದೆ. ಪೂರೈಕೆಯಲ್ಲಿ ಯಾವುದೇ ವ್ಯತ್ಯಾಸ ಆಗಿಲ್ಲ. ಆದರೆ ಖಾಸಗಿ ಗ್ಯಾಸ್ ಬಂಕ್‌ಗಳಲ್ಲಿ ಹೆಚ್ಚುವರಿ ದರ ವಸೂಲಿ ಮಾಡ್ತಿರುವ ಬಗ್ಗೆ ಮಾಹಿತಿ ಸಿಕ್ಕಿದ್ದು.. ಸಂಬಂಧ ಪಟ್ಟ ಬಂಕ್ ಮಾಲೀಕರನ್ನು ಕರೆದು ಸಭೆ ನಡೆಸೋದಾಗಿ ಹೇಳಿದ್ರು.

ರಾಜ್ಯದಲ್ಲಿ ಆಟೋ ಗ್ಯಾಸ್ ಸಮಸ್ಯೆ ಬಗೆಹರಿಸೋ ಬದಲು ಕೆಸರೆರಚಾಟ ಶುರುವಾಗಿದೆ.

ಬೆಳಗ್ಗೆಯಷ್ಟೇ ಕೇಂದ್ರ ಸಮರ್ಪಕವಾಗಿ ಇಂಧನ ಪೂರೈಕೆ ಮಾಡುತ್ತಿದ್ದು, ಯಾವುದೇ ವ್ಯತ್ಯಯವಾಗಿಲ್ಲ ಅಂತ ಆಹಾರ ಸಚಿವ ಕೆ.ಹೆಚ್ ಮುನಿಯಪ್ಪ ಹೇಳಿದ್ದರು. ಆದ್ರೆ, ಸೋಮವಾರ ಸಂಜೆ ಹೊತ್ತಿಗೆ ಮುನಿಯಪ್ಪ ಉಲ್ಟಾ ಹೊಡೆದಿದ್ದಾರೆ. ಕರ್ನಾಟಕಕ್ಕೆ ಗ್ಯಾಸ್ ಹಂಚಿಕೆಯಲ್ಲಿ ಭಾರೀ ಅನ್ಯಾಯವಾಗಿದ್ದು, ಕೇಂದ್ರ ತಾರತಮ್ಯ ಮಾಡುತ್ತಿದೆ ಅಂತ ದೂರಿದ್ದಾರೆ. ಎಲ್‌ಪಿಜಿ ಗ್ಯಾಸ್, ವಾಣಿಜ್ಯ ಸಿಲಿಂಡರ್, ಸಿಎನ್‌ಜಿ, ಪೆಟ್ರೋಲ್ ಹಾಗೂ ಡೀಸೆಲ್ ಎಲ್ಲವೂ ಕೇಂದ್ರದ ನಿಯಂತ್ರಣದಲ್ಲಿದ್ದು, ಕರ್ನಾಟಕಕ್ಕೆ ತಾರತಮ್ಯ ನೀಡಿ ಅನುಸರಿಸುತ್ತಿರೋದ್ರಿಂದ ಸಾರ್ವಜನಿಕರಿಗೆ ಸಂಕಷ್ಟ ಉಂಟಾಗಿದೆ ಅಂತ ಆರೋಪಿಸಿದ್ದಾರೆ. ಬೇರೆ ರಾಜ್ಯಗಳ ತರಹ ಕರ್ನಾಟಕಕ್ಕೂ ಹಂಚಿಕೆ ಮಾಡಬೇಕೆಂದು ಆಗ್ರಹಿಸಿದ್ದಾರೆ. ಈ ಸಂಬಂಧ ಕೇಂದ್ರಕ್ಕೂ ಪತ್ರ ಬರೆದಿದ್ದಾರೆ.

ಇನ್ನು ಸಚಿವ ಮುನಿಯಪ್ಪರೊಂದಿಗೆ ಸಭೆ ಬಳಿಕ ಆಟೋ ಚಾಲಕರು ಆಕ್ರೋಶ ಹೊರಹಾಕಿದ್ದಾರೆ. ಬೈ ಎಲೆಕ್ಷನ್ ಮುಗಿಯೋವರೆಗೂ ಇವರಿಗೆ ನಮ್ಮ ಕಷ್ಟ ತಿಳಿಯಲ್ಲ. ಗ್ಯಾಸ್‌ಗಾಗಿ ನಾವು ರಸ್ತೆಯಲ್ಲಿ ಮಲಗಿದ್ದೇವೆ. ಸಚಿವರು ಅಸಡ್ಡೆ ಉತ್ತರ ಕೊಟಿದ್ದಾರೆ. ನಮ್ಮ ಕಷ್ಟ ಕೇಳೋಕೆ ಸರ್ಕಾರಕ್ಕೆ ಟೈಂ ಇಲ್ಲವಾಗಿದೆ. ಎಲೆಕ್ಷನ್ ಆಗೋವರೆಗೂ ಇವರು ಏನೂ ಮಾಡೋಲ್ಲ.. ದರ ಏರಿಕೆಯಾದ್ರೂ ಯಾರೂ ಬಂಕ್ ಅವರನ್ನ ಕೇಳ್ತೀಲ್ಲ.. ಆಟೋ ದರ ಹೆಚ್ಚು ಕೇಳಿದ್ರೇ ನಮ್ಮನ್ನ ವಿಲನ್ ಮಾಡ್ತಾರೆ ಎಂದು ಆಕ್ರೋಶ ಹೊರಹಾಕಿದರು.

08/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಗ್ಯಾಸ್ ಸಮಸ್ಯೆಗೆ ಕೇಂದ್ರ ಸರ್ಕಾರವೇ ನೇರ ಹೊಣೆ: ಆಟೋ ಚಾಲಕರಿಗೆ ವಿಶೇಷ ಪ್ಯಾಕೇಜ್ ಘೋಷಿಸಿ-ಡಾ. ಆನಂದ್ ಕುಮಾರ್

ಬೆಂಗಳೂರು

ದೇಶದಲ್ಲಿ ತಲೆದೋರಿರುವ ಆಟೋ ಗ್ಯಾಸ್ ಸಮಸ್ಯೆಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವೇ ಸಂಪೂರ್ಣವಾಗಿ ಹೊಣೆಯಾಗಿದ್ದು, ತಮ್ಮದಲ್ಲದ ತಪ್ಪಿಗೆ ಹೈರಾಣಾಗಿರುವ ಆಟೋ ಚಾಲಕರಿಗೆ ಕೇಂದ್ರ ಸರ್ಕಾರ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ ಡಾ. ಆನಂದ್ ಕುಮಾರ್ ಆಗ್ರಹಿಸಿದ್ದಾರೆ.

ಎಲ್.ಪಿ.ಜಿ ಮತ್ತು ಸಿ.ಎನ್.ಜಿ ಪೂರೈಕೆ ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಜವಾಬ್ದಾರಿಯಾಗಿದ್ದು, ಸಮರ್ಪಕವಾಗಿ ನಿರ್ವಹಣೆ ಮಾಡದ ಕಾರಣದಿಂದ ಸಂಕಷ್ಟ ತಲೆದೋರಿದೆ. ಹೋಟೆಲ್ ಗಳು, ಆಥಿತ್ಯ ವಲಯ, ತರಕಾರಿ, ಕುಕ್ಕುಟೋದ್ಯಮ, ಮತ್ಸೋದ್ಯಮ, ಪ್ರವಾಸೋದ್ಯಮ ಹೀಗೆ ಪ್ರತಿಯೊಂದು ವಲಯ ತತ್ತರಿಸುತ್ತಿದೆ. ಹೆಚ್ಚಿನ ಪ್ರಮಾಣದಲ್ಲಿ ಬಾಧಿತರಾಗಿರುವವರು ಆಟೋ ಚಾಲಕರು. ಇವರ ನೆರವಿಗೆ ಕೇಂದ್ರ ಸರ್ಕಾರ ಕೂಡಲೇ ಧಾವಿಸಬೇಕು ಎಂದಿದ್ದಾರೆ.

ಅಧಿಕ ಮೌಲ್ಯದ ನೋಟುಗಳ ಅಮಾನ್ಯೀಕರಣದಿಂದ ಜನ ಸಂಕಷ್ಟಕ್ಕೆ ಸಿಲುಕಿದ್ದರು. ಕೋವಿಡ್ ಸಂದರ್ಭದಲ್ಲಿ ಜನ ಸಾಮಾನ್ಯರು ತೊಂದರೆಗೀಡಾದರು. ಇದೀಗ ಮಧ್ಯಪ್ರಾಚ್ಯ ರಾಷ್ಟ್ರಗಳ ಸಂಘರ್ಷದಿಂದ ಮತ್ತೆ ಅನಾಹುತ ಎದುರಾಗಿದೆ. ಆಟೋ ಚಾಲಕರು ಭಾರೀ ಸಂಕಷ್ಟದಲ್ಲಿದ್ದಾರೆ. ಸಾಲದ ಕಂತು ಪಾವತಿಸಲು ಸಾಧ್ಯವಾಗುತ್ತಿಲ್ಲ. ಮಕ್ಕಳ ಶಿಕ್ಷಣ ಶುಲ್ಕ ಕಟ್ಟಲು ಆಗುತ್ತಿಲ್ಲ. ದಿನದ ತುತ್ತಿನ ಚೀಲ ತುಂಬಿಸುವುದು ದುಸ್ತರವಾಗಿದೆ. ಹೀಗಾಗಿ ಪ್ರತಿಯೊಂದು ಆಟೋ ಚಾಲಕರ ಕುಟುಂಬಕ್ಕೆ ತಕ್ಷಣಕ್ಕೆ ಹತ್ತು ಸಾವಿರ ರೂ ಹಣವನ್ನು ಪರಿಹಾರದ ರೂಪದಲ್ಲಿ ನೀಡಬೇಕು. ಎಲ್.ಪಿ.ಜಿ ದರ ಹೆಚ್ಚಳವಾಗದಂತೆ ಕೂಡಲೇ ಕ್ರಮ ತೆಗೆದುಕೊಳ್ಳಬೇಕು. ಬ್ಯಾಂಕ್ ಸಾಲದ ಬಡ್ಡಿ ಮನ್ನಾ ಮಾಡಬೇಕು. ಸಾಲದ ಕಂತುಗಳ ಪಾವತಿಯನ್ನು ಒಂದು ವರ್ಷದ ಮಟ್ಟಿಗೆ ಮುಂದೂಡಬೇಕು ಎಂದು ಹೇಳಿದ್ದಾರೆ.



ಎಲ್.ಪಿ.ಜಿ, ಪಿ.ಎನ್.ಜಿ ಮತ್ತು ಸಿ.ಎನ್.ಜಿ ಅಗತ್ಯದ 90% ವರೆಗೆ ಪಶ್ಚಿಮ ಏಷ್ಯಾದಿಂದ ಆಮದು ಮಾಡಿಕೊಳ್ಳಲಾಗುತ್ತದೆ. ಮುಂದಾಲೋಚನೆ, ಮುನ್ನೆಚ್ಚರಿಕೆ ಇಲ್ಲದ ಕಾರಣದಿಂದ ಸಮಸ್ಯೆ ಎದುರಾಗಿದೆ. ಬೆಲೆ ನಿಯಂತ್ರಣಕ್ಕೆ ಸರ್ಕಾರ ಕ್ರಮ ತೆಗೆದುಕೊಂಡಿಲ್ಲ. ಇಂಧನ ದರಗಳನ್ನು ನಿಯಂತ್ರಿಸಲು ಸ್ಪಷ್ಟ ನೀತಿಯೇ ಇಲ್ಲ. ಆಟೋ ಚಾಲಕರಿಗೆ ದಿನನಿತ್ಯದ ಆದಾಯ ಕುಸಿತವಾಗಿದೆ. ಪ್ರಯಾಣಿಕರ ಮೇಲೆ ಹೆಚ್ಚುವರಿ ಭಾರ ಬೀಳುತ್ತಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಸಮನ್ವಯ ಹೆಚ್ಚಿಸಬೇಕು ಎಂದು ಹೇಳಿದ್ದಾರೆ.

ಆಟೋ ಗ್ಯಾಸ್ ಸಮಸ್ಯೆ ಕೇವಲ ಸ್ಥಳೀಯ ಸಮಸ್ಯೆಯಲ್ಲ, ಇದು ಜಾಗತಿಕ ಇಂಧನ ಸಂಕಷ್ಟ ಮತ್ತು ಕೇಂದ್ರ ಸರ್ಕಾರದ ನೀತಿ ನಿರ್ಧಾರಗಳೊಂದಿಗೆ ನೇರವಾಗಿ ಸಂಬಂಧಿಸಿದ್ದಾಗಿದೆ. ವಿದೇಶಾಂಗ ನೀತಿಯನ್ನು ಸಮರ್ಪಕವಾಗಿ ನಿರ್ವಹಿಸಿದ್ದರೆ ಇಂತಹ ಸಮಸ್ಯೆ ಎದುರಾಗುತ್ತಿರಲಿಲ್ಲ. 11 ವರ್ಷಗಳಿಂದ ಮೋದಿ ಸರ್ಕಾರ ಎಲ್ಲಾ ರಂಗಗಳಲ್ಲೂ ವಿಫಲವಾಗಿದೆ. ಆಟೋ ಗ್ಯಾಸ್ ಒಂದು ಸ್ಥಳೀಯ ಸಮಸ್ಯೆಯಷ್ಟೇ ಅಲ್ಲ. ಇದು ರಾಷ್ಟ್ರ ಮಟ್ಟದ ಇಂಧನ ನೀತಿ ಮತ್ತು ಸಾರ್ವಜನಿಕ ಸಾರಿಗೆ ವ್ಯವಸ್ಥೆಯೊಂದಿಗೆ ನೇರವಾಗಿ ಸಂಬಂಧಿಸಿದ್ದಾಗಿದೆ. ಕೇಂದ್ರ ಸರ್ಕಾರವು ದೀರ್ಘಕಾಲೀನ ಪರಿಹಾರಗಳನ್ನು ರೂಪಿಸುವುದು ಅಗತ್ಯ ಎಂದು ಡಾ. ಆನಂದ್ ಕುಮಾರ್ ಒತ್ತಾಯಿಸಿದ್ದಾರೆ.

## ಬಾಬು ಜಗಜೀವನರಾಂ ದೇಶದ ಸಮಾನತೆಗಾಗಿ ದುಡಿದಿದ್ದಾರೆ

ಕೋಲಾರ

ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಂ ಇಬ್ಬರು ದೇಶದ ಎರಡು ಕಣ್ಣುಗಳು ಇದ್ದಂತೆ ಅವರು ಸಮಾಜದಲ್ಲಿ ಜಾತಿ ಬೇಧ ಮರೆತು ಸಮಾನತೆಗಾಗಿ ಶ್ರಮಿಸಿದ್ದ ಶ್ರೇಷ್ಠ ರಾಜಕೀಯ ಪಟುಗಳು ಇವತ್ತು ಜಗಜೀವನರಾಂ ಅವರ ಆದರ್ಶಗಳು ನಮಗೆಲ್ಲ ಮಾದರಿ ಎಂದು ರಾಜ್ಯ ಆಹಾರ ನಿಗಮದ ಉಪಾಧ್ಯಕ್ಷ ಊರಬಾಗಿಲು ಶ್ರೀನಿವಾಸ್ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಭಾನುವಾರ ನಡೆದ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ಅವರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಅವರಿಗೆ ಸಿಕ್ಕಂತಹ ಅಧಿಕಾರವನ್ನು ದೇಶದ ಅಭಿವೃದ್ಧಿ ಮತ್ತು ಸಮಸ್ಯೆಗಳ ನಿವಾರಣೆಗಾಗಿ ಅವಿರತವಾಗಿ ಶ್ರಮಿಸಿದ್ದ ಮಹಾನ್ ನಾಯಕರಾಗಿದ್ದರು ಇವತ್ತು ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್, ಸಚಿವ ಕೆ.ಹೆಚ್ ಮುನಿಯಪ್ಪ ಅವರು ಜಗಜೀವನರಾಂ ಹಾದಿಯಲ್ಲಿ ಆಡಳಿತ ನಡೆಸುತ್ತಿದ್ದಾರೆ ಎಂದರು.

ಜಿಲ್ಲಾ ಕಾಂಗ್ರೆಸ್ ಕಿಸಾನ್ ಘಟಕದ ಅಧ್ಯಕ್ಷ ಸೀತಿಹೊಸೂರು ಮುರಳಿಗೌಡ ಮಾತನಾಡಿ, ಸಮಾಜದಲ್ಲಿ ಅಸ್ಪೃಶ್ಯತೆ, ಬಡತನ, ನಿರುದ್ಯೋಗ ಆಹಾರದ ಕೊರತೆಯಂತಹ ಸಮಸ್ಯೆಗಳು ನಿವಾರಿಸುವಲ್ಲಿ ಬಾಬೂಜಿ ಅವರ ಕೊಡುಗೆ ಅಪಾರವಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮೀನಾರಾಯಣ ಮಾತನಾಡಿ ಜಗಜೀವನರಾಂ ಅವರು ಸತತ ಮೂವತ್ತು ವರ್ಷಗಳು ಸಂಪುಟ ದರ್ಜೆ ಸಚಿವರಾಗಿ ದೇಶದ ಅಭಿವೃದ್ಧಿಗಾಗಿ ಶ್ರಮಿಸಿದ ಮಹಾನ್ ನಾಯಕ. ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ, ಶಿಕ್ಷಣದಿಂದ ಪ್ರತಿಯೊಬ್ಬ ವ್ಯಕ್ತಿಯೂ ಜೀವನದಲ್ಲಿ ಬದಲಾವಣೆ ಕಾಣಲು ಸಾಧ್ಯವಿದೆ ಎಂಬುದನ್ನು ತೋರಿಸಿದ್ದಾರೆ ಎಂದರು.

ನಗರ ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಪ್ರಸಾದ್ ಬಾಬು ಮಾತನಾಡಿ ಕಾಂಗ್ರೆಸ್ ಪಕ್ಷದಿಂದ ಬೆಳೆದು ಇವತ್ತು ಎಲ್ಲಾ ವಿಭಾಗದಲ್ಲಿ ಫಲಾನುಭವಿಗಳು ಕಾಂಗ್ರೆಸ್ ಬಗ್ಗೆ ಗೌರವ ಅಭಿಮಾನ ಇದ್ದಿದ್ದರೆ ಕಾಂಗ್ರೆಸ್ ಕಛೇರಿಗೆ ಬಂದು ಇಂತಹ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದರು ಅವರು ಬೆಳೆದ ಮೇಲೆ ಕಾಂಗ್ರೆಸ್ ಕಛೇರಿಯನ್ನು ನಿರ್ಲಕ್ಷ್ಯ ಮಾಡಿಕೊಂಡು ಹೋಗುತ್ತಿದ್ದಾರೆ ಇಲ್ಲಿ ನಿಷ್ಠಾವಂತ ಕಾರ್ಯಕರ್ತರನ್ನು ಕಡೆಗಣಿಸಿ ಪಕ್ಷ ವಿರೋಧಿಗಳಿಗೆ ಅಧಿಕಾರ ಸಿಕ್ಕಿದೆ ಇದು ಸರಿಯಲ್ಲ ಇದು ಸರಿಪಡಿಸಿಕೊಂಡು ಹೋಗಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಎಸ್ಸಿ ಘಟಕದ ಅಧ್ಯಕ್ಷ ಕೆ.ಜಯದೇವ್, ಮಹಿಳಾ ಘಟಕದ ಅಧ್ಯಕ್ಷೆ ಹೇಮಾಮಾಲಿನಿ, ನಗರಸಭೆ ಮಾಜಿ ಸದಸ್ಯರಾದ ಮುರಳಿಗೌಡ, ಸಿ.ಸೋಮಶೇಖರ್, ಮುಖಂಡರಾದ ಕೆ.ಆರ್ ತ್ಯಾಗರಾಜ್, ವೆಂಕಟಪತಿ, ಓಬಿಸಿ ಮಂಜುನಾಥ್, ಪ್ಯಾರೇಜಾನ್, ಮಾಲಾ, ಮಂಜುಳಾ, ನಾಗರಾಜಗೌಡ, ತಿರುಮಲೇಶ್, ಶಂಕರಪ್ಪ, ನಾಯ್ಡು, ಸಂಜೀವಪ್ಪ, ಹರೀಷ್ ಮುಂತಾದವರು ಇದ್ದರು.

## ಕಾಲು ಬಾಯಿ ರೋಗದ ಲಸಿಕಾ ಅಭಿಯಾನ

ಕೋಲಾರ

ಇದೇ ಏಪ್ರಿಲ್ 23 ರಿಂದ ಮೇ 22 ರವರೆಗೆ ಜಿಲ್ಲೆಯಲ್ಲಿ 9ನೇ ಸುತ್ತಿನ ಕಾಲು ಬಾಯಿ ರೋಗದ ಉಚಿತ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದರು.

ಅವರು ಇಂದು ತಮ್ಮ ಕಚೇರಿಯಲ್ಲಿ ಕಾಲುಬಾಯಿ ರೋಗ ಲಸಿಕೆ ಕುರಿತು ಹಮ್ಮಿಕೊಳ್ಳಲಾದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಕೋಲಾರ ವತಿಯಿಂದ ಹಮ್ಮಿಕೊಳ್ಳಲಾದ ಈ ಅಭಿಯಾನದಲ್ಲಿ ರೈತರು, ಹಾಲು ಉತ್ಪಾದಕರ ಸಂಘಗಳು ಭಾಗವಹಿಸಿ ತಮ್ಮ ಪಶುಗಳಿಗೆ ಕಾಲುಬಾಯಿ ರೋಗದ ಲಸಿಕೆ ಹಾಕಿಸುವುದರ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಅವರು ಕೋರಿದರು.

ಜಾನುವಾರುಗಳಿಗೆ ಆರೋಗ್ಯ ಸಮಸ್ಯೆ ಉಂಟಾದಲ್ಲಿ 1962 ಪಶು ಸಹಾಯವಾಣಿಗೆ ಕರೆ ಮಾಡಿ ಉಚಿತ ಆಂಬುಲೆನ್ಸ್ ಸೇವೆ ಪಡೆಯಬೇಕೆಂದರು.

ನಂತರ ಮಾತನಾಡಿದ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರಾದ ಡಾ|| ಜಿ.ಎಂ. ರಮೇಶ್, ಕಾಲು ಬಾಯಿ ರೋಗವು ಎತ್ತು, ಹೋರಿ, ಹಸು, ಎಮ್ಮೆ ಮತ್ತು ಹಂದಿಗಳಲ್ಲಿ ಉಂಟಾದರೆ ಆರ್ಥಿಕತೆ ನಷ್ಟ ಮಾಡುತ್ತದೆ. ಅಲ್ಲದೆ ರೋಗದಿಂದ ಗುಣಮುಖವಾದ ಜಾನುವಾರುಗಳಲ್ಲಿ ಗರ್ಭ ಕಟ್ಟುವಿಕೆಯಲ್ಲಿ ವಿಳಂಬ ಉಂಟಾಗುತ್ತದೆ ಹಾಗೂ ಹಾಲಿನ ಇಳುವರಿಯಲ್ಲಿ ಇಳಿಮುಖ ಉಂಟಾಗುವ ಸಾಧ್ಯತೆ ಇರುತ್ತದೆ. ರೋಗದಿಂದ ಪೂರ್ಣ ಸುರಕ್ಷತೆಗಾಗಿ 3 ತಿಂಗಳ ಮೇಲ್ಪಟ್ಟ ಎಲ್ಲ ಜಾನುವಾರುಗಳಿಗೆ ಲಸಿಕೆ ಹಾಕುವುದು ಅಗತ್ಯವಿದೆ ಎಂದರು.

ಈ ಕಾಲು ಬಾಯಿ ರೋಗದ ಲಸಿಕೆಯನ್ನು ವರ್ಷಕ್ಕೆ ಎರಡು ಬಾರಿ ಹಾಕಲಾಗುತ್ತದೆ. ಒಂದು ತಿಂಗಳು ನಡೆಯುವ ಈ ಅಭಿಯಾನದಲ್ಲಿ ಲಸಿಕೆದಾರರು ಬೆಳಿಗ್ಗೆ 6 ಗಂಟೆಯಿಂದ 9 ರವರೆಗೆ ಲಸಿಕೆ ಹಾಕಲಿದ್ದಾರೆ. ಸುಮಾರು 370 ಲಸಿಕೆದಾರರಿಗೆ ಈ ಕುರಿತು ತರಬೇತಿ ಸಹ ನೀಡಲಾಗಿದೆ. ಈ ಬಾರಿ ಭಾರತ್ ಪಶುಧನ್ ಆ್ಯಪ್‌ನಲ್ಲಿ ಲಸಿಕೆದಾರರು ಲಸಿಕೆ ಹಾಕಿದ ಮಾಹಿತಿಯನ್ನು ಅಪ್‌ಲೋಡ್ ಮಾಡಲು ಅವಕಾಶ ಇರುತ್ತದೆ.

ಈ ಅಭಿಯಾನದಲ್ಲಿ ದಿನಕ್ಕೆ 7500 ಜಾನುವಾರುಗಳಿಗೆ ಲಸಿಕೆ ಹಾಕುವ ಗುರಿ ಹೊಂದಿದ್ದು, ಒಟ್ಟು 2,10,143 ಜಾನುವಾರುಗಳಿಗೆ ಲಸಿಕೆ ಹಾಕಲಾಗುವುದು. ಕಳೆದ ಬಾರಿ ಈ ಕಾಲು ಬಾಯಿ ಲಸಿಕಾ ಕಾರ್ಯಕ್ರಮದಲ್ಲಿ ಶೇ.100 ರಷ್ಟು ಸಾಧನೆ ಮಾಡಲಾಗಿದೆ. ಅಲ್ಲದೆ 1962 ಪಶು ಆ್ಯಂಬುಲೆನ್ಸ್ ಸಹಾಯವಾಣಿ ಕಾರ್ಯ ನಿರ್ವಹಿಸುತ್ತಿದೆ. ಹೆಚ್ಚಿನ ಮಾಹಿತಿಗೆ ಸಾರ್ವಜನಿಕರು 8277100200 ಅನ್ನು ಸಂಪರ್ಕಿಸಬಹುದೆಂದು ತಿಳಿಸಿದರು.

ಈ ಅಭಿಯಾನದಲ್ಲಿ ದಿನಕ್ಕೆ 7500 ಜಾನುವಾರುಗಳಿಗೆ ಲಸಿಕೆ ಹಾಕುವ ಗುರಿ ಹೊಂದಿದ್ದು, ಒಟ್ಟು 2,10,143 ಜಾನುವಾರುಗಳಿಗೆ ಲಸಿಕೆ ಹಾಕಲಾಗುವುದು. ಕಳೆದ ಬಾರಿ ಈ ಕಾಲು ಬಾಯಿ ಲಸಿಕಾ ಕಾರ್ಯಕ್ರಮದಲ್ಲಿ ಶೇ.100 ರಷ್ಟು ಸಾಧನೆ ಮಾಡಲಾಗಿದೆ. ಅಲ್ಲದೆ 1962 ಪಶು ಆ್ಯಂಬುಲೆನ್ಸ್ ಸಹಾಯವಾಣಿ ಕಾರ್ಯ ನಿರ್ವಹಿಸುತ್ತಿದೆ. ಹೆಚ್ಚಿನ ಮಾಹಿತಿಗೆ ಸಾರ್ವಜನಿಕರು 8277100200 ಅನ್ನು ಸಂಪರ್ಕಿಸಬಹುದೆಂದು ತಿಳಿಸಿದರು.

ಜಿಲ್ಲೆಯಲ್ಲಿ 193694 ದನ ಹಾಗೂ 16449 ಎಮ್ಮೆಗಳಿಗೆ, ಒಟ್ಟು 210143 ಜಾನುವಾರುಗಳಿಗೆ ಉಚಿತ ಲಸಿಕೆ ನೀಡುವ ಗುರಿ ಹೊಂದಿದ್ದೇವೆ, ಜಿಲ್ಲೆಯಲ್ಲಿ ಒಟ್ಟು 69 ಲಸಿಕಾ ಮೇಲ್ವಿಚಾರಕರು ಹಾಗೂ 358 ಲಸಿಕಾದಾರರನ್ನು ಒಳಗೊಂಡ ತಂಡಗಳನ್ನು ರಚಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ 9 ನೇ ಸುತ್ತಿನ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮದ ಕರಪತ್ರ ಮತ್ತು ಭಿತ್ತಿಪತ್ರ ಬಿಡುಗಡೆ ಮಾಡಿದರು.ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವ ಹಣಾಧಿಕಾರಿಗಳಾದ ಪ್ರವೀಣ್.ಪಿ ಬಾಗೇವಾಡಿ, ಕೋಲಾರ ಜಿಲ್ಲಾ ಹಾಲು ಒಕ್ಕೂಟ ಮಂಡಳಿಯ ವ್ಯವಸ್ಥಾಪಕರಾದ ಡಾ. ಚೇತನ್, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಗೋಪಾಲನ್ ಆರ್ಕೇಡ್ ಮಾಲ್‌ನಲ್ಲಿ ಡಿಮಾರ್ಟ್ ಆರಂಭ'

ಬೆಂಗಳೂರು

ರಾಜರಾಜೇಶ್ವರಿ ನಗರದ ಗೋಪಾಲನ್ ಎಂಟರ್‌ಪ್ರೈಸಸ್ ತನ್ನ ಚಿಲ್ಲರೆ ವ್ಯಾಪಾರ ವಿಸ್ತರಣೆಯ ಭಾಗವಾಗಿ ಡಿಮಾರ್ಟ್ ಮಳಿಗೆಯನ್ನು ಗೋಪಾಲನ್ ಆರ್ಕೇಡ್ ಮಾಲ್ ನಲ್ಲಿ ಪ್ರಾರಂಭಿಸಿದೆ.

ಹೊಸ ಡಿಮಾರ್ಟ್ ಮಳಿಗೆ ಆರಂಭವಾಗಿರುವುದರಿಂದ ಗೋಪಾಲನ್ ಆರ್ಕೇಡ್ ಮಾಲ್‌ನ ಚಿಲ್ಲರೆ ವ್ಯಾಪಾರ ವ್ಯವಸ್ಥೆಗೆ ಮತ್ತೊಂದು ಪ್ರಮುಖ ಸೇರ್ಪಡೆ ದೊರೆತಿದೆ. ವಸತಿ ಪ್ರದೇಶಗಳ ಮಧ್ಯದಲ್ಲಿ ಕಾರ್ಯತಂತ್ರದ ದೃಷ್ಟಿಯಿಂದ ನೆಲೆಗೊಂಡಿರುವ ಈ ಮಾಲ್ ಉತ್ತಮ ಪ್ರವೇಶಸೌಲಭ್ಯವನ್ನು ಹೊಂದಿದ್ದು, ದೊಡ್ಡ ಪ್ರಮಾಣದ ಚಿಲ್ಲರೆ ವ್ಯಾಪಾರಕ್ಕೆ ಸೂಕ್ತವಾದ ಕೇಂದ್ರವಾಗಲಿದೆ. ಈ ಹೊಸ ಮಳಿಗೆಯಿಂದ ರಾಜರಾಜೇಶ್ವರಿ ನಗರ ಹಾಗೂ ಸುತ್ತಮುತ್ತಲಿನ ನಿವಾಸಿಗಳಿಗೆ ದಿನನಿತ್ಯದ ಅಗತ್ಯ ವಸ್ತುಗಳನ್ನು ಒಂದೇ ಸ್ಥಳದಲ್ಲಿ ಸುಲಭವಾಗಿ ಖರೀದಿಸುವ ಅವಕಾಶ ಹೆಚ್ಚಲಿದೆ. ಜೊತೆಗೆ, ಗ್ರಾಹಕರಿಗೆ




ಆರಾಮದಾಯಕ, ವೇಗವಾದ ಮತ್ತು ತಡೆರಹಿತ ಖರೀದಿ ಅನುಭವ ಒದಗಿಸಲು ಇದು ನೆರವಾಗಲಿದೆ.

## ಬೆಂಗಳೂರು ಲುಲು ಮಾಲ್‌ನಲ್ಲಿ ನೈಕಾ ಬ್ಯೂಟಿ ಬಾರ್ ಆರಂಭ


ಬೆಂಗಳೂರು

ನೈಕಾ ತನ್ನ ಬಹು ನಿರೀಕ್ಷಿತ "ಬ್ಯೂಟಿ ಬಾರ್" ಕಾರ್ಯಕ್ರಮವನ್ನು ಮತ್ತೆ ಆರಂಭಿಸಿದ್ದು, ಈ ವರ್ಷದ ಮೊದಲ ಆವೃತ್ತಿಗೆ ಏಪ್ರಿಲ್ 3 ರಂದು ಲುಲು ಮಾಲ್ ನಲ್ಲಿ ಚಾಲನೆ ನೀಡಲಾಗಿದೆ.

ಮಾಲ್‌ನ ದಕ್ಷಿಣ ಅಟ್ರಿಯಂನಲ್ಲಿ ಆಯೋಜಿಸಲಾದ ಈ ವಿಶೇಷ ಕಾರ್ಯಕ್ರಮವು ಸೌಂದರ್ಯ ಪ್ರೇಮಿಗಳಿಗೆ ಹೊಸ ಉತ್ಪನ್ನಗಳ ಪರಿಚಯ, ಪ್ರಯಾಣ ಸ್ನೇಹಿ ಸೌಂದರ್ಯ ವಿಧಾನಗಳ ಅರಿವು ಹಾಗೂ ಪರಿಣಿತರೊಂದಿಗೆ ನೇರ ಸಂವಹನದ ಅವಕಾಶ ಒದಗಿಸಿತು.

ಈ ಬಾರಿ "ಪ್ರಯಾಣ ಸ್ನೇಹಿ ಸೌಂದರ್ಯ ಸಂಗ್ರಹ" ಎಂಬ ಪರಿಕಲ್ಪನೆಯನ್ನು ಪರಿಚಯಿಸಲಾಗಿದ್ದು, ಕಡಿಮೆ ಸಾಮಾನು ಹೊತ್ತುಕೊಂಡು ಹೋಗುವವರಿಗಾಗಿ ಸಣ್ಣ ಗಾತ್ರದ, ಬಹು ಉಪಯೋಗಿ ಮತ್ತು ಸುಲಭವಾಗಿ ಸಾಗಿಸಬಹುದಾದ ಸೌಂದರ್ಯ ಉತ್ಪನ್ನಗಳ ಮೇಲೆ ಗಮನ ಹರಿಸಲಾಯಿತು. ಪ್ರಯಾಣದ ಸಮಯದಲ್ಲಿ ತ್ವರಿತವಾಗಿ ಸಿದ್ಧಗೊಳ್ಳಲು ಸಹಾಯ ಮಾಡುವ ಪರಿಹಾರಗಳನ್ನು ಇಲ್ಲಿ ಪ್ರದರ್ಶಿಸಲಾಯಿತು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ಖ್ಯಾತ ಮೇಕಪ್ ಕಲಾವಿದೆ ನಿಕಿತಾ ಆನಂದ್ ವಿಶೇಷ ಕಾರ್ಯಾಗಾರ ನಡೆಸಿದರು. ಅವರು ಒಂದು ತಾಜಾ ಹಗಲಿನ ಲುಕ್ ಹಾಗೂ ಮತ್ತೊಂದು ಆಕರ್ಷಕ ರಾತ್ರಿ ಲುಕ್ ಮೂಲಕ, ಸರಿಯಾಗಿ ಆಯ್ಕೆ ಮಾಡಿದ ಸೌಂದರ್ಯ ಕಿಟ್ ಹೇಗೆ ದಿನದಿಂದ ರಾತ್ರಿ ತನಕ ರೂಪಾಂತರಗೊಳ್ಳಬಹುದು ಎಂಬುದನ್ನು




ತೋರಿಸಿದರು.

ಕಾರ್ಯಾಗಾರದಲ್ಲಿ ಬಳಸಲಾದ ಉತ್ಪನ್ನಗಳನ್ನು ಮೂರು ಪ್ರಮುಖ ವಿಭಾಗಗಳಲ್ಲಿ ಆಯ್ಕೆ ಮಾಡಲಾಗಿತ್ತು ಸಣ್ಣ ಗಾತ್ರದ ಉತ್ಪನ್ನಗಳು, ಎರಡು ರೀತಿಯಲ್ಲಿ ಬಳಸಬಹುದಾದ ಉತ್ಪನ್ನಗಳು ಹಾಗೂ ವಿಮಾನ ಪ್ರಯಾಣಕ್ಕೆ ಅನುಮೋದಿತ ಅಗತ್ಯ ವಸ್ತುಗಳು. ಇದರಿಂದ ಭಾಗವಹಿಸಿದವರಿಗೆ ತಮ್ಮದೇ ಆದ ಕಾಂಪ್ಯಾಕ್ಟ್ ಪ್ರಯಾಣ ಸೌಂದರ್ಯ ಕಿಟ್ ರೂಪಿಸಲು ನೆರವಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದವರಿಗೆ ಉತ್ಪನ್ನಗಳನ್ನು ಸ್ವತಃ ಪ್ರಯತ್ನಿಸಿ ನೋಡಲು ಅವಕಾಶ ನೀಡಲಾಗಿದ್ದು, ಪರಿಣಿತರಿಂದ ದೊರೆತ ಪ್ರಾಯೋಗಿಕ ಸಲಹೆಗಳು ಪ್ರಯಾಣದ ಸಂದರ್ಭದಲ್ಲೂ ಸುಲಭ ಹಾಗೂ ಪರಿಣಾಮಕಾರಿ ಸೌಂದರ್ಯ ಸಂರಕ್ಷಣೆ ಸಾಧ್ಯವೆಂದು ತೋರಿಸಿತು.

ಪೀಣ್ಯ,ದಾಸರಹಳ್ಳಿ : ರಾಜಗೋಪಾಲನಗರ ವಾರ್ಡ್‌ನ ಸಮುದಾಯ ಭವನದಲ್ಲಿ ನಡೆದ ಬಿಜೆಪಿ ಪದಾಧಿಕಾರಿಗಳ ಆಯ್ಕೆಯ ಸಭೆಯಲ್ಲಿ ರಾಜಗೋಪಾಲನಗರ ವಾರ್ಡ್ ಮಾಜಿ ಬಿಜೆಪಿ ಅಧ್ಯಕ್ಷ ನಾಗೇಶ್ ರವರ ಹುಟ್ಟುಹಬ್ಬಕ್ಕೆ ಶಾಸಕ ಎಸ್ ಮುನಿರಾಜುರವರು ಶುಭಕೋರಿದರು. ಈ ಸಂದರ್ಭದಲ್ಲಿ ದಾಸರಹಳ್ಳಿ ಮಂಡಲ ಬಿಜೆಪಿ ಅಧ್ಯಕ್ಷ ಮೇದರಹಳ್ಳಿ ಸೋಮಶೇಖರ್, ಗುರುಪ್ರಸಾದ್, ಲಕ್ಷ್ಮಿ ವೆಂಕಟೇಶ್ ಡಿ ಎಂ ಮಂಜು, ಮಾಜಿ ವಾರ್ಡ್ ಅಧ್ಯಕ್ಷ ಜೆ.ವಿ ಶ್ರೀನಿವಾಸ್, ಮುಖಂಡರಾದ ಸದಾನಂದ, ನರಸಿಂಹಮೂರ್ತಿ (ಮಂಗಳ ವಾಟರ್), ಬಿ.ಎನ್ ದಿನೇಶ್, ಮಂಡ್ಯ ರವಿ, ರಮೇಶ್ (ರಾಮಿ) ನಗರ ಯುವ ಘಟಕದ ಅಧ್ಯಕ್ಷ ನವೀನ್ ಸೇರಿದಂತೆ ಹಲವಾರು ಬಿಜೆಪಿ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.



## ನಾಯಕತ್ವ ಬದಲಾವಣೆ ಹೈಕಮಾಂಡ್ ನಿರ್ಧಾರ

ಬೆಂಗಳೂರು

ನಾಯಕತ್ವ ಬದಲಾವಣೆ ಬಗ್ಗೆ ಪದೇ ಪದೇ ಪ್ರಶ್ನೆ ಕೇಳುವ ಬಗ್ಗೆ ಗರಂ ಆಗಿ ಮಾತನಾಡಿರುವ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು, ನಿನ್ನೆಯೇ ಈ ಬಗ್ಗೆ ಹೇಳಿದ್ದೇನೆ. ಮತ್ತೆ ಪದೇ ಪದೇ ಇದನ್ನೇ ಕೇಳುತ್ತಿದ್ದೀರಿ. ಎಲ್ಲವನ್ನೂ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದರು.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿನ್ನೆ ಮೈಸೂರಿನಲ್ಲಿ ಇನ್ನು 2 ವರ್ಷ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿರುತ್ತಾರೆ ಎಂಬ ಬಗ್ಗೆ ಪ್ರತಿಕ್ರಿಯೆ ನೀಡಿ ನಿನ್ನೆಯೇ ಹೇಳಿದ್ದೇನಲ್ಲ, ಮುಗಿಯಿತು. ಸಂಪುಟ ಪುನಾರಚನೆ ಬಗ್ಗೆ ಹೈಕಮಾಂಡ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ತೀರ್ಮಾನ ಮಾಡುತ್ತಾರೆ. ಪದೇ ಪದೇ ಇದನ್ನೇ ಏಕೆ ಕೇಳುತ್ತೀರಾ, ಯಾವುದೇ ತೀರ್ಮಾನವನ್ನು ನಾವು ಮಾಡಲು ಆಗಲ್ಲ. ನಮ್ಮ ಅನಿಸಿಕೆಯಂತೆ ಹೈಕಮಾಂಡ್ ತೀರ್ಮಾನ ಮಾಡಲ್ಲ. ಎಲ್ಲವನ್ನು ಗಮನದಲ್ಲಿಟ್ಟುಕೊಂಡು ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದರು.

ಸಂಪುಟ ಪುನಾರಚನೆ ಸಂಬಂಧ ಒಂದು ಬಾರಿ ವಿಧಾನಸಭೆಗೆ ಗೆದ್ದವರು, 2–3 ಬಾರಿ ಗೆದ್ದವರು ಸಭೆ ನಡೆಸುವುದನ್ನು ಹೈಕಮಾಂಡ್ ಗಮನಿಸಿದೆ. ಅದರ ಬಗ್ಗೆ ರಾಜ್ಯ ಕಾಂಗ್ರೆಸ್ ಉಸ್ತುವಾರಿಗಳು ವರದಿ ಕೊಡುತ್ತಾರೆ. ನಂತರ ಹೈಕಮಾಂಡ್ ಸಮಸ್ಯೆಗಳನ್ನು ಬಗೆಹರಿಸುವ ಕೆಲಸ ಮಾಡುತ್ತದೆ ಎಂದು ಅವರು ಹೇಳಿದರು.

ಅಂತರ್ ಜಿಲ್ಲೆ ವರ್ಗಾವಣೆಗಾಗಿ ಪೊಲೀಸ್ ಕಾನ್‌ಸ್ಟೆಬಲ್‌ಗಳು ರಾಜ್ಯಪಾಲರಿಗೆ ದಯಾಮರಣ ಕೋರಿ ಪತ್ರ ಬರೆದಿರುವ ಬಗ್ಗೆ ಪ್ರತಿಕ್ರಿಯಿಸಿದ ಗೃಹ ಸಚಿವರು, ಪತ್ರದ ಅಗತ್ಯವಿಲ್ಲ. ಅಂತರ್ ಜಿಲ್ಲಾ ವರ್ಗಾವಣೆಗೆ ನಿಯಮ ಇದೆ. ಉತ್ತರ ಕರ್ನಾಟಕದಿಂದ ಬಂದು ಇಲ್ಲಿ ಆಯ್ಕೆಯಾಗಿರುತ್ತಾರೆ. 7 ವರ್ಷ ಆದ ನಂತರ ವರ್ಗಾವಣೆಗೆ ಅರ್ಹತೆ ಬರುತ್ತದೆ ಎನ್ನುವ ನಿಯಮ ಇದೆ. ಹಾಗಂದ ಮಾತ್ರಕ್ಕೆ 7 ವರ್ಷವಾದ ಕೂಡಲೇ ಎಲ್ಲರನ್ನೂ ಅಲ್ಲಿಗೆ ವರ್ಗಾವಣೆ ಮಾಡಬೇಕು ಎಂದೇನಿಲ್ಲ. ಹಿರಿತನ, ಪತಿ–ಪತ್ನಿ ಪ್ರಕರಣ ನೋಡಿ ನಿಯಮಾನುಸಾರ ವರ್ಗಾವಣೆ ಮಾಡುತ್ತೇವೆ. ನಿಯಮ ಉಲ್ಲಂಘನೆ ಮಾಡಲು ಆಗುವುದಿಲ್ಲ. ವರ್ಗಾವಣೆಯಲ್ಲಿ ಗೊಂದಲ ಇಲ್ಲ. ಯಾರೋ ಗೊಂದಲ ಸೃಷ್ಟಿಸಿಕೊಂಡರೆ ಇಲಾಖೆ ಏನು ಮಾಡಲು ಆಗುತ್ತದೆ ಎಂದರು.

ಇತ್ತೀಚೆಗೆ 327 ಸಬ್‌ಇನ್ಸ್‌ಪೆಕ್ಟರ್‌ಗಳ ನೇಮಕಾತಿ ಆಗಿದೆ. ಇದರಲ್ಲಿ ಶೇ. 80 ರಷ್ಟು ಉತ್ತರ ಕರ್ನಾಟಕದವರು ಇದ್ದಾರೆ. ಉತ್ತರ ಕರ್ನಾಟಕದವರನ್ನು ದಕ್ಷಿಣ ಕರ್ನಾಟಕ ಭಾಗದಲ್ಲೇ ನಿಯೋಜಿಸುತ್ತೇವೆ. 7 ವರ್ಷವಾದ ಮೇಲೆ ಹಿರಿತನ, ಆದ್ಯತೆ ನೋಡಿಕೊಂಡು ವರ್ಗಾವಣೆ ಮಾಡುತ್ತೇವೆ. ಕಾನ್‌ಸ್ಟೆಬಲ್‌ಗಳು ಏನು ದಯಾ ಮರಣ ಕೋರುವ ಅಗತ್ಯ ಇಲ್ಲ. ಅವರ ಜತೆ ನಾವಿದ್ದೇವೆ. ತೊಂದರೆಯಾದರೆ ಸರಿಪಡಿಸುವ ಕೆಲಸ ಮಾಡುತ್ತೇವೆ ಎಂದರು.

# ಕಾನೂನು ಹೋರಾಟದಲ್ಲಿ ಸತ್ಯಕ್ಕೆ ಸಂದ ಜಯ: ಕೊಂಡವಾಡಿ ಚಂದ್ರಶೇಖರ್

ಮಧುಗಿರಿ

ಜೆಡಿಎಸ್ ಪಕ್ಷದ ಕಾರ್ಯಕರ್ತರ ಅಭಿಪ್ರಾಯದ ಮೇರೆಗೆ ಮಧುಗಿರಿ ಕ್ಷೇತ್ರದಿಂದ ಮುಂದೆ ಬರುವ ವಿಧಾನಸಭಾ ಚುನಾವಣೆಯಲ್ಲಿ ನಾನು ಜೆಡಿಎಸ್ ನಿಂದ ಪ್ರಬಲ ಆಕಾಂಕ್ಷಿಯಾಗಿದ್ದು, ಹೈಕಮಾಂಡ್ ಟಿಕೆಟ್ ನೀಡಿದರೆ ನಾನು ಚುನಾವಣೆಗೆ ಸ್ಪರ್ಧಿಸಲು ಸಿದ್ದ ಎಂದು ತುಮುಲ್ ಮಾಜಿ ಅಧ್ಯಕ್ಷ ಹಾಲಿ ನಿರ್ದೇಶಕ ಕೊಂಡವಾಡಿ ಚಂದ್ರಶೇಖರ್ ತಿಳಿಸಿದರು.

ಪಟ್ಟಣದ ಹಿಂದೂಪುರ ರಸ್ತೆಯಲ್ಲಿರುವ ತುಮುಲ್ ಉಪಕೇಂದ್ರ ಕಚೇರಿಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ನಾನು ಸ್ಥಳೀಯನಾಗಿದ್ದು, ನನಗೆ ಪಕ್ಷದ ಟಿಕೆಟ್ ನೀಡಬೇಕೆಂದು ನಮ್ಮ ಪಕ್ಷದ ಹೈಕಮಾಂಡ್ ದೇವೇಗೌಡರು, ಕುಮಾರಸ್ವಾಮಿ ಮತ್ತು ನಿಖಿಲ್ ಕುಮಾರಸ್ವಾಮಿರವರಿಗೆ ಹತ್ತೋತ್ತಾಯ ಮಾಡುತ್ತೇನೆ. ಪಕ್ಷದಿಂದ ಬಿ–ಫಾರಂ ನೀಡಿದರೆ ಶೇ. 100 ರಷ್ಟು ಸ್ಪರ್ಧಿಸುತ್ತೇನೆ ಎಂದು ತಿಳಿಸಿದರು.



ತುಮುಲ್ ನಿರ್ದೇಶಕರ ಚುನಾವಣೆಯಲ್ಲಿ ಈ ಸರ್ಕಾರದಲ್ಲಿ ನನಗೆ ಅನ್ಯಾಯವಾಗಿದೆ. ಆದರೆ ನ್ಯಾಯಾಲಯದಲ್ಲಿ ಜಯ ದೊರೆತಿದೆ. ನ್ಯಾಯಾಲಯದ ಮೊರೆ ಹೋಗಿ ನಾನು ಜಯ ಪಡೆದಿದ್ದೇನೆ. ಏನೇ ಆದರೂ ಕೊನೆಗೆ ಸತ್ಯಕ್ಕೆ ಜಯವಾಗಿದೆ. ಕಳೆದ ಒಂದೂವರೆ ವರ್ಷದಿಂದ ಬಹಳಷ್ಟು ಏಳು ಬೀಳು ಕಂಡಿದ್ದು, ನಾನು ತುಮುಲ್ ನಿರ್ದೇಶಕರ ಚುನಾವಣೆಯಲ್ಲಿ ಸೋಲುವಂತಿರಲಿಲ್ಲ. ಆದರೂ ಸೋತೆ, ನನಗೆ ಅನ್ಯಾಯವಾಯಿತು. ಚುನಾವಣೆ ಫಲಿತಾಂಶ ಏನು ಎಂಬುದು ಡೈರಿ ಕಾರ್ಯದರ್ಶಿಗಳಿಗೆ ಗೊತ್ತು. ಅರ್ಹ ಮತದಾರರ ಪಟ್ಟಿ(ಡೆಲಿಗೇಟ್ಸ್ ಫಾರಂ) ರಾತ್ರೋರಾತ್ರಿ ಮಾಯವಾಗಿತ್ತು. ನಮ್ಮನ್ನು ಅನರ್ಹ ಮತದಾರರ ಪಟ್ಟಿಗೆ ಸೇರಿಸಲಾಯಿತು. ಕೇಳಿದರೆ ನಮ್ಮ ಕಚೇರಿಯಿಂದ ಯಾವುದೇ ಆದೇಶ ಹೊರಡಿಸಿಲ್ಲ ಎಂದು ಉಪನಿಬಂದಕರ ಕಚೇರಿಯಲ್ಲಿ ಹಿಂಬರಹ ನೀಡಲಾಯಿತು. ಕೊನೆಗೆ ಹೈ ಕೋರ್ಟ್ ಗೆ ಹೋಗಿ ಮತದಾನದ ಹಕ್ಕು ಪಡೆಯಲಾಯಿತು.

ನನ್ನ ದುರಾದೃಷ್ಟಕ್ಕೆ ನನ್ನ ಜೊತೆ ನನ್ನ ಎದುರಾಳಿಗೂ(ನಾಗೇಶ್ ಬಾಬು) ಓಟಿಂಗ್ ಪವರ್ ನೀಡಲಾಯಿತು. ನನ್ನ ಎದುರಾಳಿಗೆ ಅಂದೇ ಮತದಾನದ ಹಕ್ಕು ನೀಡದೇ ಇದ್ದಿದ್ದರೆ ಪ್ರಕರಣ ಇಲ್ಲಿಯವರೆಗೂ ಬರುತ್ತಲೇ ಇರಲಿಲ್ಲ. ನಾನು ಇಲ್ಲಿಯವರೆಗೂ ಯಾವುದೇ ತಪ್ಪು ಮಾಹಿತಿ ನೀಡಿ ಓಟಿಂಗ್ ಪವರ್ ಪಡೆದಿಲ್ಲ. ನಾನು ಇಂತಹ ಕೆಟ್ಟ ಕೆಲಸಕ್ಕೆ ಕೈಹಾಕುವುದಿಲ್ಲ. ಯಾರು ನ್ಯಾಯಾಲಯಕ್ಕೆ ಸತ್ಯ ಮರೆಮಾಚಿದ್ದಾರೆ ಎಂಬುದನ್ನು ದಾಖಲೆ ಸಮೇತ ನೀಡಲು ಸಿದ್ದ ಎಂದರು.

ಬಂದ್ರೇಹಳ್ಳಿ ಸಂಘಕ್ಕೆ ಚುನಾವಣಾ ಸಂದರ್ಭದಲ್ಲಿ 195 ದಿನಗಳ ಹಿಂದೆಯೇ ನೋಟೀಸ್ ನೀಡಲಾಗಿತ್ತು. ಗುಣಮಟ್ಟದ ಹಾಲು ಹಾಕಬೇಕು ಎಂದು ಡಿಸಿ ನೋಟೀಸ್ ನೀಡಿ ಬಂದ್ರೇಹಳ್ಳಿ ಸಂಘವನ್ನು ಅನರ್ಹಗೊಳಿಸಿ ಓಟರ್ ಲೀಸ್ಟ್ ಅಂತಿಮಗೊಳಿಸಲಾಯಿತು. ಆದರೆ ಬಂದ್ರೇಹಳ್ಳಿ ಸಂಘದವರು

ಒಕ್ಕೂಟದ ಎಂಡಾಸ್ ಮೆಂಟ್ ಮೇಲೆ ಮತದಾನದ ಹಕ್ಕು ಪಡೆದಿದ್ದು, ಇದನ್ನು ನ್ಯಾಯಾಲಯದಲ್ಲಿ ಮರೆಮಾಚಿದ್ದಾರೆ. ಈ ಎಲ್ಲಾ ದಾಖಲೆಗಳು ನನ್ನ ಬಳಿ ಇವೆ ಎಂದು ಕುಟುಕಿದರು.

ಪುರಸಭೆ ಮಾಜಿ ಸದಸ್ಯ ಎಂ.ಆರ್. ಜಗನ್ನಾಥ್ ಮಾತನಾಡಿ ಮನುಷ್ಯ ಸೋತು ಗೆಲ್ಲಬೇಕು ಎಂಬ ಮಾತಿನಂತೆ ಕೊಂಡವಾಡಿ ಚಂದ್ರಶೇಖರ್ ಸೋತು ಗೆದ್ದಿದ್ದಾರೆ. ಕಾನೂನು ಸತ್ಯವನ್ನು ಎತ್ತಿ ಹಿಡಿಯುತ್ತದೆ ಎಂಬುದಕ್ಕೆ ಇದು ನಿದರ್ಶನ. ಒಳ್ಳೆಯ ಕೆಲಸ ಮಾಡುವವರು ಸಹಕಾರ ಕ್ಷೇತ್ರದಲ್ಲಿ ಇರಬೇಕು. ಬಹಳಷ್ಟು ಸಹಕಾರ ಸಂಘಗಳಿಗೆ ಕೊಂಡವಾಡಿ ಪುನಶ್ಚೇತನ ನೀಡಿದ್ದಾರೆ ಎಂದರು.

ಇದಕ್ಕೂ ಮೊದಲು ಪಟ್ಟಣದ ಶ್ರೀ ದಂಡಿನಮಾರಮ್ಮ ದೇವಿಗೆ ಪೂಜೆ ಸಲ್ಲಿಸಿ ನಂತರ ಕಾರ್ಯಕರ್ತರೊಂದಿಗೆ ದೇವಸ್ಥಾನದಿಂದ ಹಿಂದೂಪುರ ರಸ್ತೆಯಲ್ಲಿರುವ ತುಮುಲ್ ಉಪ ಕಚೇರಿಯವರೆಗೂ ಬೃಹತ್ ಬೈಕ್ ರ್‍ಯಾಲಿ ಮೂಲಕ ತೆರಳಿ ಕಚೇರಿಯಲ್ಲಿ ಪೂಜೆ ಸಲ್ಲಿಸಿಸುವ ಮೂಲಕ ಕಾರ್ಯಕರ್ತರೊಂದಿಗೆ ಸಂಭ್ರಮಿಸಿದರು.

ಸುದ್ದಿಗೋಷ್ಠಿಯಲ್ಲಿ ಪುರಸಭೆ ಮಾಜಿ ಸದಸ್ಯ ಎಂ.ಆರ್ ಜಗನ್ನಾಥ್, ತಾ.ಪಂ ಮಾಜಿ ಉಪಾಧ್ಯಕ್ಷ ಲಕ್ಷ್ಮಿ ನರಸಪ್ಪ, ಜಿ.ಪಂ ಮಾಜಿ ಸದಸ್ಯ ಎಸ್ ಡಿ ಕೃಷ್ಣಪ್ಪ, ತಾ.ಪಂ ಮಾಜಿ ಸದಸ್ಯರುಗಳಾದ ದೊಡ್ಡಯ್ಯ ಸಿದ್ದಪ್ಪ, ತಾಲೂಕು ಜನತಾದಳದ ಅಧ್ಯಕ್ಷ ಬಸವರಾಜು, ಮುಖಂಡರಾದ ಸಿಡಿದರಗಲ್ಲು ಶ್ರೀನಿವಾಸ್, ನಾರಾಯಣ್, ವಿಶ್ವನಾಥ್, ಆನಂದ್, ವೀರೇಂದ್ರ, , ಬೋರ್ ವೆಲ್ ಕುಮಾರ, ನಾಗೇಶ್, ಎಸ್.ಡಿ.ವೆಂಕಟೇಶ್, ಕಂಬತ್ತನಹಳ್ಳಿ ರಘು, ಸೋಂಪುರ ಸಿದ್ದಪ್ಪ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ವಿಶ್ವ ಆರೋಗ್ಯ ದಿನ: ವಿಶೇಷ ಉಪನ್ಯಾಸ ಕಾರ್ಯಕ್ರಮ ಸಂಪನ್ನ

ರಾಮನಗರ

ಕನಕಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಯೂತ್ ರೆಡ್ ಕ್ರಾಸ್ ಘಟಕದ ವತಿಯಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವ ಆರೋಗ್ಯ ದಿನದ ಅಂಗವಾಗಿ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಮಹಿಳೆಯರ ಆರೋಗ್ಯ ಮತ್ತು ಸುರಕ್ಷತೆ ವಿಷಯದ ಕುರಿತು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಡಾ. ರಿತಿಮುಕ್ತಾ ಪಾಂಡ ಅವರು ಮಹಿಳೆಯರ ಆರೋಗ್ಯ ಕಾಳಜಿ, ಪೋಷಣಾ ಆಹಾರ, ಮಾನಸಿಕ ಆರೋಗ್ಯ ಮತ್ತು ಸುರಕ್ಷತೆ ಕುರಿತಂತೆ ವಿದ್ಯಾರ್ಥಿನಿಯರಿಗೆ ಹಾಗೂ ವಿದ್ಯಾರ್ಥಿಗಳಿಗೆ ಸಮಗ್ರ ಮಾಹಿತಿ ನೀಡಿದರು.

ಅವರು ಆರೋಗ್ಯದ ಬಗ್ಗೆ ಜಾಗೃತಿಯ ಅಗತ್ಯತೆಯನ್ನು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಡಾ. ಬಿ. ಶಾಮಲ ಅವರು ಮಾತನಾಡಿ, ವಿದ್ಯಾರ್ಥಿಗಳು ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಮತ್ತು ಇಂತಹ ಕಾರ್ಯಕ್ರಮಗಳು ಅವರ ವ್ಯಕ್ತಿತ್ವ ಅಭಿವೃದ್ಧಿಗೆ ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

# 3000 ರೂ. ಪಿಂಚಣಿ ಪಡೆಯಲು ಕಾರ್ಮಿಕರಿಗೆ ಸೂಚನೆ



ಮಾಲೂರು

"ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಅಸಂಘಟಿತ ವಲಯದ ಕಾರ್ಮಿಕರ ಸಾಮಾಜಿಕ ಭದ್ರತೆಗಾಗಿ ಭಾರತ ಸರ್ಕಾರವು 'ಪ್ರಧಾನಮಂತ್ರಿ ಶ್ರಮ ಯೋಗಿ ಮಾನ್ ಧನ್' ಎಂಬ ಮಹತ್ವಾಕಾಂಕ್ಷಿ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿದ್ದು, ತಾಲ್ಲೂಕಿನ ಕಾರ್ಮಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು," ಎಂದು ಕಾರ್ಮಿಕ ಇಲಾಖೆಯ ನಿರೀಕ್ಷಕ ರೇಣುಕಾ ಪ್ರಸಾದ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ಅರ್ಧದಷ್ಟು ಆದಾಯವು ಅಸಂಘಟಿತ ವಲಯದ ಸುಮಾರು 42 ಕೋಟಿ ಕಾರ್ಮಿಕರಿಂದ ಉತ್ಪಾದನೆಯಾಗುತ್ತಿದೆ. ಬೀದಿ ಬದಿ ವ್ಯಾಪಾರಿಗಳು, ಮನೆ ಕೆಲಸದವರು, ಆಟೋ ರಿಕ್ಷಾ ಚಾಲಕರು, ಕೃಷಿ ಕಾರ್ಮಿಕರು ಸೇರಿದಂತೆ ವಿವಿಧ ವೃತ್ತಿಗಳಲ್ಲಿ ತೊಡಗಿರುವ ಅಸಂಘಟಿತ ಕಾರ್ಮಿಕರಿಗೆ ವೃದ್ಧಾಪ್ಯದಲ್ಲಿ ನೆರವಾಗಲು ಈ ಯೋಜನೆ ಪೂರಕವಾಗಿದೆ ಎಂದರು. ಯೋಜನೆಯಡಿ ನೋಂದಾಯಿತರಾದ ಫಲಾನುಭವಿಗಳಿಗೆ 60 ವರ್ಷ ವಯಸ್ಸು ಪೂರ್ಣಗೊಂಡ ನಂತರ ಪ್ರತಿ ತಿಂಗಳು 3,000 ರೂಪಾಯಿಗಳ ಖಚಿತ ಪಿಂಚಣಿ ದೊರೆಯಲಿದೆ. ಚಂದಾದಾರರು ಪಾವತಿಸುವ ವಂತಿಕೆಗೆ ಸಮಾನಾಂತರವಾಗಿ ಕೇಂದ್ರ ಸರ್ಕಾರವೂ ಅಷ್ಟೇ ಮೊತ್ತದ ವಂತಿಕೆಯನ್ನು ಫಲಾನುಭವಿಯ ಪಿಂಚಣಿ ಖಾತೆಗೆ ಜಮೆ ಮಾಡುತ್ತದೆ.

ದಿನಗೂಲಿ ನೌಕರರು, ಕಟ್ಟಡ ಕಾರ್ಮಿಕರು, ಚಮ್ಮಾರರು, ಅಗಸರು ಹಾಗೂ ಇಟ್ಟಿಗೆ ಭಟ್ಟಿ ಕಾರ್ಮಿಕರಂತಹ ದುರ್ಬಲ ವರ್ಗದವರಿಗೆ ವಯೋವೃದ್ಧಾಪ್ಯದಲ್ಲಿ ಆರ್ಥಿಕ ಸ್ವಾವಲಂಬನೆ ಕಲ್ಪಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಅಸಂಘಟಿತ ವಲಯದ ಕಾರ್ಮಿಕರು ತಮ್ಮ ಹತ್ತಿರದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಅಥವಾ ಕಾರ್ಮಿಕ ಇಲಾಖೆಯ ಸಹಾಯ ಕೇಂದ್ರಗಳನ್ನು ಸಂಪರ್ಕಿಸಿ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಈ ಸೌಲಭ್ಯವನ್ನು ಸಕಾಲದಲ್ಲಿ ಬಳಸಿಕೊಂಡು ಭವಿಷ್ಯದ ಜೀವನಕ್ಕೆ ಭದ್ರತೆ ಒದಗಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

# ಕೆರೆಗಳ ಒತ್ತುವರಿ ತೆರವಿಗೆ ಲೋಕಾಯುಕ್ತ ಗಡುವು: ಅಧಿಕಾರಿಗಳಿಗೆ 'ದಂಡ'ದ ಭೀತಿ

ಕೋಲಾರ

ಜಿಲ್ಲೆಯ ಕೆರೆಗಳ ಅಕ್ರಮ ಒತ್ತುವರಿ ತೆರವು ಹಾಗೂ ಪುನರುಜ್ಜೀವನ ಕಾರ್ಯಗಳನ್ನು ತ್ವರಿತಗೊಳಿಸಲು ಲೋಕಾಯುಕ್ತ ಸಂಸ್ಥೆ ಕಟ್ಟುನಿಟ್ಟಿನ ಮೇಲ್ವಿಚಾರಣೆ ಆರಂಭಿಸಿದೆ. ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಅವರ ನೇತೃತ್ವದಲ್ಲಿ ನಡೆದ ವಿಚಾರಣೆಯಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳ ಅಧಿಕಾರಿಗಳು ಹಾಜರಾಗಿ ಕೆರೆಗಳ ಸಮೀಕ್ಷೆ, ಅಕ್ರಮ ಒತ್ತುವರಿ ಪತ್ತೆ, ತೆರವು ಕಾರ್ಯ ಮತ್ತು ಪುನರುಜ್ಜೀವನ ಕ್ರಮಗಳ ಕುರಿತು ವಿವರವಾದ ವರದಿ ಸಲ್ಲಿಸಿದರು.

ಮಾರ್ಚ್ 25ರಂದು ನಡೆದ ವಿಚಾರಣೆಯಲ್ಲಿ ಕೋಲಾರ ಉಪವಿಭಾಗದ ಸಹಾಯಕ ಆಯುಕ್ತರು, ತಹಶೀಲ್ದಾರರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು. ಈ ವೇಳೆ ತಾಲೂಕುವಾರು ಕೆರೆಗಳ ಸ್ಥಿತಿಗತಿ ಕುರಿತು ಚರ್ಚೆ ನಡೆಯಿತು.

ಕೆಜಿಎಫ್ ತಾಲೂಕಿನಲ್ಲಿ ಒಟ್ಟು 325 ಕೆರೆಗಳಿದ್ದು, ಅವುಗಳಲ್ಲಿ 200 ಕೆರೆಗಳ ಸಮೀಕ್ಷೆ ಪೂರ್ಣಗೊಂಡಿದೆ. ಉಳಿದ ಕೆರೆಗಳಲ್ಲಿ 46 ಕೆರೆಗಳಿಗೆ ಮರು ಸಮೀಕ್ಷೆ ಅಗತ್ಯವಿದೆ. ಇನ್ನೂ 60 ಕೆರೆಗಳ ಸಮೀಕ್ಷೆ ನಡೆದಿದ್ದರೂ ನಕ್ಷೆ ಸಲ್ಲಿಕೆಯಾಗದ ಕಾರಣ ಪ್ರಕ್ರಿಯೆ ವಿಳಂಬವಾಗಿದೆ. ಸಮೀಕ್ಷಕರ ಮುಷ್ಕರವೇ ಇದಕ್ಕೆ ಕಾರಣವಾಗಿದ್ದು, ಮುಂದಿನ ವಾರದೊಳಗೆ ನಕ್ಷೆ ಸಲ್ಲಿಕೆ ಪೂರ್ಣಗೊಳ್ಳಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬಂಗಾರಪೇಟೆ ತಾಲೂಕಿನಲ್ಲಿ 377 ಕೆರೆಗಳ ಸಮೀಕ್ಷೆ ಸಂಪೂರ್ಣಗೊಂಡಿದೆ. ಈ ಪೈಕಿ 3 ಕೆರೆಗಳಲ್ಲಿ ಅಕ್ರಮ ಒತ್ತುವರಿ ಪತ್ತೆಯಾಗಿದ್ದು, ಈಗಾಗಲೇ 2 ಕೆರೆಗಳಲ್ಲಿ ತೆರವು ಕಾರ್ಯ ನಡೆದಿದೆ. ಉಳಿದ ಒಂದು ಪ್ರಕರಣದಲ್ಲಿ ನೋಟಿಸ್ ನೀಡಲಾಗಿದ್ದು, ಕಾನೂನು ಪ್ರಕ್ರಿಯೆ ಮುಂದುವರಿದಿದೆ. ಅಲ್ಲದೆ 46 ಕೆರೆಗಳಿಗೆ ಸಂಬಂಧಿಸಿದ ನಕ್ಷೆ ಸಲ್ಲಿಕೆ ಬಾಕಿಯಿದ್ದು, ಅದನ್ನು ಒಂದು ವಾರದಲ್ಲಿ ಪೂರ್ಣಗೊಳಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಶ್ರೀನಿವಾಸಪುರ ತಾಲೂಕಿನಲ್ಲಿ 617 ಕೆರೆಗಳಿದ್ದು, ಅವುಗಳಲ್ಲಿ 54 ಕೆರೆಗಳು ಸಣ್ಣ ಕುಂಟೆಗಳಾಗಿ ಮಾರ್ಪಟ್ಟಿವೆ. ಈ ಪೈಕಿ 6 ಕುಂಟೆಗಳಲ್ಲಿ ಅಕ್ರಮ ನಿರ್ಮಾಣಗಳು ಪತ್ತೆಯಾಗಿದ್ದು, ಕೆಲವು ಕಡೆ ಮನೆಗಳು ನಿರ್ಮಾಣಗೊಂಡು ಗ್ರಾಮಗಳ ಭಾಗವಾಗಿರುವುದು ಗಮನಕ್ಕೆ ಬಂದಿದೆ. ತಾಲೂಕಿನಲ್ಲಿ ಬಹುತೇಕ ಎಲ್ಲಾ ಕೆರೆಗಳ ಸಮೀಕ್ಷೆ ಪೂರ್ಣಗೊಂಡಿದ್ದು, ಅಕ್ರಮ ತೆರವು ಹಾಗೂ ಬಾಕಿ ಇರುವ ಪ್ರಕರಣಗಳ ಕುರಿತು ಸಮಗ್ರ ವರದಿ ಸಲ್ಲಿಸುವಂತೆ ಲೋಕಾಯುಕ್ತ ಸೂಚಿಸಿದೆ.

ಮುಳಬಾಗಿಲು ತಾಲೂಕಿನಲ್ಲಿ ಒಟ್ಟು 803 ಕೆರೆಗಳಿದ್ದು, ಅವುಗಳಲ್ಲಿ 381 ಕೆರೆಗಳಲ್ಲಿ ಅಕ್ರಮ ಒತ್ತುವರಿ ಕಂಡುಬಂದಿದೆ. 10 ಕೆರೆಗಳನ್ನು ಖಾಸಗಿ ಭೂಮಿ ಎಂದು ದಾಖಲಿಸಿರುವುದು ಬೆಳಕಿಗೆ ಬಂದಿದ್ದು, ಅವುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ. ಕೆಲವು ಪ್ರಕರಣಗಳು ಸಹಾಯಕ ಆಯುಕ್ತರ ಮುಂದೆ ವಿಚಾರಣೆಯಲ್ಲಿದ್ದು, ಕರ್ನಾಟಕ ಭೂ ಕಂದಾಯ ಕಾಯ್ದೆಯಡಿ ಕ್ರಮ ಕೈಗೊಳ್ಳಲಾಗುತ್ತಿದೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಅಕ್ರಮ ತೆರವು ಕಾರ್ಯಕ್ಕೆ ಸೂಚನೆ ನೀಡಲಾಗಿದೆ.

ಕೋಲಾರ ತಾಲೂಕಿನಲ್ಲಿ 566 ಕೆರೆಗಳಿದ್ದು, 565 ಕೆರೆಗಳ ಸಮೀಕ್ಷೆ ಪೂರ್ಣಗೊಂಡಿದೆ. ಬಹುತೇಕ ಕೆರೆಗಳಲ್ಲಿ ಅಕ್ರಮ ಒತ್ತುವರಿ ತೆರವುಗೊಂಡಿದ್ದು, ಉಳಿದ ಕೆಲವು ಪ್ರಕರಣಗಳಲ್ಲಿ ಕಾನೂನು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಈ ಪ್ರಕರಣದ ಮುಂದಿನ ವಿಚಾರಣೆಯನ್ನು ಮೇ 26ಕ್ಕೆ ನಿಗದಿಪಡಿಸಲಾಗಿದ್ದು, ಆ ವೇಳೆಗೆ ಎಲ್ಲಾ ತಾಲೂಕುಗಳ ಪ್ರಗತಿ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ.

# 20ರಂದು ರಾಜ್ಯಮಟ್ಟದ ಬಸವ ಜಯಂತಿ

ಮೈಸೂರು

ಜಿಲ್ಲಾಡಳಿತದ ವತಿಯಿಂದ ಜಿಲ್ಲೆಯಲ್ಲಿ ಈ ಬಾರಿ ಏ.20ರಂದು ರಾಜ್ಯ ಮಟ್ಟದ ಬಸವ ಜಯಂತಿ ಆಚರಿಸಲಾಗುವುದು. ಅಧಿಕಾರಿಗಳು ಬಸವ ಜಯಂತಿ ಕಾರ್ಯಕ್ರಮಗಳನ್ನು ವಿನೂತನವಾಗಿ ಯೋಜಿಸಿ ಎಂದು ಜಿಲ್ಲಾಧಿಕಾರಿ ಲಕ್ಷ್ಮೀಕಾಂತರೆಡ್ಡಿ.ಜಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಬಸವ ಜಯಂತಿ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲಾಡಳಿತದ ವತಿಯಿಂದ ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ಪುತ್ಥಳಿಗೆ ಮಾಲಾರ್ಪಣೆ, ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮ ಪ್ರತಿ ವರ್ಷ ಆಯೋಜಿಸಲಾಗುವುದು. ಈ ಬಾರಿ ರಾಜ್ಯಮಟ್ಟದ ಕಾರ್ಯಕ್ರಮವಾಗಿದ್ದು ಹೊಸತನದಿಂದ ಹಾಗೂ ಹೆಚ್ಚು ಜನರಿಗೆ ಬಸವಣ್ಣನವರ ತತ್ವ ಹಾಗೂ ಆದರ್ಶ ತಲುಪುವ ರೀತಿ ನಡೆಸಲು ಅಪರ ಜಿಲ್ಲಾಧಿಕಾರಿ ಯೋಜನೆ ರೂಪಿಸಿ ಅಧಿಕಾರಿಗಳಿಗೆ ಜವಾಬ್ದಾರಿ ವಹಿಸುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷ ಉಂಟಾಗದಂತೆ ಶಿಷ್ಟಾಚಾರದ ಪ್ರಕಾರ ಎಲ್ಲರನ್ನೂ ಆಹ್ವಾನಿಸಿ ಜಯಂತಿಯನ್ನು ಅರ್ಥಪೂರ್ಣವಾಗಿ ಅದ್ದೂರಿಯಾಗಿ ಆಚರಿಸಲು ವಿವಿಧ ಸಮಿತಿಗಳನ್ನು ರಚಿಸಲಾಗುವುದು ಎಂದರು. ಬಸವ ಬಳಗ ಒಕ್ಕೂಟದ ಅಧ್ಯಕ್ಷ ಚಂದ್ರಶೇಖರ್ ಮಾತನಾಡಿ, ಒಕ್ಕೂಟದ ವತಿಯಿಂದ ಬಸವ ಜಯಂತಿ ಅಂಗವಾಗಿ ಏಪ್ರಿಲ್ 19 ರಂದು ಮೆರವಣಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಲಾಮಂದಿರದಲ್ಲಿ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ, ನಾಟಕ ಪ್ರದರ್ಶನ ಹಾಗೂ ಏಪ್ರಿಲ್ 20 ರಂದು ಸಂಜೆ ಸಮಾರೋಪ ಸಮಾರಂಭದ ನಡೆಯಲಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್, ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಮುಖಂಡರು ಉಪಸ್ಥಿತರಿದ್ದರು.

# ಮಹಿಳಾ ಪೋಲಿಸ್ ಅಧಿಕಾರಿಗೆ ಧಮ್ಕಿ: ಹಲ್ಲೆ ಯತ್ನ

ಚಿಂತಾಮಣಿ

ಕರ್ತವ್ಯ ನಿರತ ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಪಿಎಸ್ಐ) ಅವರಿಗೆ ದಮ್ಕಿ ಹಾಕಿ, ಹಲ್ಲೆಗೆ ಯತ್ನಿಸಿರುವ ಆಘಾತಕಾರಿ ಘಟನೆ ತಾಲೂಕಿನ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯ ಚಿನ್ನಸಂದ್ರ ಗ್ರಾಮದಲ್ಲಿ ನಡೆದಿದೆ.

ಗ್ರಾಮಾಂತರ ಠಾಣೆಯ ಪಿಎಸ್ಐ ನಾಗಮ್ಮ ಹಾಗೂ ಜೀಪ್ ಚಾಲಕ ವೇಣುಗೋಪಾಲ್ ಅವರ ಮೇಲೆ ಈ ಹಲ್ಲೆ ಯತ್ನ ನಡೆದಿದೆ ಎಂದು ವರದಿಯಾಗಿದೆ.

ಘಟನೆಯ ಹಿನ್ನೆಲೆ: ಇದೇ 3ರಂದು ತಡರಾತ್ರಿ 12:40ರ ಸಮಯದಲ್ಲೂ ಹೋಟೆಲ್ ತೆರೆದಿರುವುದನ್ನು ಗಮನಿಸಿದ ಪಿಎಸ್ಐ ನಾಗಮ್ಮ ಅವರು, ನಿಯಮ ಉಲ್ಲಂಘಿಸಿ ಹೋಟೆಲ್ ನಡೆಸುತ್ತಿರುವುದನ್ನು ಪ್ರಶ್ನಿಸಿದ್ದಾರೆ. ಈ ವೇಳೆ ಅಲ್ಲಿದ್ದ ಪುಂಡರು ಮಹಿಳಾ ಪೊಲೀಸ್ ಅಧಿಕಾರಿ ಎನ್ನದೆಯೂ ಅಸಭ್ಯವಾಗಿ ವರ್ತಿಸಿ, ದಮ್ಕಿ ಹಾಕಿ ಹಲ್ಲೆಗೆ ಮುಂದಾಗಿದ್ದಾರೆ.

ಈ ಸಂಬಂಧ ಆಲಂಬಗಿರಿಯ ನಿವಾಸಿಗಳಾದ ನಾಗೇಂದ್ರ, ನವೀನ್, ಪುನೀತ್ ಮತ್ತು ನರೇಂದ್ರ ಎಂಬುವವರ ವಿರುದ್ಧ ಪ್ರಕರಣ ದಾಖಲಾಗಿದೆ. ಆದರೆ, ಘಟನೆ ನಡೆದು ಮೂರು ದಿನ ಕಳೆದರೂ ಪೊಲೀಸರು ಈವರೆಗೂ ಆರೋಪಿಗಳನ್ನು ಬಂಧಿಸದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಮಹಿಳಾ ಅಧಿಕಾರಿಯ ಮೇಲೆಯೇ ಹಲ್ಲೆ ಯತ್ನ ನಡೆದಿದ್ದರೂ ಹಿರಿಯ ಪೊಲೀಸ್ ಅಧಿಕಾರಿಗಳು ಮೌನಕ್ಕೆ ಶರಣಾಗಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. "ಪೊಲೀಸ್ ಇಲಾಖೆಯವರಿಗೇ ರಕ್ಷಣೆ ಇಲ್ಲದಂತಾಗಿದೆಯೇ?" ಎಂದು ಪ್ರಶ್ನಿಸುತ್ತಿರುವ ಸಾರ್ವಜನಿಕರು, ರಾಜಕೀಯ ಪ್ರಭಾವಕ್ಕೆ ಒಳಗಾಗಿ ಪ್ರಕರಣವನ್ನು ಮುಚ್ಚಿ ಹಾಕುವ ಪ್ರಯತ್ನ ನಡೆಯುತ್ತಿದೆಯೇ ಎಂಬ ಶಂಕೆಯನ್ನು ವ್ಯಕ್ತಪಡಿಸಿದ್ದಾರೆ. ತಕ್ಷಣವೇ ಆರೋಪಿಗಳನ್ನು ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಮೇ 3ರಿಂದ ತುಮಕೂರಲ್ಲಿ ಅಂತರಾಷ್ಟ್ರೀಯ ಮಹಿಳಾ ಟೆನಿಸ್ ಸಂಭ್ರಮ

ತುಮಕೂರು

ಜಿಲ್ಲೆಯ ಕ್ರೀಡಾ ಇತಿಹಾಸದಲ್ಲಿ ಮತ್ತೊಂದು ಮೈಲಿಗಲ್ಲಾಗಲಿರುವ 'ತುಮಕೂರು ಓಪನ್ ಚಾಂಪಿಯನ್‌ಶಿಪ್' ಅಂತರಾಷ್ಟ್ರೀಯ ಮಹಿಳಾ ಟೆನಿಸ್ ಕ್ರೀಡಾಕೂಟವು ಮೇ 3ರಿಂದ 10ರವರೆಗೆ ನಡೆಯಲಿದ್ದು, ಇದರ ಯಶಸ್ವಿ ಅನುಷ್ಠಾನಕ್ಕೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಶನಿವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಶ್ವಮಟ್ಟದ ಈ ಕ್ರೀಡಾಕೂಟಕ್ಕಾಗಿ ಈಗಾಗಲೇ ವಿವಿಧ ಉಪ ಸಮಿತಿಗಳನ್ನು




ರಚಿಸಲಾಗಿದೆ. ನಿಯೋಜಿತ ಅಧಿಕಾರಿಗಳು ತಮಗೆ ವಹಿಸಿರುವ ಜವಾಬ್ದಾರಿಗಳನ್ನು ಯಾವುದೇ ಲೋಪವಿಲ್ಲದಂತೆ ಅತ್ಯಂತ ಜಾಗರೂಕತೆಯಿಂದ ನಿರ್ವಹಿಸಬೇಕು ಎಂದು ತಿಳಿಸಿದರು.

ಈ ಪ್ರತಿಷ್ಠಿತ ಕ್ರೀಡಾಕೂಟದಲ್ಲಿ ವಿಶ್ವದ ಸುಮಾರು 12 ವಿವಿಧ ರಾಷ್ಟ್ರಗಳಿಂದ ನೂರಕ್ಕೂ ಹೆಚ್ಚು ಅಂತರಾಷ್ಟ್ರೀಯ ಟೆನಿಸ್ ಪಟುಗಳು ಭಾಗವಹಿಸಲಿದ್ದಾರೆ. ಅವರೊಂದಿಗೆ ಅಂತರಾಷ್ಟ್ರೀಯ ಮಟ್ಟದ ತೀರ್ಪುಗಾರರು ಆಗಮಿಸಲಿದ್ದು, ಅವರಿಗೆ ಉತ್ತಮ ವಸತಿ, ಗುಣಮಟ್ಟದ ಊಟ ಹಾಗೂ ಸಾರಿಗೆ ಸೇರಿದಂತೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಅಚ್ಚುಕಟ್ಟಾಗಿ ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಕರ್ನಾಟಕ ರಾಜ್ಯ ಲಾನ್ ಟೆನ್ನಿಸ್ ಅಸೋಸಿಯೇಷನ್ ಸಹಯೋಗದೊಂದಿಗೆ ಈ ಟೆನಿಸ್ ಹಬ್ಬ ನಡೆಯಲಿದೆ. ತುಮಕೂರಿನ ಆಯ್ದ ನಾಲ್ಕು ಸುಸಜ್ಜಿತ ಕ್ರೀಡಾ ಅಂಕಣಗಳಲ್ಲಿ ಪಂದ್ಯಾವಳಿಗಳು ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾ ಆಸಕ್ತರು ಆಗಮಿಸಿ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಬೇಕು ಎಂದು ಅವರು ಮನವಿ ಮಾಡಿದರು.

"ಈ ಬೃಹತ್ ಕ್ರೀಡಾಕೂಟದ ಸಂಪೂರ್ಣ ವೆಚ್ಚವನ್ನು ದಾನಿಗಳೇ ಭರಿಸಲಿದ್ದಾರೆ. ಆಸಕ್ತ ದಾನಿಗಳು ನೇರವಾಗಿ ಟೆನ್ನಿಸ್ ಅಸೋಸಿಯೇಷನ್ ಖಾತೆಗೆ ತಮ್ಮ ನೆರವನ್ನು ನೀಡಬಹುದು. ಸಾರ್ವಜನಿಕರ ಅನುಕೂಲಕ್ಕಾಗಿ ಶೀಘ್ರದಲ್ಲೇ ಅಸೋಸಿಯೇಷನ್‌ನ ಬ್ಯಾಂಕ್ ಖಾತೆ ಸಂಖ್ಯೆಯನ್ನು ಬಿಡುಗಡೆ ಮಾಡಲಾಗುವುದು," ಎಂದು ಜಿಲ್ಲಾಧಿಕಾರಿಗಳು ಇದೇ ಸಂದರ್ಭದಲ್ಲಿ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ.ವಿ. ಅಶೋಕ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ದಾವಣಗೆರೆ ಕೈ ಅಭ್ಯರ್ಥಿ ಪರ ಅಬ್ಬರದ ಪ್ರಚಾರ



ದಾವಣಗೆರೆ

ಇಲ್ಲಿನ ದಕ್ಷಿಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ ಶಾಮನೂರು ಮಲ್ಲಿಕಾರ್ಜುನ್ ಅವರ ಗೆಲುವಿಗಾಗಿ ಕೋಲಾರ ಜಿಲ್ಲೆಯ ಪ್ರಭಾವಿ ನಾಯಕರ ದಂಡೇ ದಾವಣಗೆರೆಯಲ್ಲಿ ಮೊಕ್ಕಾಂ ಹೂಡಿದ್ದು, ಅಬ್ಬರದ ಚುನಾವಣಾ ಪ್ರಚಾರ ನಡೆಸಿತು.

ರಾಜ್ಯ ಉನ್ನತ ಶಿಕ್ಷಣ ಸಚಿವ ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಸಿ. ಸುಧಾಕರ್ ಅವರ ನೇತೃತ್ವದಲ್ಲಿ ಕೋಲಾರ ಶಾಸಕ ಕೊತ್ತೂರು ಮಂಜುನಾಥ್ ಮತ್ತು ವಿಧಾನ ಪರಿಷತ್ ಸದಸ್ಯ ಎಂ.ಎಲ್. ಅನಿಲ್ ಕುಮಾರ್ ಅವರು ಶನಿವಾರ ದಾವಣಗೆರೆಯಲ್ಲಿ ಅಬ್ಬರದ ರೋಡ್ ಶೋ ಹಾಗೂ ಮನೆ ಮನೆ ಪ್ರಚಾರ ಕೈಗೊಂಡರು.

ದಾವಣಗೆರೆ ದಕ್ಷಿಣ ಕ್ಷೇತ್ರದ ಬೇತೂರ್ ರಸ್ತೆಯ ವಾರ್ಡ್ ಸಂಖ್ಯೆ 13ರಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚಿಸಿದ ನಾಯಕರು, ಸರ್ಕಾರದ ಗ್ಯಾರಂಟಿ ಯೋಜನೆಗಳು ಹಾಗೂ ಅಭಿವೃದ್ಧಿ ಕಾರ್ಯಗಳನ್ನು ಮುಂದಿಟ್ಟುಕೊಂಡು ಮತದಾರರ ಮನ ಗೆಲ್ಲುವ ಪ್ರಯತ್ನ ನಡೆಸಿದರು. ಕೆಲವು ಆಯ್ದ ಸ್ಥಳಗಳಲ್ಲಿ ಸ್ಥಳೀಯ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಸಮಾಲೋಚನಾ ಸಭೆ ನಡೆಸಿದ ಸಚಿವರು, ಅಭ್ಯರ್ಥಿಯ ಗೆಲುವಿಗೆ ಅನುಸರಿಸಬೇಕಾದ ತಂತ್ರಗಾರಿಕೆಗಳ ಬಗ್ಗೆ ಚರ್ಚಿಸಿದರು.

ಈ ಚುನಾವಣಾ ಪ್ರಚಾರದಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಪ್ರಮುಖ ನಾಯಕರು ಪಾಲ್ಗೊಂಡಿದ್ದು ವಿಶೇಷವಾಗಿತ್ತು. ಶಿಡ್ಲಘಟ್ಟದ ಕಾಂಗ್ರೆಸ್ ಮುಖಂಡ ಪುಟ್ಟು ಅಂಜಿನಪ್ಪ, ಕೋಮುಲ್ ನಿರ್ದೇಶಕ ಚಂಜಿಮಲೆ ರಮೇಶ್, ಸಿಂಡಿಕೇಟ್ ಸದಸ್ಯ ಸೀಸಂದ್ರ ಗೋಪಾಲಗೌಡ, ಕೋಲಾರ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ, ಪ್ರಮುಖರಾದ ಜನಪನಹಳ್ಳಿ ನವೀನ್, ಮಹೇಶ್ ಸೇರಿದಂತೆ ಹತ್ತಾರು ಮುಖಂಡರು ಭಾಗವಹಿಸಿ ಅಭ್ಯರ್ಥಿಯ ಪರವಾಗಿ ಮತಬೇಟೆ ನಡೆಸಿದರು.

ದಾವಣಗೆರೆಯ ಅಂಗಳದಲ್ಲಿ ಕೋಲಾರದ ನಾಯಕರ ಈ ಸಕ್ರಿಯ ಪಾಲ್ಗೊಳ್ಳುವಿಕೆ ಕಾಂಗ್ರೆಸ್ ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ತುಂಬಿದೆ.

# ಬಸಣ್ಣ ಭಜಂತ್ರಿಗೆ ಸಿಎಂ ಪದಕದ ಗರಿ



ಬೆಂಗಳೂರು

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಕ್ರೀಡಾ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ಪೊಲೀಸ್ ನಿರೀಕ್ಷಕ ಬಸಣ್ಣ ಭಜಂತ್ರಿ ಅವರಿಗೆ ಅವರ ನಿಷ್ಠೆ ಮತ್ತು ಪ್ರಾಮಾಣಿಕ ಸೇವೆಯನ್ನು ಪರಿಗಣಿಸಿ ಪ್ರತಿಷ್ಠಿತ 'ಮುಖ್ಯಮಂತ್ರಿಗಳ ಪದಕ' ನೀಡಿ ಗೌರವಿಸಲಾಗಿದೆ.

ಬೆಂಗಳೂರಿನಲ್ಲಿ ನಡೆದ ಅದ್ದೂರಿ ಸಮಾರಂಭದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಬಸಣ್ಣ ಭಜಂತ್ರಿ ಅವರಿಗೆ ಪದಕ ಪ್ರದಾನ ಮಾಡಿ, ಮುಂದಿನ ದಿನಗಳಲ್ಲಿ ಅವರಿಂದ ನಾಡಿಗೆ ಇನ್ನೂ ಹೆಚ್ಚಿನ ಸೇವೆ ಲಭಿಸಲಿ ಎಂದು ಶುಭ ಹಾರೈಸಿದರು.

ಮೂಲತಃ ರಾಯಚೂರು ಜಿಲ್ಲೆಯ ಸಾಮಾನ್ಯ ಗ್ರಾಮೀಣ ಹಿನ್ನೆಲೆಯಿಂದ ಬಂದ ಬಸಣ್ಣ ಭಜಂತ್ರಿ ಅವರು, ಕಷ್ಟದ ಹಾದಿಯಲ್ಲಿ ನಡೆದು ಬಂದು ಇಂದು ಪೊಲೀಸ್ ಇಲಾಖೆಯಲ್ಲಿ ಉನ್ನತ ಸ್ಥಾನಕ್ಕೇರಿದ್ದಾರೆ. ಅವರ ಈ ಸಾಧನೆಯು ಕೇವಲ ವೈಯಕ್ತಿಕ ಯಶಸ್ಸಲ್ಲದೆ, ರಾಯಚೂರು ಜಿಲ್ಲೆಯ ಸಾವಿರಾರು ಗ್ರಾಮೀಣ ಯುವಕರಿಗೆ ಪೊಲೀಸ್ ಇಲಾಖೆ ಸೇರಲು ಸ್ಫೂರ್ತಿಯ ಸೆಲೆಯಾಗಿದೆ.

ಪ್ರಸ್ತುತ ಕರ್ನಾಟಕ ರಾಜ್ಯ ಪೊಲೀಸ್ ಕ್ರೀಡಾ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಇವರು, ಇಲಾಖೆಯ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವಲ್ಲಿ ಮತ್ತು ವಿವಿಧ ಕ್ರೀಡಾಕೂಟಗಳಲ್ಲಿ ಪೊಲೀಸ್ ತಂಡವನ್ನು ಯಶಸ್ವಿಯಾಗಿ ಮುನ್ನಡೆಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಇವರ ಕರ್ತವ್ಯದಕ್ಷತೆ ಮತ್ತು ಕ್ರೀಡಾ ಪ್ರೇಮವು ಇಲಾಖೆಯ ಇತರ ಅಧಿಕಾರಿಗಳಿಗೆ ಮೇಲ್ಪಂಕ್ತಿಯಾಗಿದೆ.

"ಬಸಣ್ಣ ಭಜಂತ್ರಿ ಅವರಿಗೆ ಸಂದ ಈ ಪದಕವು ಅವರ ವರ್ಷಗಳ ಶ್ರಮ, ನಿಸ್ವಾರ್ಥ ಸೇವೆ ಮತ್ತು ಇಲಾಖೆಯ ಮೇಲಿರುವ ನಿಷ್ಠೆಗೆ ಸಂದ ನ್ಯಾಯಯುತ ಗೌರವವಾಗಿದೆ," ಎಂದು ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಅನೇಕ ಗಣ್ಯರು ಉಪಸ್ಥಿತರಿದ್ದು, ಪದಕ ವಿಜೇತರಿಗೆ ಅಭಿನಂದನೆ ಸಲ್ಲಿಸಿದರು.

# ಲೋಕ ಕಲ್ಯಾಣಕ್ಕಾಗಿ ರಾಮಕೋಟಿ ಜಪಯಜ್ಞ: ಅಂಕಣಗೊಂಡಿ ಅಂಗಳದಲ್ಲಿ ಭಕ್ತಿ ಪಾರವಶ್ಯ

ಚಿಕ್ಕಬಳ್ಳಾಪುರ

ನಗರದ ಅಂಕಣಗೊಂದಿ ಶ್ರೀ ಬಯಲು ವೀರಾಂಜನೇಯ ಸ್ವಾಮಿ ದೇವಾಲಯದ ಪ್ರಾಂಗಣದಲ್ಲಿ ಪ್ರತಿ ವರ್ಷದಂತೆ ಈ ಬಾರಿಯೂ ಅದ್ದೂರಿಯಗಿ ನಡೆಯುತ್ತಿರುವ 10ನೇ ವರ್ಷದ ಶ್ರೀ ರಾಮಕೋಟಿ ಜಪಯಜ್ಞ ಸಪ್ತಾಹವು ಭಕ್ತಕೋಟಿಯ ಸಹಕಾರ ಬಲದಿಂದ ಯಶಸ್ವಿಯಾಗಿ ನೆರವೇರುತ್ತಿದೆ ಎಂದು ಟ್ರಸ್ಟಿನ ಅಧ್ಯಕ್ಷ ಪುರದಗಡ್ಡೆ ಪಿ. ಎನ್.ಕೃಷ್ಣಪ್ಪ ಸಂತಸ ವ್ಯಕ್ತಪಡಿಸಿದ್ದಾರೆ.

ತಾಲೂಕಿನ ಅಂಕಣಗೊಂಡಿಯ ಶ್ರೀ ಬೈಲಾಂಜನೇಯ ಸ್ವಾಮಿ ದೇವಾಲಯ ಅವಣದಲ್ಲಿ ನಡೆಯುತ್ತಿರುವ ಶ್ರೀರಾಮ ಕೋಟಿ ಸಪ್ತಾಹ ಜಪ ಯಜ್ಞ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಶಿವನು ಪಾರ್ವತಿಗೆ ಬೋದಿಸಿದ ಹಾಗೂ ಸೀತಾಪಹರಣ ಸಂದರ್ಭದಲ್ಲಿ ವಾನರಸೇನೆ ಸಾಗರದಲ್ಲಿ ಸೇತುವೆ ಕಟ್ಟುವಾಗ ಜಪಿಸಿದ ತಾರಕಮಂತ್ರ ಇದಾಗಿದ್ದು, "ಶ್ರೀರಾಮ ಜಯರಾಮ ಜಯ ಜಯ ರಾಮ" ಎಂಬ ಜಪನಾಮವು, ದಿನದ 24 ಗಂಟೆಯೂ ಭಕ್ತರ ಕಂಠದಿಂದ ಮೊಳಗುತ್ತಲೇ ಇರುತ್ತದೆ ಎಂದು ಹೇಳುವ ಅಧ್ಯಕ್ಷರು, ರಾಮನಾಮ ಜಪವು, ಯಾವುದೇ ತಾಳಮೇಳ ಇಲ್ಲದೇ ನಿರಂತರವಾಗಿ ಜಿಲ್ಲೆಯ ಅಸಂಖ್ಯಾತ ಭಜನಾ ತಂಡದವರಿಂದ ಸ್ಥಳೀಯ ಭಕ್ತರಿಂದ ಸಾಗುತ್ತಿದೆ ಎಂದು ವಿವರಣೆ ನೀಡಿದರು.

ದೇವಸ್ಥಾನದ ಪ್ರಾಂಗಣದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಲೋಕ ಕಲ್ಯಾಣಾರ್ಥ ನಡೆಸುತ್ತಿರುವ ಈ ಸಪ್ತಹದಲ್ಲಿ ಗಣ್ಯಾತಿಗಣ್ಯ ದೈವಭಕ್ತರು ಸ್ವ



ಇಚ್ಛೆಯಿಂದ ಪಾಲ್ಗೊಂಡು ತನ್ಮಯತೆ ಯಿಂದ ರಾಮಜಪ ಮಾಡುತ್ತಿದ್ದಾರೆ ಎಂದರಲ್ಲದೇ, ದಿಬ್ಬೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಂಗರೆಕಾಲುವೆ ವೀರಾಂಜನೇಯಸ್ವಾಮಿ ಭಜನಾ ಮಂಡಳಿ, ದಿಬ್ಬೂರು ಗ್ರಾಮದ ಶ್ರೀಯೋಗಿ ನಾರಾಯಣ ಭಜನಾ ಮಂಡಳಿ, ಪುರದಗಡ್ಡೆ ಯೋಗಿನಾರೇಯಣ ಭಜನಾ ಮಂಡಳಿ, ಶ್ರೀ ವೀರಾಂಜನೇಯ ಸ್ವಾಮಿ ಭಜನಾ ಮಂಡಳಿ ಚಿಕ್ಕಬಳ್ಳಾಪುರ ದ ಚೈತನ್ಯ ಯೋಗಕೇಂದ್ರ ಸೇರಿದಂತೆ ಅನೇಕ ಭಕ್ತರು ಪಾಲ್ಗೊಳ್ಳುತ್ರಿದ್ದಾರೆ ಎಂದರು. 200 ಕ್ಕೂ ಹೆಚ್ಚು ಗ್ರಾಮಗಳಿಂದ 500ಕ್ಕೂ ಅಧಿಕ ಭಜನಾ ತಂಡಗಳು ಈ ಯಜ್ಞ ದಲ್ಲಿ ಪಾಲ್ಗೊಂಡಿದ್ದು ನಿಮಿಷ, ಗಂಟೆಗಳ ಲೆಕ್ಕದಲ್ಲಿ ನೋಡಿದರೆ ಏಳುದಿನಗಳಲ್ಲಿ ಒಟ್ಟು ಒಂದೂವರೆ ಕೋಟಿಯಷ್ಟು ರಾಮನಾಮ ಜಪ ನಡೆದಿರುತ್ತದೆ ಎಂದು ಸಹ ಕೃಷ್ಣಪ್ಪ ಅವರು ತಿಳಿಸಿದ್ದಾರೆ.

# ಅಧಿಕಾರಿಗಳೇ ಎಚ್ಚರ! ಕಾಲಹರಣ ಮಾಡಿದರೆ ಲೋಕಾಯುಕ್ತ ಬಿಸಿ ಖಚಿತ

ಚಿಕ್ಕಬಳ್ಳಾಪುರ

ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿ ಸಮಯೋಚಿತವಾಗಿ ಹಾಗೂ ಸಂದರ್ಭೋಚಿತವಾಗಿ ಕೆಲಸ ಮಾಡದೆ ಅರ್ಜಿ ವಿಲೆವಾರಿ ಮಾಡಲು ವಿಳಂಬ ಧೋರಣೆ ತೋರುವುದು ಕೂಡ ಕರ್ತವ್ಯ ಲೋಪವಾಗಿದ್ದು, ಅಂತಹವರ ಮೇಲೂ ಕೂಡ ಪರಿಶೀಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಉಪಲೋಕಾಯುಕ್ತ ಕೆ.ಎನ್. ಫಣೀಂದ್ರ ಅಧಿಕಾರಿಗಳಿಗೆ ತಿಳಿಸಿದರು.

ಇಲ್ಲಿನ ಜಿಲ್ಲಾ ಪಂಚಾಯತ್‌ನ ಸರ್. ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಚಿಕ್ಕಬಳ್ಳಾಪುರ, ಗೌರಿಬಿದನೂರು, ಮಂಚೇನಹಳ್ಳಿ ಹಾಗೂ ಗುಡಿಬಂಡೆ ತಾಲ್ಲೂಕುಗಳಿಗೆ ಸಂಬಂಧಪಟ್ಟ ಲೋಕಾಯುಕ್ತದಲ್ಲಿ ದಾಖಲಾಗಿರುವ ದೂರು ಪ್ರಕರಣಗಳ ವಿಚಾರಣೆಯನ್ನು ನಡೆಸಿ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಕಳೆದ ಫೆಬ್ರವರಿ ಮಾಹೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ, ಬಾಗೇಪಲ್ಲಿ, ಶಿಡ್ಲಘಟ್ಟ ಹಾಗೂ ಚೇಳೂರು ತಾಲ್ಲೂಕುಗಳಿಗೆ ಸಂಬಂಧಪಟ್ಟ ಪ್ರಕರಣಗಳನ್ನು ವಿಚಾರಣೆ ನಡೆಸಿ ಶೇ. 65 ರಷ್ಟು ಪ್ರಕರಣಗಳನ್ನು ಸ್ಥಳದಲ್ಲೆ ವಿಲೆವಾರಿ ಮಾಡಲಾಗಿತ್ತು. ಅದರ ಮುಂದುವರಿದ ಭಾಗವಾಗಿ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿ ತನಿಖೆಗೆ ಬಾಕಿ ಇರುವ 73 ದೂರು ಪ್ರಕರಣಗಳಲ್ಲಿ ಇಂದು ವಿಚಾರಣೆ ನಡೆಸಲಾಗಿದೆ. ಬಹುತೇಕ ಪ್ರಕರಣಗಳು ಇತ್ಯರ್ಥವಾಗಿವೆ. ಕಂದಾಯ, ಗ್ರಾಮೀಣ ಮತ್ತು ಪಂಚಾಯತ್ ರಾಜ್ ಅಭಿವೃದ್ಧಿ ಹಾಗೂ ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದ ಪ್ರಕರಣಗಳೆ ಹೆಚ್ಚಿನ



ಸಂಖ್ಯೆಯಲ್ಲಿವೆ. ಚಿಕ್ಕಬಳ್ಳಾಪುರ ಜಿಲ್ಲೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉತ್ತಮ ಸ್ಪಂದನೆ ನೀಡಿದ್ದು, ವಿಚಾರಣೆಯು ಶಾಂತಿಯುತವಾಗಿ ಜರುಗಿತು. ಇತ್ಯರ್ಥಗೊಂಡ ಪ್ರಕರಣಗಳಲ್ಲಿ ದೂರುದಾರರು ನೆಮ್ಮದಿಯ ಮಾತುಗಳನ್ನಾಡಿ ಧನ್ಯವಾದಗಳನ್ನು ತಿಳಿಸಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು.

ಸರ್ಕಾರದ ಯಾವುದೇ ಇಲಾಖೆಯ ಅಧಿಕಾರಿಗಳು ಹಾಗೂ ನೌಕರರಿಗೆ ಸಾರ್ವಜನಿಕರಿಂದ ಯಾವುದೇ ದೂರು ಅಥವಾ ಅರ್ಜಿ ಬಂದಲ್ಲಿ ಅದನ್ನು ಮೊದಲು ಪರಿಶೀಲಿಸಿ ತಮ್ಮ ವ್ಯಾಪ್ತಿಗೆ ಬರುತ್ತದೆಯೇ ಇಲ್ಲವೇ ಎಂಬುದನ್ನು ಖಚಿತಪಡಿಸಿಕೊಂಡು, ಒಂದು ವೇಳೆ ತಮ್ಮ ವ್ಯಾಪ್ತಿಗೆ ಬರುತ್ತದೆ ಎನ್ನುವುದಾದರೆ ಆ ದೂರು, ಅರ್ಜಿಗೆ ಸಂದರ್ಭೋಚಿತವಾಗಿ, ಸಮಯೋಚಿತವಾಗಿ ಆದಷ್ಟು ಶೀಘ್ರವಾಗಿ ಕಾನೂನಾತ್ಮಕವಾಗಿ ಪರಿಹಾರ ದೊರಕಿಸಿಕೊಡಬೇಕು. ಒಂದು ವೇಳೆ ಆ ದೂರು ಅಥವಾ ಅರ್ಜಿ ತಮ್ಮ ವ್ಯಾಪ್ತಿಗೆ ಬರದಿದ್ದಲ್ಲಿ ಸಂಬಂಧಿಸಿದ ದೂರುದಾರ ಅಥವಾ ಅರ್ಜಿದಾರರನ್ನು ಕರೆಯಿಸಿ ಸೂಕ್ತ ಮಾರ್ಗದರ್ಶನ ನೀಡಬೇಕು. ದೂರು ಅರ್ಜಿಯನ್ನು ಶೀಘ್ರ ವಿಲೇವಾರಿ ಮಾಡಿ ಮುಕ್ತಿ ದೊರಕಿಸಿಕೊಡಬೇಕೆ ಹೊರತು ಅನವಶ್ಯಕವಾಗಿ ಕಾಲಹರಣ ಮಾಡಬಾರದು. ಸಂವಿಧಾನವು ಸರ್ಕಾರದ ಮೂಲಕ ನೀಡಿರುವ ಹುದ್ದೆ, ಸ್ಥಾನಮಾನ, ಅವಕಾಶ ಹಕ್ಕುಗಳನ್ನು ಸಾರ್ವಜನಿಕರ ಸೇವೆ ಅಥವಾ ಶ್ರೇಯೋಭಿವೃದ್ಧಿಗೆ ಪೂರಕವಾಗಿ ಬಳಸಬೇಕು. ಇದು ಸಂವಿಧಾನ ನೀಡಿರುವ ಕರ್ತವ್ಯವಾಗಿದ್ದು, ಅದನ್ನು ನ್ಯಾಯಯುತ ರೀತಿ ಮಾರ್ಗದಲ್ಲಿ ಕಾರ್ಯಗತಗೊಳಿಸಲು ಹಿಂಜರಿಯುವುದು ಬೇಡ. ಯಾವುದೇ ಸಾರ್ವಜನಿಕರು ವೃಥಾ ದುರುದ್ದೇಶಪೂರಿತವಾಗಿ ದೂರು ಅಥವಾ ಅರ್ಜಿ ನೀಡುವುದಿಲ್ಲ. ಸಾರ್ವಜನಿಕರೂ ಈ ವಿಚಾರದಲ್ಲಿ ಅತ್ಯಂತ ಹೊಣೆಗಾರಿಕೆ ಮತ್ತು ಬದ್ಧತೆಯಿಂದ ನಡೆದುಕೊಳ್ಳಬೇಕು. ಸಾರ್ವಜನಿಕರು ಯಾವುದೇ ಅಧಿಕಾರಿ ಅಥವಾ ನೌಕರರ ವಿರುದ್ಧದ ದೂರು ಅರ್ಜಿಯನ್ನು ಸಕಾರಾತ್ಮಕವಾಗಿ ನೀಡಬೇಕೇ ಹೊರತು ದುರುದ್ದೇಶಪೂರಿತವಾಗಿ ಅಲ್ಲ. ಅಧಿಕಾರಿ ಮತ್ತು ನೌಕರರು ಸಾರ್ವಜನಿಕರ ಸಮಸ್ಯೆ, ಕುಂದುಕೊರತೆ ದೂರು ಅರ್ಜಿಗಳನ್ನು ಪರಿಶೀಲಿಸದೆ ಏಕಾಏಕಿ ನಕಾರಾತ್ಮಕ ಮನೋಧೋರಣೆಯಿಂದ ನೋಡಬಾರದು. ನ್ಯಾಯಾಲಯಗಳಿಗೆ ಹೋಗುವವರೆಲ್ಲಾ ಜಗಳ ಮಾಡುವವರಲ್ಲ. ಬದಲಿಗೆ, ತಮ್ಮ ಹಕ್ಕು ಬಾಧ್ಯತೆಗಳನ್ನು ಕಾನೂನಾತ್ಮಕವಾಗಿ ಸ್ಥಾಪಿಸಿಕೊಳ್ಳಲು, ಪರಿಹರಿಸಿಕೊಳ್ಳಲು ಬಂದವರಾಗಿರುತ್ತಾರೆ ಎಂಬ ಸಾಮಾನ್ಯ ವಿಷಯವನ್ನು ಸೂಕ್ಷ್ಮವಾಗಿ ಗ್ರಹಿಸಬೇಕು. ಕೆಲಸವನ್ನು ನಿಷ್ಠೆ, ಪ್ರಾಮಾಣಿಕತೆಯಿಂದ ಮಾಡುತ್ತೇನೆಂಬ ಸಂಕಲ್ಪ ಮತ್ತು ಶಪಥ ಮಾಡಬೇಕೆಂದು ಸಲಹೆ ನೀಡಿದರು.

ಅರ್ಹರಿಗೆ ಸರ್ಕಾರಿ ಸೇವೆಗಳು ದೊರಕಬೇಕು. ಕಾನೂನಿನಡಿ ಉತ್ಪತ್ತಿಯಾಗುವ ಹಕ್ಕುಗಳ ರಕ್ಷಣೆಯಾಗಬೇಕು. ಕಾನುನಿನಡಿ ಉತ್ಪತ್ತಿಯಾಗುವ ಸೌಲತ್ತುಗಳು ಯಾವುದೇ ಒತ್ತಡಗಳಿಗೆ, ಪ್ರಲೋಬನೆಗಳಿಗೆ ಒಳಗಾಗದೆ ವಸ್ತುನಿಷ್ಠವಾಗಿ ಅರ್ಹರಿಗೆ ತಲುಪಬೇಕು. ಆಗ ನಾವು ಸರ್ಕಾರಿ ನೌಕರಿಯ ಸೇವೆಗೆ ಸೇರಿದ್ದಕ್ಕೆ ಸಾರ್ಥಕವಾಗುತ್ತದೆ. ಯಾವುದೇ ನಿರೀಕ್ಷೆ ಇಲ್ಲದೆ, ಎಲ್ಲಾ ಸರ್ಕಾರಿ ಅಧಿಕಾರಿಗಳು, ಸಿಬ್ಬಂದಿ ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ಎಲ್ಲರ ಮನೋಭಾವನೆ ಬದಲಾವಣೆ ಆಗಬೇಕು ಎಂದು ಉಪಲೋಕಾಯುಕ್ತರು ಆಡಳಿತ ವರ್ಗಕ್ಕೆ ನೀತಿ ಪಾಠ ತಿಳಿಸಿದರು.

ಈ ಸಂಧರ್ಭದಲ್ಲಿ ಜಿಲ್ಲಾಧಿಕಾರಿ ಜಿ.ಪ್ರಭು, ಜಿಲ್ಲಾ ಪಂಚಾಯತ್ ಸಿಇಓ ಡಾ. ವೈ.ನವೀನ್ ಭಟ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಹಿರಿಯ ಸಿವಿಲ್ ನ್ಯಾಯಾಧೀಶರಾದ ಕಿರಣ್ ಎಂ. ಪಾಟೀಲ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶಿಲ್ಪ, ಅಪರ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್, ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಅತಿಕ್ ಪಾಷಾ, ಲೋಕಾಯುಕ್ತದ ಎಸ್.ಪಿ. ಆಂಟೋನಿ ಜಾನ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ದೂರುದಾರರು ಸೇರಿದಂತೆ ಹಲವರು ಇದ್ದರು.

ಭಾರತ ಸಾರಥಿ
08/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸರ್ಕಾರಿ ಶಾಲೆಗಳ ಉಳಿವಿಗೆ ದಾನಿಗಳ ಸಹಕಾರ ಅಗತ್ಯ: ರಘುನಾಥ್



ಮಾಲೂರು

"ಸರ್ಕಾರದ ಅನುದಾನದ ಜೊತೆಗೆ ದಾನಿಗಳು ಹಾಗೂ ಸಿಎಸ್‌ಆರ್ ನಿಧಿಯಡಿ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಿದರೆ ಮಾತ್ರ ಶಿಕ್ಷಣಕ್ಕೆ ಉತ್ತೇಜನ ನೀಡಲು ಮತ್ತು ಸರ್ಕಾರಿ ಶಾಲೆಗಳನ್ನು ಉಳಿಸಲು ಸಾಧ್ಯವಾಗುತ್ತದೆ" ಎಂದು ಮುಖಂಡರಾದ ಎಸ್. ಎನ್. ರಘುನಾಥ್ ತಿಳಿಸಿದರು.

ತಾಲ್ಲೂಕಿನ ದೊಡ್ಡಶಿವಾರ ಪ್ರೌಢಶಾಲಾ ಸಂಕೀರ್ಣದಲ್ಲಿ ಬ್ಯಾಂಡೋ ಇಂಡಿಯಾ ಪ್ರೈವೇಟ್ ಲಿಮಿಟೆಡ್ ವತಿಯಿಂದ ನೂತನವಾಗಿ ನಿರ್ಮಿಸಿರುವ ಶಾಲಾ ಕೊಠಡಿಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೊಡ್ಡಶಿವಾರ ಸರ್ಕಾರಿ ಶಾಲೆಯನ್ನು ಗ್ರಾಮಸ್ಥರ ಸಹಕಾರದೊಂದಿಗೆ ಬ್ಯಾಂಡೋ ಇಂಡಿಯಾ ಸಂಸ್ಥೆಯು ಸಿಎಸ್‌ಆರ್ ಅನುದಾನದಡಿ ಅಭಿವೃದ್ಧಿಪಡಿಸಿರುವುದು ಮಾದರಿಯಾಗಿದೆ. ತಾಲ್ಲೂಕಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ವಿಶೇಷ ಕಾಳಜಿ ವಹಿಸಿ ಸರ್ಕಾರಿ ಶಾಲೆಗಳನ್ನು ನವೀಕರಿಸುತ್ತಿರುವುದು ಶ್ಲಾಘನೀಯ. ಬಡ ಮತ್ತು ಸಾಮಾನ್ಯ ವರ್ಗದ ಮಕ್ಕಳು ಹೆಚ್ಚಾಗಿ ಸರ್ಕಾರಿ ಶಾಲೆಗಳನ್ನು ಅವಲಂಬಿಸಿದ್ದು, ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತಹ ಉತ್ತಮ ಪರಿಸರ ಮತ್ತು ಗುಣಾತ್ಮಕ ಶಿಕ್ಷಣ ಇಲ್ಲಿ ದೊರೆಯಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಜಿ.ಪಂ. ಮಾಜಿ ಸದಸ್ಯ ರಾಮಸ್ವಾಮಿರೆಡ್ಡಿ, ಬ್ಯಾಂಡೋ ಕಂಪನಿಯ ಭಾರತೀಯ ಜನರಲ್ ಮ್ಯಾನೇಜರ್ ಗೌತಮ್ ಶರ್ಮ, ಜಪಾನ್ ಎಂಡಿ ಶಿಮುತಾನಿ, ಎಚ್.ಆರ್. ಜನಾರ್ಧನ್, ಬಿಇಓ ಬಿ.ಪಿ. ಕೆಂಪಯ್ಯ, ಕ್ಷೇತ್ರ ಸಮನ್ವಯಾಧಿಕಾರಿ ವೆಂಕಟಸ್ವಾಮಿ, ಇಸಿಓ ಶಶಿಧರ್ ಹಾಗೂ ಮುಖಂಡರಾದ ಶ್ರೀನಾಥ್ ಬುಜ್ಜಿ, ರವೀಂದ್ರರೆಡ್ಡಿ ಮತ್ತಿತರರು ಉಪಸ್ಥಿತರಿದ್ದರು.

# ಬಜಾರ್, ಗಂಗಮ್ಮಗುಡಿ ರಸ್ತೆಗಳ ಅಗಲೀಕರಣಕ್ಕೆ ಗ್ರೀನ್ ಸಿಗ್ನಲ್



ಚಿಕ್ಕಬಳ್ಳಾಪುರ

ಜನರ ಹಿತದೃಷ್ಟಿಯಿಂದ, ವ್ಯಾಪಾರ ವಹಿವಾಟು ಹಾಗೂ ತುರ್ತು ಆರೋಗ್ಯದ ಪರಿಹಾರ ಕ್ರಮದ ದೃಷ್ಟಿಯಿಂದ ನಗರದ ಬಜಾರ್ ರಸ್ತೆ ಮತ್ತು ಗಂಗಮ್ಮಗುಡಿ ರಸ್ತೆಗಳ ಅಗಲೀಕರಣ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಸದ್ಯದಲ್ಲೇ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದರು.

ನಗರದ ಬಜಾರ್ ರಸ್ತೆ ಮತ್ತು ಗಂಗಮ್ಮಗುಡಿ ರಸ್ತೆಗೆ ಭೇಟಿ ನೀಡಿ ಅಲ್ಲಿನ ವ್ಯಾಪಾರಸ್ಥರು ಹಾಗೂ ನಿವಾಸಿಗಳ ಅಹವಾಲುಗಳನ್ನು ಸ್ವೀಕಾರ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಗಂಗಮ್ಮಗುಡಿ ರಸ್ತೆ ಮತ್ತು ಬಜಾರ್ ರಸ್ತೆಗಳ ಅಗಲೀಕರಣ ಮತ್ತು ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಲು ಸರ್ಕಾರ ಈಗಾಗಲೇ ಅನುದಾನವನ್ನು ಬಿಡುಗಡೆ ಮಾಡಿದೆ. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸ್ಥಳೀಯ ಶಾಸಕರು ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದ್ದಾರೆ. ಅನಧಿಕೃತವಾಗಿ ರಸ್ತೆಯನ್ನು ಒತ್ತುವರಿ ಮಾಡಿಕೊಂಡಿರುವ ನಿವಾಸಿಗಳು ಹಾಗೂ ವ್ಯಾಪಾರಸ್ಥರು ಸಹ ಒತ್ತುವರಿ ಜಾಗದ ತಮ್ಮ ಕಟ್ಟಡಗಳನ್ನು ಸ್ವಯಂ ಪ್ರೇರಿತರಾಗಿ ತೆರವುಗೊಳಿಸುವುದಾಗಿ ಭರವಸೆ ನೀಡಿದ್ದಾರೆ. ನಗರದ ಅಭಿವೃದ್ಧಿ ದೃಷ್ಟಿಯಿಂದ ಹಾಗೂ ಸುಗಮ ಸಂಚಾರದ ಹಿತದೃಷ್ಟಿಯಿಂದ ಈ ರಸ್ತೆಗಳ ಅಭಿವೃದ್ಧಿ ಕಾರ್ಯ ಅನಿವಾರ್ಯವಾಗಿದೆ. ಈ ನಿಟ್ಟಿನಲ್ಲಿ ಈ ರಸ್ತೆಯ ಇಕ್ಕೆಲಗಳಲ್ಲಿನ ಎಲ್ಲ ಅಂಗಡಿ ಮಳಿಗೆಗಳ ಮಾಲೀಕರು, ವ್ಯಾಪಾರಸ್ಥರು, ನಿವಾಸಿಗಳು ಸಹಕಾರ ನೀಡುವಂತೆ ಕೋರಿದರು.

ಚಿಕ್ಕಬಳ್ಳಾಪುರ ನಗರಸಭೆ ವ್ಯಾಪ್ತಿಯಲ್ಲಿ ಗೌರಿಬಿದನೂರು ಮತ್ತು ಚಿಂತಾಮಣಿ ತಾಲ್ಲೂಕುಗಳನ್ನು ಸಂಪರ್ಕಿಸುವ ರಸ್ತೆಯನ್ನು ಈಗಾಗಲೇ ಅಗಲೀಕರಣ ಮಾಡಿ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಅದೇ ರೀತಿ ಬಜಾರ್ ರಸ್ತೆ ಮತ್ತು ಗಂಗಮ್ಮಗುಡಿ ರಸ್ತೆಗಳನ್ನು ಎಲ್ಲರ ಸಹಕಾರ ಪಡೆದು ಅಭಿವೃದ್ಧಿ ಪಡಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ನಿರ್ದೇಶಕ ಮಂಜುನಾಥ್, ನಗರಸಭೆ ಪೌರಾಯುಕ್ತ ಮನ್ಸೂರ್ ಅಲಿ, ನಗರಸಭೆ ಸದಸ್ಯರು, ಸ್ಥಳೀಯ ವ್ಯಾಪಾರಸ್ಥರು ಹಾಗೂ ನಿವಾಸಿಗಳು ಹಾಜರಿದ್ದರು.

# ವೈಶಿಷ್ಟ್ಯಪೂರ್ಣ ಬರವಣಿಗೆಯೇ ಪತ್ರಕರ್ತನಿಗೆ ಗುರುತು: ಚಂದ್ರಶೇಖರ್



ಕೋಲಾರ

ಪತ್ರಿಕೆಗಳಲ್ಲಿ ಪ್ರಕಟವಾದ ಸುದ್ದಿಗಳನ್ನು ಜನರು ಗುರುತಿಸಿ ಶ್ಲಾಘಿಸುವಂತೆ ಆದಾಗ ಮಾತ್ರ ಪತ್ರಕರ್ತರಾಗಿರುವುದು ಸಾರ್ಥಕವಾಗುತ್ತದೆ. ಸುದ್ದಿಗಳು ಕಾಪಿ ರೈಟ್ ಇಲ್ಲದೆ ವಿಭಿನ್ನ. ವಿಶಿಷ್ಟತೆಯನ್ನು ಹೊಂದಿರುವಂತ ಸುದ್ದಿಗಳನ್ನು ಬರೆಯುವ ಮೂಲಕ ಓದುಗರ ಗಮನ ಸೆಳೆಯುವಂತೆ ಆದಾಗ ಮಾತ್ರ ಪತ್ರಕರ್ತರು ಪ್ರತಿಭಾವಂತರಾಗಿ ಸಮಾಜದಲ್ಲಿ ಗುರುತಿಸಲು ಸಾಧ್ಯವಾಗುವುದು ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಕೆ.ಚಂದ್ರಶೇಖರ್ ಅಭಿಪ್ರಾಯಪಟ್ಟರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಕೊಡ ಮಾಡುವ 2024ನೇ ಸಾಲಿನಲ್ಲಿ ಸುಣ್ಣವಂಡ ಶ್ರೀನಿವಾಸ್ ಚಂಗಪ್ಪ ಪ್ರಶಸ್ತಿಗೆ ಭಜನರಾದ ಮುಳಬಾಗಿಲಿನ ಹಿರಿಯ ಪತ್ರಕರ್ತರಾದ ಎ.ಅಪ್ಪಾಜಿಗೌಡ ಮತ್ತು ಮಂಡ್ಯದ ಕೆ.ಪ್ರಹ್ಲಾದ ರಾವ್ ಪ್ರಶಸ್ತಿಗೆ ಭಜನರಾದ ಬಂಗಾರಪೇಟೆ ವರದಿಗಾರರಾದ ಕೆ.ರಮೇಶ್ ಅವರಿಗೆ ನಗರದ ಪತ್ರಕರ್ತರ ಭವನದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಆಯೋಜಿಸಿದ್ದ ಅಭಿನಂದನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ ಶ್ರಮಕ್ಕೆ ತಕ್ಕ ಪ್ರತಿಫಲ ಸಿಕ್ಕಂತೆ ಪತ್ರಿಕೋದ್ಯಮದಲ್ಲಿ ಸಾಧನೆ ಮಾಡಿದವರಿಗೆ ಸ್ವಲ್ಪ ತಡವಾಗಿಯಾದರೂ ಪ್ರಶಸ್ತಿ ಸಿಗುವುದು ಖಚಿತ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ನಮ್ಮ ಬರವಣಿಗೆ ಮೂಲಕ ಜನರು ನಮ್ಮನ್ನು ಗುರುತಿಸುತ್ತಾರೆ ಹೊರತು ಪತ್ರಕರ್ತರ ಸಂಘದಲ್ಲಿ ನಾನು ಪದಾಧಿಕಾರಿಯಾದರೆ ನಮ್ಮನ್ನ ಜನರು ಗುರುತಿಸುತ್ತಾರೆ ಎಂಬ ಭ್ರಮೆಯಲ್ಲಿ ಕೆಲವು ಪತ್ರಕರ್ತರು ಇದ್ದಾರೆ. ಪ್ರಶಸ್ತಿಗಳು ಸುಮ್ಮನೆ ಬರೋದಿಲ್ಲ ನಮ್ಮ ಬರವಣಿಗೆ ನಮಗೆ ಎಲ್ಲಾ ರೀತಿಯ ಅವಕಾಶಗಳನ್ನು ಒದಗಿಸುತ್ತದೆ. ಪತ್ರಕರ್ತರಿಗೆ ಪ್ರಶಸ್ತಿಗಳು ಬಂದಾಗ ಅವರನ್ನ ಪ್ರೋತ್ಸಾಹಿಸುವ ಕೆಲಸ ಮಾಡಬೇಕು. ಅದು ಬಿಟ್ಟು ಅಸೂಹೆ ಪಡಬಾರದು. ಪತ್ರಕರ್ತರ ಸಂಘದಿಂದ ಪ್ರಶಸ್ತಿ ಪುರಸ್ಕೃತರನ್ನು ಪ್ರೋತ್ಸಾಹಿಸುವ ಕೆಲಸ ಮಾಡಿಕೊಂಡು ಬರುತ್ತಿದ್ದೇವೆ ಎಂದು ಹೇಳಿದರು.

ಹಿರಿಯ ಪತ್ರಕರ್ತ ಪಾ.ಶ್ರೀ. ಅನಂತರಾಮ್ ಮಾತನಾಡಿ, ರಾಜ್ಯ ಮಾಧ್ಯಮ ಅಕಾಡೆಮಿ ಪ್ರಶಸ್ತಿಗೆ ಆಯ್ಕೆಯಾಗಿರುವ ಅಪ್ಪಾಜಿಗೌಡರು ಮತ್ತು ಕೆ.ರಮೇಶ್ ಇಬ್ಬರೊಂದಿಗೆ ತಮ್ಮ ಒಡನಾಟವನ್ನು ನೆನಪಿಸಿದ ಅವರು ಜಿಲ್ಲಾ ಪತ್ರಕರ್ತರ ಸಂಘವು ಇವರನ್ನು ಅಭಿನಂದಿಸಿ ಗೌರವಿಸುತ್ತಿರುವುದು ಸಂಪ್ರಾದಯವಾಗಿದೆ. ಇಬ್ಬರಿಗೆ ಪತ್ರಿಕೋದ್ಯಮದಲ್ಲಿ ಬದ್ದತೆ, ಕಾಳಜಿ ಹೊಂದಿರುವಂತವರಿಗೆ ಪ್ರಸಸ್ತಿ ಲಭಿಸಿರುವುದು ಸಮಾಂಜಸವಾಗಿದೆ ಎಂದು ಅಭಿಪ್ರಾಯ ಪಟ್ಟರು.

ಇಬ್ಬರಲ್ಲೂ ಸಹಾಯದ ಮನೋಭಾವ ಇದೆ. ಯಾವೂದೇ ವಿಷಯಗಳ ಸುದ್ದಿಗಳನ್ನು ಮಾಡಲು ತಿಳಿಸಿದಾಗ ಅಚ್ಚುಕಟ್ಟಾಗಿ ವರದಿ ನೀಡುತ್ತಿದ್ದರು. ಪತ್ರಿಕೋದ್ಯಮದ ಬಗ್ಗೆ ಇಬ್ಬರಲ್ಲೂ ಇರುವಂತ ಕಾಳಜಿಯು ಅಭಿನಂದಾರ್ಹವಾಗಿದೆ ಎಂದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಎ.ಜಿ.ಸುರೇಶ್ ಕುಮಾರ್ ಪ್ರಸ್ತಾವಿಕ ನುಡಿಗಳನ್ನಾಡಿ, ಪತ್ರಕರ್ತರು ತಮ್ಮ ವೃತ್ತಿಗೆ ಗೌರವ ಕೊಟ್ಟು ಶ್ರದ್ಧೆಯಿಂದ ಕೆಲಸ ಮಾಡಿದಾಗ ಮಾತ್ರ ಪ್ರಶಸ್ತಿಗಳು ತಾನೇ ಹುಡುಕಿಕೊಂಡು ಬರುತ್ತವೆ. ಇದರ ಬಗ್ಗೆ ಯುವ ಪತ್ರಕರ್ತರು ಗಮನ ಹರಿಸಬೇಕೆಂದು ಕಿವಿ ಮಾತು ಹೇಳಿದರು.

ಪತ್ರಕರ್ತರ ಸಂಘದ ವತಿಯಿಂದ ನಡೆಯುವ ಯಾವುದೇ ಕಾರ್ಯಕ್ರಮಗಳಾಗಲಿ ಪತ್ರಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರೋತ್ಸಾಹಿಸಿದಾಗ ಮಾತ್ರ ಪ್ರಶಸ್ತಿ ಪುರಸ್ಕೃತರಿಗೆ ಗೌರವ ನೀಡಿದಂತಾಗುತ್ತದೆ ಎಂದರು

ಅಭಿನಂದನೆ ಸ್ವೀಕರಿಸಿದ ಅಪ್ಪಾಜಿ ಗೌಡ ಮಾತನಾಡಿ ವಿದ್ಯಾರ್ಥಿ ದೆಸೆಯಿಂದಲೂ ಪತ್ರಿಕೋದ್ಯಮವನ್ನು ಹವ್ಯಾಸವಾಗಿ ರೊಡಿಸಿ ಕೊಂಡು ಬಂದೆ. ಪೊಲೀಸ್ ಹಾಗೂ ಕಂಡೆಕ್ಟರ್ ಹುದ್ದೆಗಳು ಅರಿಸಿ ಬಂದಿದ್ದರೂ ಹೋಗಲಿಲ್ಲ. ವಿವಿದ ಪತ್ರಿಕೆಗಳಲ್ಲಿ ಹಾಗೂ ಹಿರಿಯ ಪತ್ರಕರ್ತರೊಂದಿಗೆ ಕಾರ್ಯನಿರ್ವಹಿಸಿದ ಸಂದರ್ಭಗಳನ್ನು ಮೆಲುಕು ಹಾಕಿದರು. ಜಿಲ್ಲಾ ಪತ್ರಕರ್ತರ ಸಂಘದ ನಿರ್ದೇಶಕ ಸಿ.ವಿ.ನಾಗರಾಜ್ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು.

# ಬಿಜೆಪಿ ಸಿದ್ಧಾಂತದಡಿ ಯುವಶಕ್ತಿ ಒಗ್ಗೂಡಿಸಲು ರವಿತೇಜ ಕರೆ

ವಿಜಯಪುರ

ಪಕ್ಷದ ಸಿದ್ಧಾಂತದಡಿ ಯುವಕರನ್ನು ಸಂಘಟಿಸುವುದು ಮತ್ತು ಬೂತ್ ಮಟ್ಟದಲ್ಲಿ ಯುವ ಮೋರ್ಚಾವನ್ನು ಬಲಪಡಿಸುವುದು ನನ್ನ ಮುಖ್ಯ ಗುರಿಯಾಗಿದೆ ಎಂದು ತಾಲೂಕು ಯುವ ಮೋರ್ಚಾ ಉಪಾಧ್ಯಕ್ಷ ರವಿತೇಜ ಹೇಳಿದರು.

ಬಿಜೆಪಿ ತಾಲೂಕು ಅಧ್ಯಕ್ಷ ಅಂಬರೀಶ್ ಗೌಡ ನೇತೃತ್ವದಲ್ಲಿ, ತಾಲೂಕು ಯುವ ಮೋರ್ಚಾ ಅಧ್ಯಕ್ಷ ಮೋಹನ್ ಗೌಡ ಅವರಿಂದ ತಾಲೂಕು ಯುವ ಮೋರ್ಚಾದ ಉಪಾಧ್ಯಕ್ಷರಾಗಿ ಆದೇಶ ಪತ್ರವನ್ನು ಪಡೆದು ಮಾತನಾಡಿದರು.

ಯುವಜನರು ಬಿಜೆಪಿ ಮತ್ತು ಕೇಂದ್ರ ಸರಕಾರದ ಕಾರ್ಯಕ್ರಮಗಳನ್ನು ಮೆಚ್ಚಿ, ಪಕ್ಷದತ್ತ ಹೆಚ್ಚು ಒಲವು ತೋರುತ್ತಿದ್ದಾರೆ. ನನ್ನನ್ನು ಉಪಾಧ್ಯಕ್ಷರಾಗಿ ಆಯ್ಕೆ ಮಾಡಿದ್ದಕ್ಕೆ ತಾಲೂಕು ವರಿಷ್ಠರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಮಂಡಲ ಅಧ್ಯಕ್ಷರ ಮತ್ತು ಯುವಮೋರ್ಚಾ ಅಧ್ಯಕ್ಷರ ಮಾರ್ಗದರ್ಶನದಲ್ಲಿ ಒಗ್ಗಟ್ಟಾಗಿ ಪಕ್ಷದ ಸಂಘಟನೆಗೆ ಹೆಚ್ಚಿನ ಒತ್ತು ನೀಡುತ್ತೇನೆ. ಮುಂದಿನ ಚುನಾವಣೆಗಳಲ್ಲಿ, ಪಕ್ಷದ ಅಭ್ಯರ್ಥಿಗಳ ಗೆಲುವಿಗಾಗಿ ಕೆಲಸ ಮಾಡಲು ಯುವಜನರನ್ನು ಸಂಘಟಿಸಲಾಗುತ್ತದೆ ಎಂದರು.

ತಾಲೂಕು ಬಿಜೆಪಿ ಅಧ್ಯಕ್ಷ ಅಂಬರೀಶ್ ಗೌಡ ಮಾತನಾಡಿ, ಯುವ ಮೋರ್ಚಾ ಪಕ್ಷದ ಆತ್ಮವಿದ್ದಂತೆ. ಬಿಜೆಪಿಗೆ ದೇಶ ಮೊದಲು, ಪಕ್ಷ ನಂತರ. ದೇಶವು ಅಭಿವೃದ್ಧಿ ಪಥದಲ್ಲಿ ಮುಂದುವರಿಯಲು ಮತ್ತು ಸದೃಢ ಭಾರತ ನಿರ್ಮಾಣ ಮಾಡುವಲ್ಲಿ ಯುವ ಪೀಳಿಗೆಯ ಪಾತ್ರ ಅತ್ಯಂತ ಮುಖ್ಯವಾಗಿದ್ದು, ಉತ್ತಮ ಆಡಳಿತ, ಪ್ರಜಾಪ್ರಭುತ್ವ ಬಲಪಡಿಸುವ ನಿಟ್ಟಿನಲ್ಲೂ ಯುವಕರ ಪಾತ್ರ ನಿರ್ಣಾಯಕವಾಗಿದೆ ಎಂದರು.

ಬಿಜೆಪಿ ಮುಖಂಡ ಬಿ.ಕೆ.ನಾರಾಯಣಸ್ವಾಮಿ ,ಅಸಂಘಟಿತ ಕಾರ್ಮಿಕ ಪ್ರಕೋಷ್ಠ ಸಂಚಾಲಕ ಅನಿಲ್ ಕುಮಾರ್ ಸೇರಿದಂತೆ ಯುವ ಮೋರ್ಚಾ ಕಾರ್ಯಕರ್ತರು ಇದ್ದರು.



# ಫಸಲ್ ಭೀಮಾ ಯೋಜನೆ: 2,561 ರೈತರ ಪ್ರಸ್ತಾವನೆ ತಿರಸ್ಕಾರ

ಚಿಕ್ಕಬಳ್ಳಾಪುರ

ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಲ್ಲಿ 2024– 25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ನೋಂದಾಯಿಸಿದ ಪ್ರಸ್ತಾವನೆಗಳ ಪೈಕಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ, ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಅನುಮೋದನೆಯಾದ ವಿನಾಯಿತಿಗಳನ್ನು ಅಳವಡಿಸಿ ತಾಳೆಯಾಗದಿರುವ ಗೌರಿಬಿದನೂರು ತಾಲ್ಲೂಕಿನ 1,943 ಪ್ರಸ್ತಾವನೆಗಳು ಮತ್ತು ಮಂಚೇನಹಳ್ಳಿ ತಾಲ್ಲೂಕಿನ 618 ಪ್ರಸ್ತಾವನೆಗಳು (ಒಟ್ಟು 2,561 ಪ್ರಸ್ತಾವನೆಗಳು) ವಿಮಾ ಸಂಸ್ಥೆರವರಿಂದ ತಿರಸ್ಕೃತಗೊಂಡಿರುತ್ತವೆ.

ಈ ರೀತಿಯಾಗಿ ತಿರಸ್ಕೃತಗೊಂಡಿರುವ ಪ್ರಸ್ತಾವನೆಗಳ ಪಟ್ಟಿಯನ್ನು ಮಂಚೇನಹಳ್ಳಿ ತಾಲ್ಲೂಕಿನ ಮತ್ತು ಗೌರಿಬಿದನೂರು ತಾಲ್ಲೂಕಿನ ಎಲ್ಲಾ ಹೋಬಳಿಗಳ ರೈತ ಸಂಪರ್ಕ ಕೇಂದ್ರಗಳಲ್ಲಿ ಹಾಗೂ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗಳಲ್ಲಿ, ತಾಲ್ಲೂಕು ಆಡಳಿತ ಕಚೇರಿ, ತಾಲ್ಲೂಕು ಪಂಚಾಯ್ತಿ ಕಚೇರಿ, ತೋಟಗಾರಿಕೆ ಇಲಾಖೆ, ರೇಷ್ಮೆ ಇಲಾಖೆ ಮತ್ತು ಗ್ರಾಮ ಪಂಚಾಯ್ತಿಗಳಲ್ಲಿ ಪ್ರಕಟಿಸಲಾಗಿದೆ. ಈ ಸಂಬಂಧಪಟ್ಟ ಆಕ್ಷೇಪಣೆಗಳು ಇದ್ದಲ್ಲಿ ಮಾತ್ರ ಮರುಪರಿಶೀಲಿಸಲು ಮನವಿಯನ್ನು ಸಲ್ಲಿಸಬಹುದು. ಮನವಿಯೊಂದಿಗೆ ಅಗತ್ಯ ದಾಖಲೆಗಳನ್ನು ಏ. 27 ರೊಳಗಾಗಿ ಸಂಬಂಧಪಟ್ಟ ಹೋಬಳಿಯ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸಲ್ಲಿಸಬಹುದು. ಏ. 27 ರೊಳಗೆ ರೈತರಿಂದ ಯಾವುದೇ ಆಕ್ಷೇಪಣೆಗಳು ಬಾರದಿದ್ದಲ್ಲಿ ಎಲ್ಲಾ ಪ್ರಸ್ತಾವನೆಗಳನ್ನು ತಿರಸ್ಕೃತಗೊಳಿಸಲಾಗುವುದೆಂದು ತಿಳಿಸಿದೆ.

ಅಗತ್ಯ ದಾಖಲೆಗಳು: 2024–25ರ ಮುಂಗಾರು ಹಂಗಾಮಿನ ಪಹಣಿ ಪ್ರತಿಯಲ್ಲಿ ವಿಮೆಗೆ ನೋಂದಾಯಿಸಿದ ಬೆಳೆ ನಮೂದಾಗಿರಬೇಕು. ವಿಮೆಗೆ ನೋಂದಾಯಿಸಿದ ಬೆಳೆಯ ಉತ್ಪನ್ನಕ್ಕೆ ಬೆಂಬಲ ಬೆಲೆ ಪ್ರಯೋಜನೆ ಪಡೆದ ರಸೀದಿ, ವಿಮೆಗೆ ನೋಂದಾಯಿಸಿದ ಬೆಳೆಯ ಉತ್ಪನ್ನವನ್ನು ಎ.ಪಿ.ಎಂ.ಸಿ ಮಾರುಕಟ್ಟೆಗೆ ಮಾರಾಟ ಮಾಡಿದ ರಸೀದಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದೆಂದು ಗೌರಿಬಿದನೂರು ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರು ನೀಡಿರುವ ತಿಳಿಸಿದ್ದಾರೆ.

# ಮಣ್ಣಿನ ಕಾಯಕಕ್ಕೆ ಒಲಿದ ಜಾಗತಿಕ ಗೌರವ



ಶಿಡ್ಲಘಟ್ಟ

ಕೃಷಿ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿರುವ ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರಗೌಡ ಅವರಿಗೆ ಅಂತರಾಷ್ಟ್ರೀಯ ಮಟ್ಟದ ಗೌರವ ಲಭಿಸಿದೆ. ಆಸ್ಟ್ರೇಲಿಯಾದ ಮೆಲ್ಬೋರ್ನ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶೇಷ ಸಮಾರಂಭದಲ್ಲಿ ಮೆಲ್ಬೋರ್ನ್ ಕನ್ನಡ ಸಂಘ ಹಾಗೂ ಒಕ್ಕಲಿಗ ಯುವ ಬ್ರಿಗೇಡ್ ವತಿಯಿಂದ ಅವರಿಗೆ ಪ್ರತಿಷ್ಠಿತ 'ಮಣ್ಣಿನ ಮಗ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರು ಸೀಕಲ್ ರಾಮಚಂದ್ರಗೌಡ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀ ಪ್ರಸನ್ನನಾಥ ಸ್ವಾಮೀಜಿ, ಮೈಸೂರು ಸಂಸದ ಯದುವೀರ್ ಒಡೆಯರ್, ವಿಕ್ಟೋರಿಯಾ ಸರ್ಕಾರದ ಸಚಿವೆ ಕ್ಯಾಸ್ಸೇಂದ್ರ ಫೆರ್ನಾರ್ಂಡೋ, ಮೆಲ್ಬೋರ್ನ್ ಸಂಸದೆ ಈಡನ್ ಫಾಸ್ಟರ್, ಜೋಹಾನ್ ಮುಲ್ಲಾಹೇಯ್, ಭಾರತೀಯ ರಾಯಭಾರಿ ಅನಿಶ್ ರಂಜನ್, ರವಾಂಡಾ ಹೈ ಕಮಿಷನರ್ ಮೋಹನ್ ಸುರೇಶ್, ವಿಕ್ಟೋರಿಯಾ ಮೇಯರ್ ಸೋಫಿನಾಥ್ ಹಾಗೂ ಶ್ರೀನಿವಾಸ್ ಶರ್ಮ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ನಾನು ರಾಜಕೀಯ, ಆರೋಗ್ಯ ಹಾಗೂ ನಿರ್ಮಾಣ

# ಗೊನೆ ಪೋಷಣೆ ಪದ್ಧತಿಯಿಂದ ಗುಣಮಟ್ಟದ ಫಸಲು ಸಾಧ್ಯ



ಕೋಲಾರ

"ಬಾಳೆ ಬೆಳೆಯಲ್ಲಿ ಗೊನೆ ಪೋಷಣೆ ಮಾಡುವುದರಿಂದ ಗೊನೆಯ ತೂಕ ಹೆಚ್ಚಾಗುವುದರೊಂದಿಗೆ ಬೆಳೆಗಾರರು ಹೆಚ್ಚಿನ ಇಳುವರಿ ಮತ್ತು ಆದಾಯ ಗಳಿಸಬಹುದು" ಎಂದು ಕೋಲಾರ ತೋಟಗಾರಿಕಾ ಮಹಾವಿದ್ಯಾಲಯದ ಹಣ್ಣು ವಿಜ್ಞಾನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ನಾಗರಾಜ ಕೆ.ಎಸ್. ಅಭಿಪ್ರಾಯಪಟ್ಟರು.

ತಾಲ್ಲೂಕಿನ ಅರಹಳ್ಳಿ ಗ್ರಾಮದಲ್ಲಿ ಅಂತಿಮ ವರ್ಷದ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ಗ್ರಾಮೀಣ ತೋಟಗಾರಿಕಾ ಕಾರ್ಯಾನುಭವ ಶಿಬಿರದಲ್ಲಿ ಹಮ್ಮಿಕೊಳ್ಳಲಾದ 'ಬಾಳೆ ಬೆಳೆಯಲ್ಲಿ ಗೊನೆ ಪೋಷಣೆ ಪದ್ಧತಿ ಪ್ರಾತ್ಯಕ್ಷಿಕೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತಾಂತ್ರಿಕತೆ ಏನು?: ಬಾಳೆಗೊನೆಯ ಕೊನೆಯ ಕಾಯಿಗಳು ಕಚ್ಚಿದ ನಂತರ ಗಂಡು ಹೂವಿನ ಭಾಗವನ್ನು (ಮೂತಿ) ತೆಗೆದು, ಆ ಭಾಗಕ್ಕೆ ಸಗಣಿ, ಯೂರಿಯಾ ಮತ್ತು ಸಲ್ಫೇಟ್ ಆಫ್ ಪೊಟ್ಯಾಷ್ ಮಿಶ್ರಣವನ್ನು ಬಳಸಿ ಕಟ್ಟಬೇಕು. ಇದರಿಂದ ಕಾಯಿಗಳ ಗಾತ್ರ ಮತ್ತು ಗುಣಮಟ್ಟ ಹೆಚ್ಚಾಗುವುದಲ್ಲದೆ, ಗೊನೆಯು ಬೇಗನೆ ಪಕ್ವವಾಗಿ ಮಾರುಕಟ್ಟೆಯಲ್ಲಿ ಹೆಚ್ಚಿನ ಬೆಲೆ ತರುತ್ತದೆ ಎಂದು ಅವರು ವಿವರಿಸಿದರು.

ಇದೇ ಸಂದರ್ಭದಲ್ಲಿ ಸಸ್ಯರೋಗ ಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ. ಸದಾನಂದ ಮುಶ್ರೀಫ್ ಮಾತನಾಡಿ, "ಬಾಳೆಯನ್ನು ಕಲ್ಪತರು ಎಂದು ಕರೆಯಲಾಗುತ್ತದೆ. ನೀರಾವರಿ ಸೌಲಭ್ಯವಿದ್ದರೆ ಈ ಬೆಳೆಯಿಂದ ಅಧಿಕ ಲಾಭ ಗಳಿಸಲು ಹಲವು ತಾಂತ್ರಿಕತೆಗಳು ಲಭ್ಯವಿವೆ. ರೈತರು ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕಾ ಮಹಾವಿದ್ಯಾಲಯ ಅಥವಾ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳನ್ನು ಸಂಪರ್ಕಿಸಬಹುದು" ಎಂದರು.

# ಕೊಳಕು ನೀರಿನ ಕಾಟ: ಭೈರಮಂಗಲ ಗ್ರಾಮಗಳಲ್ಲಿ ಸೊಳ್ಳೆಗಳ ಅಟ್ಟಹಾಸ



ರಾಮನಗರ

ಕಲುಷಿತ ನೀರಿನಿಂದ ಕೂಡಿರುವ ತಾಲ್ಲೂಕಿನ ಭೈರಮಂಗಲ ಕೆರೆಯ ಸುತ್ತಮುತ್ತಲ ಗ್ರಾಮಗಳಲ್ಲಿ ಸೊಳ್ಳೆ ಹಾವಳಿ ಹೆಚ್ಚಾಗಿದ್ದು ಜನಜೀವನ ಅಸ್ತವ್ಯಸ್ತವಾಗಿದೆ. ಸಂಜೆಯಾಗುತ್ತಿದ್ದಂತೆ ಗುಂಯ್ ಗುಡುತ್ತಾ ದಾಳಿಯಿಡುವ ಸೊಳ್ಳೆಗಳ ಕಾಟಕ್ಕೆ ಜನರು ನಲುಗುವಂತಾಗಿದೆ.

ವೃಷಭಾವತಿ ನದಿಯ ಮೂಲಕ ವರ್ಷಪೂರ್ತಿ ಹರಿಯುವ ಕೊಳಕು ನೀರು ಭೈರಮಂಗಲ ಜಲಾಶಯದಲ್ಲಿ ಸಂಗ್ರಹವಾಗಿ ನಂತರ ಎಡದಂಡೆ ಮತ್ತು ಬಲದಂಡೆ ನಾಲೆಗಳು ಹಾಗೂ ವೃಷಭಾವತಿ ಕಣಿವೆಯಲ್ಲಿ ಹರಿಯುತ್ತದೆ. ಇದರ ಪರಿಣಾಮ ಸೊಳ್ಳೆಗಳ ಉತ್ಪತ್ತಿ ಮಿತಿಮೀರಿದ್ದು ಈ ಸಮಸ್ಯೆ ಇದೀಗ ಜನಜಾನುವಾರುಗಳ ಆರೋಗ್ಯಕ್ಕೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಭೈರಮಂಗಲ ಕೆರೆಯ ಸಮೀಪದಲ್ಲಿರುವ ಗ್ರಾಮಗಳು ಸೊಳ್ಳೆಗಳಿಂದ ತುಂಬಿಹೋಗಿದ್ದು ನಿಯಂತ್ರಣ ಸಾಧ್ಯವಿಲ್ಲವೇ? ಎನ್ನುವ ಪ್ರಶ್ನೆ ಕಾಡುತ್ತಿದೆ.

ಪ್ರತಿದಿನ ಹಳ್ಳಿಗಳು ಸಂಜೆ ಮತ್ತು ರಾತ್ರಿ ವೇಳೆಯಲ್ಲಿ ಸೊಳ್ಳೆಗಳಿಂದ ತುಂಬಿರುತ್ತವೆ. ಜೇನುನೊಣಗಳಂತೆ ಗುಂಪುಗೂಡಿ ದಾಳಿಯಿಡುವ ಸೊಳ್ಳೆಗಳು ಜನರ ನೆಮ್ಮದಿಯನ್ನು ಕಸಿದಿವೆ. ಕತ್ತಲಾಗುತ್ತಿದ್ದಂತೆ ಜನಜಾನುವಾರುಗಳ ಮೇಲೆ ಎರಗುವ ಸೊಳ್ಳೆಗಳಿಗೆ ಹೆದರಿದ ಜನರು ಕಿಟಕಿ ಬಾಗಿಲುಗಳನ್ನು ಮುಚ್ಚಿ ಮನೆ ಸೇರಿಕೊಳ್ಳುತ್ತಾರೆ. ಹೀಗಾಗಿ ಸಂಜೆ 7 ಗಂಟೆಯ ವೇಳೆಗಾಗಲೆ ಹಳ್ಳಿಯ ಹಾದಿಬೀದಿಗಳು ಬಿಕೋ ಎನ್ನುತ್ತವೆ. ವಿಪರೀತ ಸೊಳ್ಳೆಗಳ ಕಾಟದ ದೂರುಗಳಿದ್ದರೂ ಸಹ ಆರೋಗ್ಯ ಇಲಾಖೆ ಅಕಾರಿಗಳು ನಿಯಂತ್ರಣ ಅಸಾಧ್ಯವೆಂದರಿತು ಕೈಚೆಲ್ಲಿ ಕುಳಿತಿದ್ದಾರೆ.

**ಕೊಳಚೆ ಪ್ರದೇಶ ಸೊಳ್ಳೆಗಳ ಉಗಮಸ್ಥಾನ:** ಬೇಸಿಗೆಯಲ್ಲಿ ಕೊಳಕು ಸ್ಥಳಗಳಲ್ಲಿ ಸೊಳ್ಳೆಗಳು ಹೆಚ್ಚು ಉತ್ಪತ್ತಿಯಾಗುತ್ತವೆ. ಕಲ್ಮಶ ನೀರಿನಿಂದ ಆವೃತವಾಗಿರುವ ಭೈರಮಂಗಲ ಕೆರೆ ಮತ್ತು ವೃಷಭಾವತಿ ಕಣಿವೆ ಹಾಗೂ ತೋಟತುಡಿಕೆ ಪ್ರದೇಶಗಳು ಸೊಳ್ಳೆಗಳ ಉತ್ಪಾದನಾ ಕೇಂದ್ರಗಳಾಗಿವೆ. ಹಗಲು ರಾತ್ರಿ ದಾಂಗುಡಿ ಇಡುತ್ತಿರುವ ಸೊಳ್ಳೆಗಳು ಗ್ರಾಮೀಣ ಜನರ ನಿದ್ದೆಗೆಡಿಸಿವೆ. ಬೇಸಿಗೆ ಸಮಯದಲ್ಲಿ ಸೊಳ್ಳೆಗಳಿಂದ ಉಂಟಾಗುವ ರೋಗಗಳ ಅಪಾಯ ಹೆಚ್ಚಾಗಿರುತ್ತದೆ. ದಿನವೂ ಸೊಳ್ಳೆ ಕಡಿತದಿಂದ ತಪ್ಪಿಸಿಕೊಳ್ಳಲಾಗದೆ ಇದೊಂದು ದೊಡ್ಡ ರಗಳೆಯಾಗಿ ಮಾರ್ಪಟ್ಟಿದೆ.

**ಯೋಜನೆ ಅನುಷ್ಠಾನ ಸಮಸ್ಯೆಗೆ ಪರಿಹಾರ:** ಭೈರಮಂಗಲ ಕೆರೆ ಶುದ್ಧೀಕರಣ, ತಿರುವು ನಾಲೆ ಮತ್ತು ಸಂಸ್ಕರಣಾ ಘಟಕ ನಿರ್ಮಾಣ ಯೋಜನೆಯಿಂದ ಮಾತ್ರ ಹತ್ತಾರು ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ. ಕೊಳಕು ನೀರನ್ನು ಬೇರ್ಪಡಿಸಿ 4 ಕಿ.ಮೀ ಉದ್ದದ ಡೈವರ್ಷನ್ ಚಾನಲ್ ನಿರ್ಮಿಸುವುದು. ಹೂಳು ತೆಗೆಸಿ ಶುದ್ಧೀಕರಿಸಿದ ನೀರನ್ನು ಕೆರೆಗೆ ತುಂಬಿಸುವ ಬಹುನಿರೀಕ್ಷಿತ ಯೋಜನೆ ಅರ್ಧಕ್ಕೆ ನಿಂತಿದೆ. ಸಮಸ್ಯೆಗೆ ಪರಿಹಾರ ದೊರೆಯುವ ಯೋಜನೆಗೆ ಮರುಚಾಲನೆ ನೀಡುವ ಮನೋಭಾವ ಯಾರಿಗೂ ಇಲ್ಲದಂತಾಗಿದೆ. ಹೀಗಾಗಿ 258 ಕೋಟಿ ವೆಚ್ಚದ ಮಹತ್ವಾಕಾಂಕ್ಷೆ ಯೋಜನೆ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿದೆ.

**ಕೋರ್ಟ್ ಮೆಟ್ಟಿಲೇರಿದ ಕಾರಣ ಕಾಮಗಾರಿ ಸ್ಥಗಿತ:** 2019ರಲ್ಲಿ ಕಾಂಗ್ರೆಸ್–ಜೆಡಿಎಸ್ ಮೈತ್ರಿ ಸರಕಾರದ ಅವಧಿಯಲ್ಲಿ ಯೋಜನೆಗೆ ಚಾಲನೆ ದೊರೆತಿತ್ತು. ಶ್ಯಾನುಮಂಗಲ ಬಳಿಯಿಂದ ಭೈರಮಂಗಲ ಕೆರೆಯವರೆಗೆ ಬೈಪಾಸ್ ಚಾನಲ್ ನಿರ್ಮಾಣ ಕಾಮಗಾರಿ ಶೇ.50ರಷ್ಟು ಮುಗಿದಿತ್ತು ಜತೆಗೆ ಭೈರಮಂಗಲ ಕೆರೆಯ ಶುದ್ಧೀಕರಣ ಕಾಮಗಾರಿಯೂ ಬಿರುಸಿನಿಂದ ನಡೆಯುತ್ತಿತ್ತು. ಈ ಸಂದರ್ಭದಲ್ಲಿ ಬೆಂಗಳೂರಿನ ಕೆಲವು ಪರಿಸರವಾದಿಗಳು ತಿರುವು ನಾಲೆ ನಿರ್ಮಾಣ ಮತ್ತು ಶುದ್ಧೀಕರಣ ಯೋಜನೆಯನ್ನು ಪ್ರಶ್ನಿಸಿ ನ್ಯಾಯಾಲಯದ ಮೆಟ್ಟಿಲೇರಿದ ಕಾರಣ ಕಾಮಗಾರಿ ಸ್ಥಗಿತಗೊಂಡಿತು.

**ಯಥಾಸ್ಥಿತಿಗೆ ತಲುಪಿದ ಸಮಸ್ಯೆ:** ಜನಪ್ರತಿನಿಗಳು ಹಾಗೂ ಸಂಬಂಸಿದ ಇಲಾಖಾಧಿಕಾರಿಗಳಿಗೆ ಕಾಳಜಿಯಿಲ್ಲದಾಗಿ ನ್ಯಾಯಾಲಯಕ್ಕೆ ಸಕಾಲದಲ್ಲಿ ವಾಸ್ತವಾಂಶ ಕುರಿತ ಅಗತ್ಯ ದಾಖಲೆಗಳನ್ನು ಒದಗಿಸಿಲ್ಲ. ಜನಪ್ರತಿನಿಗಳ ಬೇಜವಾಬ್ದಾರಿತನ ಮತ್ತು ಅಧಿಕಾರಿಗಳ ನಿರ್ಲಕ್ಷ ಧೋರಣೆಯಿಂದ ಸರಕಾರದ ಕೋಟ್ಯಾಂತರ ಹಣ ನಷ್ಟವಾಗಿದೆ. ಯೋಜನೆ ಕಾಮಗಾರಿಗಳು ಸ್ಥಗಿತಗೊಂಡ ಕಾರಣ ಇದೀಗ ಬೈಪಾಸ್ ಕೆನಾಲ್ ತಡೆಗೋಡೆ ಶಿಥಿಲವಾಗುವ ಜತೆಗೆ ಭೈರಮಂಗಲ ಕೆರೆ ಹೂಳು ತುಂಬಿಕೊಂಡು ಯಥಾಸ್ಥಿತಿಗೆ ತಲುಪಿದೆ.

ಭೈರಮಂಗಲ ಕೆರೆ ಶುದ್ಧೀಕರಣ ಹಾಗೂ ವೃಷಭಾವತಿ ತಿರುವು ನಾಲೆ ನಿರ್ಮಾಣ ಯೋಜನೆ ಸ್ಥಗಿತವಾಗಿ ಏಳು ವರ್ಷಗಳು ಕಳೆದಿವೆ. ಯೋಜನೆಯ ವಾಸ್ತವ ಸ್ಥಿತಿ ಗತಿ ಕುರಿತು ನ್ಯಾಯಾಲಯಕ್ಕೆ ದಾಖಲೆಗಳನ್ನು ಒದಗಿಸಲು ಸಂಬಂಧಪಟ್ಟ ಇಲಾಖಾಧಿಕಾರಿಗಳು ವಿಫಲರಾಗಿದ್ದಾರೆ. ಪರಿಸರ ಸಂರಕ್ಷಣೆ ಹಾಗೂ ಜನ–ಜಾನುವಾರುಗಳ ಆರೋಗ್ಯದ ಹಿತದೃಷ್ಟಿಯಿಂದ ಅನುಷ್ಠಾನವಾಗಲಿರುವ ಯೋಜನೆ ಅವೈಜ್ಞಾನಿಕ ಎಂದು ನ್ಯಾಯಾಲಯಕ್ಕೆ ತಪ್ಪುಮಾಹಿತಿ ನೀಡುವುದು ಸರಿಯಲ್ಲ. ಇದರಿಂದ ಜನಜಾನುವಾರುಗಳ ಮೇಲೆ ಉಂಟಾಗುತ್ತಿರುವ ಹತ್ತಾರು ರೀತಿಯ ದುಷ್ಪರಿಣಾಮಗಳ ಬಗ್ಗೆ ಗಮನಹರಿಸಲಿ ಎನ್ನುವ ಕೂಗು ಎದ್ದಿದೆ.

> ಬೆಂಗಳೂರಿನ ಕೆಲವು ಪರಿಸರವಾದಿಗಳು ಕೋರ್ಟ್ ಮೆಟ್ಟಿಲೇರಿದ ಕಾರಣ ಭೈರಮಂಗಲ ಕೆರೆ ಶುದ್ಧೀಕರಣ, ಸಂಸ್ಕರಣಾ ಘಟಕ ಹಾಗೂ ಡೈವರ್ಷನ್ ಚಾನಲ್ ಯೋಜನೆ ಕಾಮಗಾರಿ ವಿಳಂಬವಾಗಿದೆ. ನ್ಯಾಯಾಲಯಕ್ಕೆ ಅಗತ್ಯ ದಾಖಲೆಗಳನ್ನು ಒದಗಿಸಿದ್ದು ಇನ್ನೆರೆಡು ತಿಂಗಳಲ್ಲಿ ತೀರ್ಪು ಹೊರಬರುವ ವಿಶ್ವಾಸವಿದೆ. ಬಳಿಕ ಶೇ.50ರಷ್ಟು ಬಾಕಿಯಿರುವ ತಿರುವುನಾಲೆ ಪೂರ್ಣಗೊಳಿಸಿ ಯೋಜನೆಗೆ ಮರುಜೀವ ನೀಡಲಾಗುವುದು.
>
> - ಮೋಹನ್, ಎಇಇ, ಕಾವೇರಿ ನೀರಾವರಿ ನಿಗಮ. ಬೆಂಗಳೂರು ದಕ್ಷಿಣ ಜಿಲ್ಲೆ.

> ಜನಪ್ರತಿನಿಧಿಗಳ ನಿರ್ಲಕ್ಷತನ ಹಾಗೂ ಅಧಿಕಾರಿಗಳ ಜಾಣಮೌನದಿಂದ ಬಿಡದಿ ಭಾಗದ ಜನೋಪಯೋಗಿ ಯೋಜನೆ ನೆನೆಗುದಿಗೆ ಬಿದ್ದಿದೆ. ಜಿಲ್ಲಾ ಉಸ್ತುವಾರಿ ಮಂತ್ರಿಗಳು, ಸಂಸದರು, ಹಾಗೂ ಶಾಸಕರ ಇಚ್ಛಾಶಕ್ತಿ ಕೊರತೆಯಿಂದ ಏಳು ವರ್ಷ ಕಳೆದರೂ ಯೋಜನೆಗೆ ಮರುಚಾಲನೆ ಸಿಕ್ಕಿಲ್ಲ. ಯೋಜನೆ ಅನುಷ್ಠಾನವಾದರೆ ಶುದ್ಧೀಕರಿಸಿದ ನೀರಿನಿಂದ ತೋಟಗಾರಿಕೆ ಬೆಳೆಗಳು, ಕಬ್ಬು, ಭತ್ತ ಸೇರಿದಂತೆ ನಾನಾ ರೀತಿಯ ವಾಣಿಜ್ಯ ಬೆಳೆಗಳಿಗೂ ಅನುಕೂಲಕರ. ಸೊಳ್ಳೆಗಳ ಕಾಟವೂ ಕಡಿಮೆಯಾಗಲಿದ್ದು ಭೈರಮಂಗಲ ಕೆರೆಗೆ ಅಂಟಿಕೊಂಡಿರುವ "ಶಾಪಗ್ರಸ್ಥ" ಕಳಂಕವೂ ನಿವಾರಣೆಯಾಗಲಿದೆ.



# ಪ್ರವೇಶಾತಿಗೆ ಅವಧಿ ವಿಸ್ತರಣೆ

ಹಾಸನ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮುಕ್ತ ಗಂಗೋತ್ರಿ, ಮೈಸೂರು ವತಿಯಿಂದ ಹಾಸನ ಪ್ರಾದೇಶಿಕ ಕೇಂದ್ರದಲ್ಲಿ 2025–26ನೇ ಸಾಲಿನ ಜನವರಿ ಆವೃತ್ತಿ ಶೈಕ್ಷಣಿಕ ವರ್ಷದಲ್ಲಿ ಪ್ರಥಮ ವರ್ಷದ ಬಿ.ಎ, ಬಿ.ಕಾಂ, ಬಿ.ಎಸ್ಸಿ, ಬಿ.ಸಿ.ಎ, ಬಿ.ಬಿ.ಎ, ಬಿ.ಎಲ್.ಐ.ಸಿ, ಬಿ,ಎಸ್,ಡಬ್ಲ್ಯೂ. ಎಂ.ಎ, ಎಂ.ಕಾಂ, ಎಂ.ಎಸ್ಸಿ -(Environmental Science, , Chemistry, Computer Science, Geography, Imformation Science, Mathematics, Botany, Zoology, Physics, Earth Science, Data Science, Life Science),M.B.A,M.L.I.Sc., M.S.W, M.C.A, P.G. Diploma-[English, Communicative English, Journalism & Mass Communication, Business Law, Human Resource Management, Financial Management, Business Administration, Marketing Management, Ambedkar Studies, Information Science, Computer Application, Linguistics],Diploma-(Kannada, Journalism, Diploma in Information Science, Computer Application, Early child care & Education, Translation Studies, Predictive Astrology, Mundane astrology, Vastu Astrology) Certificate-(Kannada, Panchayat Raj, Imformation Communication & Technology, Translation Studies, Jyothir Vignana)

ಕೋರ್ಸ್‌ಗಳಿಗೆ ಪ್ರವೇಶಾತಿಯನ್ನು ಏ.10 ವರೆಗೆ ವಿಸ್ತರಿಸಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದು. ಬಿ.ಪಿ.ಎಲ್. ಪಡಿತರಚೀಟಿ ಹೊಂದಿರುವ ಮಹಿಳಾ ವಿದ್ಯಾರ್ಥಿನಿಯರಿಗೆ ಬೋಧನಾ ಶುಲ್ಕದಲ್ಲಿ ಶೇ 10% ರಿಯಾಯಿತಿ ನೀಡಲಾಗುತ್ತದೆ. ಡಿಫೆನ್ಸ್ ಹಾಗೂ ಎಕ್ಸ್ ಸರ್ವೀಸ್‌ಮನ್ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕದಲ್ಲಿ ಶೇ 10% ರಿಯಾಯಿತಿ ನೀಡಲಾಗುತ್ತದೆ. ಬ್ಯಾಡ್ಜ್ ಹೊಂದಿರುವ ಆಟೋ/ಕ್ಯಾಬ್ ಚಾಲಕರು ಮತ್ತು ಅವರ ಮಕ್ಕಳಿಗೆ ಹಾಗೂ ಸಾರಿಗೆ ಇಲಾಖೆ ನೌಕರರಿಗೆ ಶೇ 10% ರಿಯಾಯಿತಿ ನೀಡಲಾಗುತ್ತದೆ.

# ಇಂದಿನಿಂದಲೇ 'ಒನ್ ಟೈಮ್ ಸೆಟಲ್‌ಮೆಂಟ್' ಜಾರಿ



ಬೆಂಗಳೂರು

ದೀರ್ಘಕಾಲದಿಂದ ನೀರಿನ ಬಿಲ್ ಬಾಕಿ ಉಳಿಸಿಕೊಂಡಿರುವ ಬೆಂಗಳೂರು ನಗರದ ಗ್ರಾಹಕರಿಗೆ ಜಲಮಂಡಳಿಯು ಯುಗಾದಿ ಹಬ್ಬದ ವಿಶೇಷ ಕೊಡುಗೆ ನೀಡಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಘೋಷಣೆಯಂತೆ, 'ಒನ್ ಟೈಮ್ ಸೆಟಲ್‌ಮೆಂಟ್' ಯೋಜನೆ ಇಂದಿನಿಂದ (ಏಪ್ರಿಲ್ 6) ಅಧಿಕೃತವಾಗಿ ಆರಂಭವಾಗಿದ್ದು, ಈ ತಿಂಗಳ ನೀರಿನ ಬಿಲ್ ಜೊತೆಯಲ್ಲೇ ಬಾಕಿ ಪಾವತಿಯ ನೋಟಿಸ್ ನೀಡಲಾಗುವುದು ಎಂದು ಬಿಡಬ್ಲ್ಯೂಎಸ್‌ಎಸ್‌ಬಿ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಮೊದಲು ಮಲ್ಲೇಶ್ವರಂ ವಿಭಾಗದ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿದ ಅವರು, ತರಬೇತಿ ನಡೆಯುತ್ತಿದ್ದ ತರಗತಿಯಲ್ಲಿ ಗಣತಿದಾರರು ಹಾಗೂ ಮೇಲ್ವಿಚಾರಕರೊಂದಿಗೆ ಕುಳಿತುಕೊಂಡು ತರಬೇತಿ ಕ್ರಮಗಳನ್ನು ಸಮಗ್ರವಾಗಿ ವೀಕ್ಷಿಸಿದರು. ತರಬೇತಿಯ ಗುಣಮಟ್ಟ, ವಿಷಯವಸ್ತುಗಳ ಅರ್ಥೈಸುವಿಕೆ ಹಾಗೂ ಕಾರ್ಯಪದ್ಧತಿಯ ಅನುಷ್ಠಾನ ಕುರಿತು ಮಾಹಿತಿ ಪಡೆದುಕೊಂಡರು.

ಈ ವೇಳೆ ಮಾತನಾಡಿದ ಅವರು, ಜನಗಣತಿ ದೇಶದ ಅತ್ಯಂತ ಮಹತ್ವದ ರಾಷ್ಟ್ರೀಯ ಕಾರ್ಯಕ್ರಮವಾಗಿದ್ದು, ಪ್ರತಿಯೊಬ್ಬ ಗಣತಿದಾರರು ತಮ್ಮ ಕರ್ತವ್ಯಗಳನ್ನು ಅತ್ಯಂತ ಜವಾಬ್ದಾರಿಯಿಂದ, ನಿಷ್ಠೆಯಿಂದ ಮತ್ತು ನಿಖರತೆಯಿಂದ ನಿರ್ವಹಿಸಬೇಕೆಂದು ತಿಳಿಸಿದರು.

ತರಬೇತಿ ಕೇಂದ್ರದಲ್ಲಿ ಗಣತಿದಾರರೊಂದಿಗೆ ಸಂವಾದ ನಡೆಸಿ, ಅವರ ಅನುಭವಗಳು ಹಾಗೂ ಅಭಿಪ್ರಾಯಗಳನ್ನು ಆಲಿಸಿದರು. ಟೀ ಸೇವನೆಯ ವೇಳೆ ಎಲ್ಲರೂ ತಪ್ಪದೇ ಸ್ವಯಂ ಗಣತಿ ಪ್ರಕ್ರಿಯೆಯನ್ನು ಸರಿಯಾಗಿ ಅನುಸರಿಸಿ, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸೂಚಿಸಿದರು. ಡಿಜಿಟಲ್ ವಿಧಾನಗಳ ಬಳಕೆ, ಮಾಹಿತಿಯ ನಿಖರತೆ ಹಾಗೂ ಸಮಯಪಾಲನೆಯ ಮಹತ್ವವನ್ನು ವಿಶೇಷವಾಗಿ ಒತ್ತಿ ಹೇಳಿದರು.

ಮುಂದುವರಿದು ರಾಜಾಜಿನಗರದ ಕೆ.ಎಲ್.ಇ. ನಿಜಲಿಂಗಪ್ಪ ಕಾಲೇಜಿಗೆ ಭೇಟಿ ನೀಡಿದ ಅವರು, ಅಲ್ಲಿನ ತರಬೇತಿ ಕಾರ್ಯವನ್ನು ಪರಿಶೀಲಿಸಿ ಅಗತ್ಯ ಸೂಚನೆಗಳನ್ನು ನೀಡಿದರು.

ಗೋವಿಂದರಾಜನಗರ ವಿಭಾಗದ ಗಣತಿದಾರರು ಹಾಗೂ ಮೇಲ್ವಿಚಾರಕರೊಂದಿಗೆ ಭೋಜನ ಮಾಡಿ, ಅವರೊಂದಿಗೆ ಸ್ನೇಹಪೂರ್ಣವಾಗಿ ಮಾತುಕತೆ ನಡೆಸಿ, ಕಾರ್ಯನಿರ್ವಹಣೆಯಲ್ಲಿ ಎದುರಾಗುವ ಸವಾಲುಗಳು ಹಾಗೂ ಅವುಗಳಿಗೆ ಪರಿಹಾರಗಳ ಬಗ್ಗೆ ಚರ್ಚಿಸಿದರು. ಜನಗಣತಿ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಎಲ್ಲರೂ ಸಮನ್ವಯದಿಂದ ಮತ್ತು ಸಕ್ರಿಯವಾಗಿ ಭಾಗವಹಿಸುವಂತೆ ಸಿಬ್ಬಂದಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಂಟಿ ಆಯುಕ್ತರಾದ ಸಂಗಪ್ಪ, ವಿವಿಧ ವಿಭಾಗಗಳ ಕಾರ್ಯಪಾಲಕ ಅಭಿಯಂತರರು, ಕಂದಾಯ ಅಧಿಕಾರಿಗಳು, ಚಾರ್ಜ್ ಅಧಿಕಾರಿಗಳು ಹಾಗೂ ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

# ಕೇಂದ್ರ ಪಾಲಿಕೆ ವ್ಯಾಪ್ತಿಯಲ್ಲಿ ಸ್ವಚ್ಛತಾ ಕ್ರಾಂತಿ: ವಾರಕ್ಕೆ 10 ಕಿ.ಮೀ ಗುರಿ



ಬೆಂಗಳೂರು

"ನಗರದ ನೈರ್ಮಲ್ಯ ಕಾಪಾಡಲು ನಿರಂತರ ಸಾಮೂಹಿಕ ಸ್ವಚ್ಛತೆ ಅತ್ಯಗತ್ಯ. ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರತಿ ವಾರ ಕನಿಷ್ಠ 10 ಕಿಲೋಮೀಟರ್ ಮಾರ್ಗವನ್ನು ಸಾಮೂಹಿಕವಾಗಿ ಸ್ವಚ್ಛಗೊಳಿಸುವ ಗುರಿ ಹೊಂದಲಾಗಿದೆ," ಎಂದು ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದ್ದಾರೆ.

ನಗರದ ವಿವಿಧ ಕ್ಷೇತ್ರಗಳಲ್ಲಿ ಸೋಮವಾರ ಹಮ್ಮಿಕೊಳ್ಳಲಾಗಿದ್ದ ವಿಶೇಷ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ನಾಗರಿಕರಿಗೆ ಆರೋಗ್ಯಕರ ಪರಿಸರ ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯು ಬ್ಲ್ಯಾಕ್ ಸ್ಪಾಟ್‌ಗಳ ನಿರ್ಮೂಲನೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದರು.

ಅಭಿವೃದ್ಧಿ ಅಪರ ಆಯುಕ್ತ ದಲ್ಜಿತ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ನಡೆದ ಈ ಬೃಹತ್ ಕಾರ್ಯಾಚರಣೆಯಲ್ಲಿ ಚಾಮರಾಜಪೇಟೆ, ಚಿಕ್ಕಪೇಟೆ, ಗಾಂಧಿನಗರ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಸ್ವಚ್ಛತೆ ಮಾಡಲಾಯಿತು.

ಕಾರ್ಯಾಚರಣೆ ವ್ಯಾಪ್ತಿ: ಒಟ್ಟು 4.05 ಕಿಲೋಮೀಟರ್ ರಸ್ತೆ ಸ್ವಚ್ಛಗೊಳಿಸಲಾಗಿದೆ.

ಯಂತ್ರೋಪಕರಣಗಳ ಬಳಕೆ: 3 ಜೆಸಿಬಿ ಹಾಗೂ 27 ಟ್ರ್ಯಾಕ್ಟರ್‌ಗಳನ್ನು ಬಳಸಿ ರಸ್ತೆ ಬದಿಗಳಲ್ಲಿದ್ದ 32 ಲೋಡ್ ತ್ಯಾಜ್ಯವನ್ನು ತೆರವುಗೊಳಿಸಲಾಯಿತು.

ಸಿಬ್ಬಂದಿ ಶಕ್ತಿ: 135 ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂದಿ ಈ ಶ್ರಮದಾನದಲ್ಲಿ ಪಾಲ್ಗೊಂಡಿದ್ದರು.

ಎಲ್ಲೆಲ್ಲಿ ಸ್ವಚ್ಛತೆ?

ಚಾಮರಾಜಪೇಟೆ: ಬಿಬಿಎಂಪಿ ಸಮುದಾಯ ಭವನ ಹಾಗೂ 9ನೇ ಅಡ್ಡರಸ್ತೆ.

ಚಿಕ್ಕಪೇಟೆ: ಕಲಾಸಿಪಾಳ್ಯದ 1, 2 ಮತ್ತು 3ನೇ ಮುಖ್ಯರಸ್ತೆ ಹಾಗೂ ಕುಂಬಾರಗುಂಡಿ ಪ್ರದೇಶ.


ಗಾಂಧಿನಗರ: ಎಂ.ಇ.ಟಿ ಸ್ಟ್ರೀಟ್ ಮತ್ತು ಅಡ್ಡರಸ್ತೆಗಳು.

ಶಾಂತಿನಗರ: ಚರ್ಚ್ ಸ್ಟ್ರೀಟ್ ಮತ್ತು ಸುತ್ತಮುತ್ತ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು.

ಶಿವಾಜಿನಗರ: ಚಿನ್ನಪ್ಪ ಗಾರ್ಡನ್ ಮತ್ತು ಲಿಂಕ್ ರೋಡ್‌ಗಳು.

ಸಿ.ವಿ. ರಾಮನ್ ನಗರ: ಹಳೆಯ ಮದ್ರಾಸ್ ರಸ್ತೆಯಿಂದ ದೊಮ್ಮಲೂರು ಫ್ಲೈಓವರ್‌ವರೆಗೆ. "ನಗರ ಪಾಲಿಕೆ ಕಸ ಸಂಗ್ರಹಣೆಗೆ ಸಾಕಷ್ಟು ಕ್ರಮಗಳನ್ನು ಕೈಗೊಳ್ಳುತ್ತಿದೆ. ಸಾರ್ವಜನಿಕರು ರಸ್ತೆ ಬದಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆಯಬಾರದು. ನಿಗದಿತ ಸ್ಥಳಗಳಲ್ಲಿ ಮಾತ್ರ ತ್ಯಾಜ್ಯ ವಿಲೇವಾರಿ ಮಾಡುವ ಮೂಲಕ ನಗರವನ್ನು ಸುಂದರವಾಗಿಡಲು ಸಹಕರಿಸಬೇಕು," ಎಂದು ರಾಜೇಂದ್ರ ಚೋಳನ್ ಮನವಿ ಮಾಡಿದರು. ಈ ವಿಶೇಷ ಅಭಿಯಾನದಲ್ಲಿ ಅರಣ್ಯ, ತೋಟಗಾರಿಕೆ ಇಲಾಖೆ ಹಾಗೂ ಪಾಲಿಕೆಯ ವಿವಿಧ ಹಂತದ ಅಧಿಕಾರಿಗಳು ಭಾಗವಹಿಸಿದ್ದರು.

# 8ರಂದು ಬೃಹತ್ 'ಜನಸ್ಪಂದನ' ಸಭೆ; ಅಹವಾಲುಗಳ ವಿಲೇವಾರಿಗೆ ಡಿಸಿ ಸೂಚನೆ



ತುಮಕೂರು

ಸಾರ್ವಜನಿಕರ ಸಮಸ್ಯೆಗಳಿಗೆ ಗರಿಷ್ಠ ಮಟ್ಟದ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಇದೇ 8ರಂದು ನಗರದ ಕೇಂದ್ರ ಗ್ರಂಥಾಲಯದಲ್ಲಿ ಹಮ್ಮಿಕೊಳ್ಳಲಾಗಿರುವ 'ಜನಸ್ಪಂದನ' ಕಾರ್ಯಕ್ರಮಕ್ಕೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದರು.

ಶುಕ್ರವಾರ ಕಾರ್ಯಕ್ರಮದ ಪೂರ್ವಸಿದ್ಧತೆಗಳನ್ನು ಪರಿಶೀಲಿಸಿದ ಅವರು, ಅಂದು ಬೆಳಿಗ್ಗೆ 10:30ಕ್ಕೆ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ಈ ಸಭೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಜಿಲ್ಲೆಯಾದ್ಯಂತ ವಿವಿಧ ತಾಲ್ಲೂಕುಗಳಲ್ಲಿ ಈಗಾಗಲೇ ಜನಸಂಪರ್ಕ ಸಭೆಗಳನ್ನು ನಡೆಸಲಾಗಿದ್ದು, ಕಂದಾಯ, ಪಂಚಾಯತ್ ರಾಜ್, ಆಹಾರ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸುಮಾರು 2,500 ಅಹವಾಲುಗಳು ಸಲ್ಲಿಕೆಯಾಗಿವೆ. "ಈ ಅಹವಾಲುಗಳ ಪೈಕಿ ಶೇ. 15ರಷ್ಟನ್ನಾದರೂ ಈ ಕಾರ್ಯಕ್ರಮದಲ್ಲಿ ವಿಲೇವಾರಿ ಮಾಡುವ ಗುರಿ ಹೊಂದಿದ್ದೇವೆ. ಈಗಾಗಲೇ ಬಗೆಹರಿದಿರುವ ಪ್ರಕರಣಗಳ ಫಲಾನುಭವಿಗಳನ್ನು ಕಾರ್ಯಕ್ರಮಕ್ಕೆ ಕರೆತರುವಂತೆ ತಾಲ್ಲೂಕು ಅಧಿಕಾರಿಗಳಿಗೆ ಸೂಚಿಸಲಾಗಿದೆ," ಎಂದು ಡಿಸಿ ತಿಳಿಸಿದರು.

ಸಾರ್ವಜನಿಕರಿಗೆ ವಿಶೇಷ ಸೌಲಭ್ಯಗಳು:

ಇಲಾಖಾವಾರು ಮಳಿಗೆಗಳು: ವಿವಿಧ ಇಲಾಖೆಗಳ ಮಾಹಿತಿ ಮತ್ತು ಸೇವೆಗಾಗಿ ಪ್ರತ್ಯೇಕ ಮಳಿಗೆಗಳನ್ನು ತೆರೆಯಲಾಗುವುದು.

ಐಪಿಜಿಆರ್‌ಎಸ್ ಸೌಲಭ್ಯ: ಅಹವಾಲುಗಳ ದಾಖಲಾತಿಗಾಗಿ ವ್ಯವಸ್ಥಿತ ಸೌಲಭ್ಯ ಕಲ್ಪಿಸಲಾಗಿದೆ.

ಊಟದ ವ್ಯವಸ್ಥೆ: ಕಾರ್ಯಕ್ರಮಕ್ಕೆ ಆಗಮಿಸುವ ಸಾರ್ವಜನಿಕರಿಗೆ ಕೇಂದ್ರ ಗ್ರಂಥಾಲಯದ ತಳಮಹಡಿಯಲ್ಲಿ ಊಟದ ವ್ಯವಸ್ಥೆ ಮಾಡಲಾಗಿದೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳಿಗೆ ಸಚಿವರ ಸಮ್ಮುಖದಲ್ಲಿ ಪರಿಹಾರ ಕಂಡುಕೊಳ್ಳುವಂತೆ ಅವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ಮಹಾನಗರ ಪಾಲಿಕೆ ಆಯುಕ್ತೆ ಬಿ. ಶುಭ ಉಪಸ್ಥಿತರಿದ್ದರು.

# ಇಂದಿನಿಂದ ಹರಳೂರು ಜಾತ್ರೆ ಆರಂಭ: ಸಿದ್ದಗಂಗಾ ಶ್ರೀಗಳಿಂದ ಚಾಲನೆ



ತುಮಕೂರು

ತಾಲ್ಲೂಕಿನ ಹರಳೂರು ಗ್ರಾಮದಲ್ಲಿ ನೆಲೆಸಿರುವ ಪುರಾತನ ಶ್ರೀ ವೀರಭದ್ರಸ್ವಾಮಿ ಜಾತ್ರಾ ಮಹೋತ್ಸವವು ಏಪ್ರಿಲ್ 7 ರಿಂದ 13 ರವರೆಗೆ ಅತ್ಯಂತ ವೈಭವದಿಂದ ಜರುಗಲಿದೆ. ಶ್ರೀ ವೀರಭದ್ರಸ್ವಾಮಿ ಸೇವಾ ಸಮಿತಿ ಹಾಗೂ ಗ್ರಾಮಸ್ಥರ ಸಹಯೋಗದಲ್ಲಿ ವಾರಪೂರ್ತಿ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಇದೇ 7 ರಂದು ರಾತ್ರಿ 7:30ಕ್ಕೆ ಸಿದ್ದಗಂಗಾ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ ಅವರು ಡಾ. ಶ್ರೀ ಶಿವಕುಮಾರ ಮಹಾಸ್ವಾಮಿಗಳ ಪುತ್ಥಳಿ ಮೆರವಣಿಗೆಗೆ ಚಾಲನೆ ನೀಡುವ ಮೂಲಕ ಜಾತ್ರಾ ಮಹೋತ್ಸವವನ್ನು ಉದ್ಘಾಟಿಸಲಿದ್ದಾರೆ. ಅಂದು ರಾತ್ರಿ 10 ಗಂಟೆಗೆ ವೀರಭದ್ರಸ್ವಾಮಿಗೆ ವಿಶೇಷ ಆರತಿ ಹಾಗೂ ಅಗ್ನಿಕೊಂಡೋತ್ಸವ ನೆರವೇರಲಿದೆ.

ಪ್ರಮುಖ ಧಾರ್ಮಿಕ ವಿಧಿವಿಧಾನಗಳು:

ಏಪ್ರಿಲ್ 8ಕ್ಕೆ ಬೆಳಿಗ್ಗೆ ಧ್ವಜಾರೋಹಣ, ಕಳಸ ಸ್ಥಾಪನೆ ಹಾಗೂ ನಂದಿ ಮತ್ತು ಗಜವಾಹನ ಸೇವೆಗಳು ನಡೆಯಲಿವೆ.

ಏಪ್ರಿಲ್ 9ಕ್ಕೆ (ಮಹಾ ರಥೋತ್ಸವ) ಮಧ್ಯಾಹ್ನ 1 ಗಂಟೆಗೆ ಸರಿಯಾಗಿ ಶ್ರೀ ವೀರಭದ್ರಸ್ವಾಮಿಯ ಮಹಾ ರಥೋತ್ಸವ ಜರುಗಲಿದೆ.

ರಥೋತ್ಸವದ ಅಂಗವಾಗಿ ಧೂಳೋತ್ಸವ, ಪುಷ್ಪಾಲಂಕಾರ ಹಾಗೂ ಪಾನಕ ಸೇವೆ ಇರಲಿದೆ. ಅಂದು ರಾತ್ರಿ 'ಐತಿಹಾಸಿಕ ಕುರುಕ್ಷೇತ್ರ' ನಾಟಕ ಪ್ರದರ್ಶನ ಹಾಗೂ ಬೆಳ್ಳಿ ಪಲ್ಲಕ್ಕಿ ಉತ್ಸವ ನಡೆಯಲಿದೆ.

ಹರಳೂರು ಜಂಗಮಮಠದ ಶ್ರೀ ಚನ್ನಬಸವಸ್ವಾಮೀಜಿ ಅವರ ನೇತೃತ್ವದಲ್ಲಿ ಎಲ್ಲಾ ಧಾರ್ಮಿಕ ಕೈಂಕರ್ಯಗಳು ನೆರವೇರಲಿವೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶ್ರೀ ವೀರಭದ್ರಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಶ್ರೀ ವೀರಭದ್ರೇಶ್ವರ ದಾಸೋಹ ಟ್ರಸ್ಟ್ ಮತ್ತು ಸಮುದಾಯ ಭವನ ನಿರ್ಮಾಣ ಸಮಿತಿ ಮನವಿ ಮಾಡಿದೆ.

## ಶ್ರೀ ಶಿವಕುಮಾರ ಸ್ವಾಮೀಜಿಯವರ ಜಯಂತಿ ಆಚರಣೆ

ಶಿಡ್ಲಘಟ್ಟ

ನಗರದ ಶ್ರೀ ಶಿವಕುಮಾರಸ್ವಾಮಿ ವೃತ್ತದಲ್ಲಿ (ಹೂವಿನ ವೃತ್ತ) ಬುಧವಾರದಂದು ತ್ರಿವಿಧ ದಾಸೋಹಿ, ಸಿದ್ದಗಂಗಾ ಶ್ರೀಗಳಾದ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿಯನ್ನು ಅತ್ಯಂತ ಭಕ್ತಿ–ಶ್ರದ್ಧೆಯಿಂದ ಆಚರಿಸಲಾಯಿತು.

ನಗರೇಶ್ವರಸ್ವಾಮಿ ದೇವಾಲಯದ ಆವರಣದಲ್ಲಿ ಶ್ರೀಗಳ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು.

ನಗರ್ತ ಮಂಡಳಿಯ ಅಧ್ಯಕ್ಷರಾದ ಕೆ.ಆರ್. ಶಿವಶಂಕರ್ ಮಾತನಾಡಿ, "ನಡೆದಾಡುವ ದೇವರು ಎಂದೇ ಖ್ಯಾತರಾದ ಶ್ರೀಗಳು ಅಕ್ಷರ, ಅನ್ನ ಮತ್ತು ಜ್ಞಾನ ದಾಸೋಹದ ಮೂಲಕ ಲಕ್ಷಾಂತರ ಮಕ್ಕಳ ಬದುಕನ್ನು ಬೆಳಗಿದ್ದಾರೆ. ಅವರ ಶಿಸ್ತು, ಶ್ರದ್ಧೆ ಹಾಗೂ ಸಮಯಪ್ರಜ್ಞೆ ಇಂದಿನ ಸಮಾಜಕ್ಕೆ ಮತ್ತು ಮುಂದಿನ ಪೀಳಿಗೆಗೆ ದಾರಿದೀಪ," ಎಂದು ಬಣ್ಣಿಸಿದರು.

ಅಕ್ಕಮಹಾದೇವಿಯವರ ಭಕ್ತಿ ಮತ್ತು ತತ್ವಗಳು ಸಮಾಜಕ್ಕೆ ಹೇಗೆ ಮಾರ್ಗದರ್ಶಿಯೋ, ಹಾಗೆಯೇ ಶ್ರೀಗಳ ಆಧ್ಯಾತ್ಮಿಕ ಜೀವನವು ಯುವಜನತೆಗೆ ಪ್ರೇರಣೆಯಾಗಬೇಕು ಎಂದು ಅವರು ಆಶಯ ವ್ಯಕ್ತಪಡಿಸಿದರು.

ನಗರ್ತ ಯುವಕ ಮಂಡಳಿ ಹಾಗೂ ಮಹಿಳಾ ಮಂಡಳಿಯ ಪದಾಧಿಕಾರಿಗಳು ಮತ್ತು ಶ್ರೀಗಳ ಅಸಂಖ್ಯಾತ ಭಕ್ತರು ಈ ಸಂದರ್ಭದಲ್ಲಿ ಪಾಲ್ಗೊಂಡಿದ್ದರು. ಜಯಂತಿಯ ಅಂಗವಾಗಿ ಸಾರ್ವಜನಿಕರಿಗೆ ಸಾಮೂಹಿಕ ಅನ್ನ ಸಂತರ್ಪಣೆಯನ್ನು ಹಮ್ಮಿಕೊಳ್ಳಲಾಗಿತ್ತು. ಶ್ರೀಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ಭಕ್ತಾದಿಗಳು, ಅವರ ಜೀವನದ ಮೌಲ್ಯಗಳನ್ನು ಸ್ಮರಿಸುತ್ತಾ ಅರ್ಥಪೂರ್ಣವಾಗಿ ದಿನವನ್ನು ಆಚರಿಸಿದರು.



## ಸೊಣ್ಣನಾಯಕನಹಳ್ಳಿ ಗ್ರಾಮಸ್ಥರ ನೆರವಿಗೆ ಧಾವಿಸಿದ ತಹಶೀಲ್ದಾರ್ ರೂಪ



ಮಾಲೂರು

ತಾಲೂಕಿನ ಸೊಣ್ಣನಾಯಕನಹಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆ ತೋರಿರುವ ಕಾರಣ ತೊರ್ನಹಳ್ಳಿ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿ ತಹಶೀಲ್ದಾರ್ ಎಂ.ವಿ.ರೂಪ ಅವರು ಸೊಣ್ಣ ನಾಯಕನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ನೀರಿನ ಸಮಸ್ಯೆಯನ್ನು ನೀಗಿಸಲು ತಾತ್ಕಾಲಿಕವಾಗಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಲು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕಿನ ತೊರ್ನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸೊಣ್ಣನಾಯಕನಹಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿಗಾಗಿ ಒಂದು ಕೊಳವೆ ಬಾವಿಯನ್ನು ಕೊರಿಸಲಾಗಿತ್ತು, ಆ ಕೊಳವೆ ಬಾವಿಯಲ್ಲಿ ನೀರು ಬತ್ತಿ ಹೋದ ಕಾರಣ ನೀರಿನ ಸಮಸ್ಯೆ ಉಂಟಾಗಿದೆ, ಗ್ರಾಮಸ್ಥರು ನೀರಿಗಾಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ತೊರ್ನಹಳ್ಳಿ ಗ್ರಾಮ ಪಂಚಾಯಿತಿ ಆಡಳಿತ ಅಧಿಕಾರಿ ಹಾಗೂ ತಹಶಿಲ್ದಾರ್ ಎಂ.ವಿ.ರೂಪ ಅವರು ಸೊಣ್ಣನಾಯಕನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲಿಸಿ. ಈ ಗ್ರಾಮದಲ್ಲಿ ನೀರಿನ ಸಮಸ್ಯೆಯನ್ನು ಬಗೆಹರಿಸಲು ತಾತ್ಕಾಲಿಕವಾಗಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದವರು ಹತ್ತಿರದಲ್ಲಿ ಯಾವುದಾದರೂ ಖಾಸಗಿ ಅವರು ರೈತರು ಕೊಳವೆ ಬಾವಿ ಕೊರೆಸಿದ್ದರೆ ಅಂತಹವರಿಂದ ಬೇಸಿಗೆ ಮುಗಿಯುವವರೆಗೆ ಗ್ರಾಮಕ್ಕೆ ನೀರು ಸರಬರಾಜು ಮಾಡಲು ಅವರ ಮನವೊಲಿಸುವಂತೆ ಹೇಳಿದರು. ಈ ವೇಳೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಿ.ಆರ್. ಗೌಡ, ಬಿಲ್‌ಕಲೆಕ್ಟರ್ ನಾಗರಾಜ್, ಗ್ರಾಮಸ್ಥರು ಇನ್ನಿತರರು ಹಾಜರಿದ್ದರು.

# 'ಬಾಗಲಕೋಟೆ, ದಾವಣಗೆರೆಯಲ್ಲಿ ಬಿಜೆಪಿ ಗೆಲುವು ನಿಶ್ಚಿತ'



ಬೆಂಗಳೂರು

"ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಅಭಿವೃದ್ಧಿ ಮರೆತಿದೆ. ಈ ಬಾರಿಯ ಚುನಾವಣೆಯಲ್ಲಿ ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳು ಭಾರಿ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ" ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಮಲ್ಲೇಶ್ವರದಲ್ಲಿರುವ ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿ ಸೋಮವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯ ಹಾಗೂ ಚುನಾವಣಾ ತಂತ್ರಗಾರಿಕೆಗಳ ಕುರಿತು ತೀವ್ರವಾಗಿ ಟೀಕಿಸಿದರು.

"ಕಾಂಗ್ರೆಸ್‌ಗೆ ಎರಡೂ ಕ್ಷೇತ್ರಗಳಲ್ಲಿ ಸೋಲಿನ ಭೀತಿ ಎದುರಾಗಿದೆ. ದಾವಣಗೆರೆಯಲ್ಲಿ ಮುಸ್ಲಿಂ ಮತದಾರರು ಕೈ ಹಿಡಿಯುವುದಿಲ್ಲ ಎಂದು ಬಹಿರಂಗವಾಗಿ ಹೇಳುತ್ತಿದ್ದಾರೆ. ಬಾಗಲಕೋಟೆಯಲ್ಲಿ ಸೋಲುವ ಸುಳಿವು ಸಿಕ್ಕ ತಕ್ಷಣ ಕೇರಳ ಪ್ರವಾಸದಲ್ಲಿದ್ದ ಮುಖ್ಯಮಂತ್ರಿಗಳು ಅಲ್ಲಿಗೆ ದೌಡಾಯಿಸಿದ್ದಾರೆ. ಸರ್ಕಾರ ಅಭಿವೃದ್ಧಿ ಮಾಡಿದ್ದರೆ ಇಷ್ಟು ಕಷ್ಟಪಡುವ ಅಗತ್ಯವಿರಲಿಲ್ಲ" ಎಂದು ಲೇವಡಿ ಮಾಡಿದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ವಿರುದ್ಧ ಕಿಡಿಕಾರಿದ ಅಶೋಕ್, "ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಶೂನ್ಯ ಅಭಿವೃದ್ಧಿಯಾಗಿದೆ. ಸಿದ್ದರಾಮಯ್ಯ ಅವರು ಕರ್ನಾಟಕವನ್ನು ಸಾಲಗಾರರ ರಾಜ್ಯವನ್ನಾಗಿ ಮಾಡಿದ್ದಾರೆ. ಜನರ ಹೊಟ್ಟೆ ತುಂಬಿಸಬೇಕಾದ ಅನ್ನಭಾಗ್ಯ ಯೋಜನೆಯನ್ನು ಇಂದು 'ಕನ್ನಭಾಗ್ಯ'ವನ್ನಾಗಿ ಪರಿವರ್ತಿಸಿದ್ದಾರೆ. ಅಭಿವೃದ್ಧಿ ವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ಜನರೇ ತಕ್ಕ ಪಾಠ ಕಲಿಸಲಿದ್ದಾರೆ" ಎಂದರು.

ದಾವಣಗೆರೆ ಚುನಾವಣಾ ಕಣದ ಬಗ್ಗೆ ಕುತೂಹಲಕಾರಿ ಹೇಳಿಕೆ ನೀಡಿದ ಅವರು, "ದಾವಣಗೆರೆಯಲ್ಲಿ ಬಡವರನ್ನು ಗೆಲ್ಲಿಸಿ ಎಂದು ಸಿದ್ದರಾಮಯ್ಯ ಹೇಳುತ್ತಿದ್ದಾರೆ. ವಾಸ್ತವದಲ್ಲಿ ಅಲ್ಲಿನ ಬಿಜೆಪಿ ಅಭ್ಯರ್ಥಿಯೇ ಬಡವರ ಪರವಾಗಿರುವವರು. ಹೀಗಾಗಿ ಮುಖ್ಯಮಂತ್ರಿಗಳು ಪರೋಕ್ಷವಾಗಿ ಬಿಜೆಪಿ ಪರವಾಗಿಯೇ ಪ್ರಚಾರ ಮಾಡುತ್ತಿದ್ದಾರೆ. ಎರಡೂ ಕಡೆ ಕಾಂಗ್ರೆಸ್‌ನವರೇ ಒಳಗೊಳಗೆ ಬಿಜೆಪಿ ಪರ ಕೆಲಸ ಮಾಡುತ್ತಿದ್ದಾರೆ" ಎಂದು ಬಾಂಬ್ ಸಿಡಿಸಿದರು.

ಬೆಲೆ ಏರಿಕೆ ಕುರಿತ ಡಿ.ಕೆ. ಶಿವಕುಮಾರ್ ಅವರ ಟೀಕೆಗೆ ತಿರುಗೇಟು ನೀಡಿದ ಅವರು, "ಅಡುಗೆ ಅನಿಲ ಸಮಸ್ಯೆ ಜಾಗತಿಕವಾದುದು. ರಾಹುಲ್ ಗಾಂಧಿ ಮೆಚ್ಚುವ ಪಾಕಿಸ್ತಾನದಲ್ಲಿ ಪೆಟ್ರೋಲ್ ಬೆಲೆ 500 ರೂ. ದಾಟಿದೆ. ಇವೆಲ್ಲದರ ಅರಿವಿಲ್ಲದೆ ಶಿವಕುಮಾರ್ ಅವರು ಪ್ರಧಾನಿ ಮೋದಿಯವರನ್ನು ಟೀಕಿಸುತ್ತಿದ್ದಾರೆ. ಹರ್ಮುಜ್ ಜಲಸಂಧಿಯಲ್ಲಿ ಉದ್ವಿಗ್ನ ಪರಿಸ್ಥಿತಿ ಇದ್ದರೂ, ಮೋದಿಯವರ ರಾಜತಾಂತ್ರಿಕ ಚತುರತೆಯಿಂದಾಗಿ ಭಾರತದ ಹಡಗುಗಳಿಗೆ ಮಾತ್ರ ಸಂಚಾರಕ್ಕೆ ಅನುಮತಿ ಸಿಕ್ಕಿದೆ. ಇಷ್ಟೆಲ್ಲಾ ಸಾಧನೆಗಳಿದ್ದರೂ ರಾಜ್ಯದ ನಾಯಕರು ಸುಮ್ಮನೆ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದ್ದಾರೆ" ಎಂದು ವಾಗ್ದಾಳಿ ನಡೆಸಿದರು.

# 'ಬಿಜೆಪಿಗೆ ಜಯ ಖಚಿತ'



ಬಾಗಲಕೋಟೆ

"ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳು ಭರ್ಜರಿ ಜಯ ಸಾಧಿಸಲಿದ್ದಾರೆ. ಈ ಕ್ಷೇತ್ರಗಳಲ್ಲಿ ಜನ ಬೆಂಬಲ ನಮಗಿದ್ದು, ಎರಡೂ ಕಡೆ ಗೆಲುವು ನಿಶ್ಚಿತ," ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬಾಗಲಕೋಟೆಯಲ್ಲಿ ಸೋಮವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಚುನಾವಣಾ ಕಣದ ಚಿತ್ರಣದ ಬಗ್ಗೆ ವಿಶ್ಲೇಷಿಸಿದರು.

"ಬಾಗಲಕೋಟೆ ಕ್ಷೇತ್ರದಲ್ಲಿ ನಮ್ಮ ಸಂಘಟನೆ ಬಲಿಷ್ಠವಾಗಿದೆ. ಈ ಬಾರಿ ಕನಿಷ್ಠ 10 ಸಾವಿರಕ್ಕೂ ಅಧಿಕ ಮತಗಳ ಅಂತರದಿಂದ ಬಿಜೆಪಿ ಜಯಭೇರಿ ಬಾರಿಸಲಿದೆ. ಮತದಾರರು ಸರ್ಕಾರದ ಆಡಳಿತದ ಬಗ್ಗೆ ಅಸಮಾಧಾನ ಹೊಂದಿದ್ದು, ಬಿಜೆಪಿಯನ್ನು ಬೆಂಬಲಿಸಲಿದ್ದಾರೆ," ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರಣಿ ಪ್ರವಾಸದ ಕುರಿತು ಟೀಕಿಸಿದ ಯಡಿಯೂರಪ್ಪ, "ಮುಖ್ಯಮಂತ್ರಿಗಳು ಇಲ್ಲಿಗೆ ಈಗಾಗಲೇ 4–5 ಬಾರಿ ಭೇಟಿ ನೀಡಿದ್ದಾರೆ. ಒಬ್ಬ ಮುಖ್ಯಮಂತ್ರಿ ಸಣ್ಣ ಉಪಚುನಾವಣೆಗಾಗಿ ಇಷ್ಟೊಂದು ಬಾರಿ ಬರಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ ಎಂದರೆ, ಅವರಿಗೆ ಸೋಲಿನ ಭಯ ಕಾಡುತ್ತಿದೆ ಎಂದೇ ಅರ್ಥ. ಸೋಲುತ್ತೇವೆ ಎಂಬ ಭೀತಿಯಿಂದಲೇ ಅವರು ಪದೇ ಪದೇ ಕ್ಷೇತ್ರಕ್ಕೆ ದೌಡಾಯಿಸುತ್ತಿದ್ದಾರೆ," ಎಂದು ವ್ಯಂಗ್ಯವಾಡಿದರು.

ಬಾಗಲಕೋಟೆ ಮಾತ್ರವಲ್ಲದೆ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲೂ ಬಿಜೆಪಿ ಗೆಲುವು ಸಾಧಿಸುವ ಮೂಲಕ ಕಾಂಗ್ರೆಸ್‌ಗೆ ಮತದಾರರು ತಕ್ಕ ಪಾಠ ಕಲಿಸಲಿದ್ದಾರೆ ಎಂದು ಈ ಸಂದರ್ಭದಲ್ಲಿ ಅವರು ತಿಳಿಸಿದರು.

# ತೊಪ್ಪಗನಹಳ್ಳಿ ಆಂಜನೇಯ ಸ್ವಾಮಿ ರಥೋತ್ಸವ ಸಂಪನ್ನ



ಮಾಲೂರು

ಕಸಬಾ ಹೋಬಳಿಯ ತೊಪ್ಪಗನಹಳ್ಳಿ ಗ್ರಾಮದಲ್ಲಿ ನೆಲೆಸಿರುವ, ಸುಮಾರು 800 ವರ್ಷಗಳ ಇತಿಹಾಸವುಳ್ಳ ಪುರಾತನ ಶ್ರೀ ಆಂಜನೇಯ ಸ್ವಾಮಿ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವವು ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ವೈಭವದಿಂದ ಜರುಗಿತು.

ಈ ದೇವಾಲಯವು ವಿಶಿಷ್ಟವಾದ 'ತುಪ್ಪದ ಕಜ್ಜಾಯ'ದ ಪ್ರಸಾದಕ್ಕೆ ಹೆಸರುವಾಸಿಯಾಗಿದೆ. ಜಾತ್ರೆಯ ಪ್ರಯುಕ್ತ ಗ್ರಾಮದ ಪ್ರತಿ ಮನೆಯಿಂದಲೂ ತುಪ್ಪದ ಕಜ್ಜಾಯವನ್ನು ತಯಾರಿಸಿ ತಂದು, ದೇವಸ್ಥಾನದ ಮುಂದೆ ರಾಶಿ ಹಾಕಿ ಸಾಮೂಹಿಕವಾಗಿ ಪೂಜೆ ಸಲ್ಲಿಸುವುದು ಇಲ್ಲಿನ ವಿಶೇಷ ವಾಡಿಕೆ. ತಾಲ್ಲೂಕಿನಲ್ಲಿಯೇ ಅಪರೂಪವೆನಿಸುವ ಈ ಕಜ್ಜಾಯದ ರಾಶಿ ಪೂಜೆಯನ್ನು ಕಂಡು ಭಕಾಧಿಗಳು ಪುನೀತರಾದರು.

ಜಾತ್ರಾ ಮಹೋತ್ಸವದ ಅಂಗವಾಗಿ ಆಂಜನೇಯ ಸ್ವಾಮಿಯ ವಿಗ್ರಹಕ್ಕೆ ವಿವಿಧ ಫಲಪುಷ್ಪಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು. ಮಧ್ಯಾಹ್ನ 12 ಗಂಟೆಗೆ ಸರಿಯಾಗಿ ರಥೋತ್ಸವಕ್ಕೆ ಚಾಲನೆ ನೀಡಲಾಯಿತು. ಅರ್ಚಕರ ಕುಟುಂಬದವರಿಂದ ಮೊದಲಿಗೆ ರಥಕ್ಕೆ 'ಕಜ್ಜಾಯದ ಹಾರ'ವನ್ನು ಹಾಕಿ ಸಂಪ್ರದಾಯಬದ್ಧವಾಗಿ ಚಾಲನೆ ನೀಡಿದ ನಂತರ, ಭಕ್ತರು ನೈವೇದ್ಯ ಅರ್ಪಿಸಿ ದೇವರಿಗೆ ಜಯಘೋಷ ಹಾಕಿದರು.

ಜಾತ್ರೆಯ ಪ್ರಯುಕ್ತ ತೊಪ್ಪಗನಹಳ್ಳಿ, ಅಂಜನಾಪುರ, ಕುರಿಗೌಡನದೊಡ್ಡಿ ಹಾಗೂ ಜಂಪಾಲೆಗೌಡನದೊಡ್ಡಿ ಗ್ರಾಮಸ್ಥರು ಮತ್ತು ದೇವಾಲಯ ಸಮಿತಿಯ ವತಿಯಿಂದ ಅದ್ದೂರಿ ಅನ್ನದಾಸೋಹ ಏರ್ಪಡಿಸಲಾಗಿತ್ತು. ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಸತತವಾಗಿ ನಡೆದ ಈ ದಾಸೋಹದಲ್ಲಿ ಸುಮಾರು 10 ಸಾವಿರಕ್ಕೂ ಹೆಚ್ಚು ಭಕ್ತರು ಪ್ರಸಾದ ಸ್ವೀಕರಿಸಿದರು.

ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಭಕ್ತರು

# ಬಸವತತ್ವ ಪ್ರಸಾರ, ಪ್ರಚಾರ ಇಂದಿನ ಅಗತ್ಯ: ಈಶ್ವರ ಖಂಡ್ರೆ



ದೇವನಹಳ್ಳಿ

ಸಮಸಮಾಜದ ನಿರ್ಮಾಣಕ್ಕೆ ಕ್ರಾಂತಿಯನ್ನೇ ಮಾಡಿದ ಬಸವಣ್ಣನವರ ತತ್ವಾದರ್ಶಗಳು ಸಾರ್ವಕಾಲಿಕವಾಗಿದ್ದು, ಬಸವ ತತ್ವಗಳ ಪ್ರಚಾರ, ಪ್ರಸಾರ ಇಂದಿನ ಅಗತ್ಯವಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ದೇವನಹಳ್ಳಿಯಲ್ಲಿಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ವಿಶ್ವಗುರು ಬಸವೇಶ್ವರರ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೆಣ್ಣಿಗಾಗಿ, ಹೊನ್ನಿಗಾಗಿ, ಮಣ್ಣಿಗಾಗಿ ಜಗತ್ತಿನಲ್ಲಿ ಕ್ರಾಂತಿ ಆಗಿದೆ. ಆದರೆ ಸರ್ವರ ಸಮಾನತೆಗಾಗಿ ಯಾವುದಾದರೂ ಕ್ರಾಂತಿ ನಡೆದಿದ್ದರೆ ಅದು ಕಲ್ಯಾಣದ ಕ್ರಾಂತಿ ಮಾತ್ರ ಎಂದು ಹೇಳಿದರು.

12ನೇ ಶತಮಾನದಲ್ಲಿ ಮನುಷ್ಯರನ್ನು ಮನುಷ್ಯರಂತೆ ಕಾಣುತ್ತಿರಲಿಲ್ಲ. ಮೌಢ್ಯತೆ ಇತ್ತು, ಅನಕ್ಷರತೆ ಇತ್ತು, ಹೆಣ್ಣಿಗೆ ಸಮಾನತೆ ಇರಲಿಲ್ಲ. ಅಂತಹ ಕಾಲಘಟ್ಟದಲ್ಲಿ ಸ್ವಾತಂತ್ರ್ಯ, ಸಮಾನತೆ, ಕಾಯಕ, ದಾಸೋಹ, ಸಹೋದರತ್ವ, ಸಹಬಾಳ್ವೆಯ ತಳಹದಿಯ ಮೇಲೆ ಬಲಿಷ್ಠ ಸುಂದರ ಸಮಾಜದ ನಿರ್ಮಾಣಕ್ಕೆ ವಿಶ್ವಗುರು ಬಸವಣ್ಣನವರ ನೇತೃತ್ವದಲ್ಲಿ ವೈಚಾರಿಕ ಮತ್ತು ವೈಜ್ಞಾನಿಕತೆಯ ತಳಹದಿಯ ಮೇಲೆ ಕ್ರಾಂತಿ ನಡೆಯಿತು. ಶ್ರೇಣಿರಹಿತ, ವರ್ಗರಹಿತ, ಲಿಂಗಭೇದ ರಹಿತ ಸಮ ಸಮಾಜ ನಿರ್ಮಾಣಕ್ಕೆ ಬಸವಣ್ಣನವರು ಶ್ರಮಿಸಿದರು ಎಂದರು.

ಇಡೀ ಜಗತ್ತಿಗೆ ಪ್ರಪ್ರಥಮವಾಗಿ ಸಾಮಾಜಿಕ ನ್ಯಾಯಕೊಟ್ಟ ಸಮುದಾಯ ಯಾವುದಾದರೂ ಇದ್ದರೆ ಅದು ಸರ್ವರಿಗೂ ಲೇಸನ್ನೇ ಬಯಸಿದ ಸಮುದಾಯ ವೀರಶೈವ ಲಿಂಗಾಯತ ಸಮುದಾಯ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾದ ಈಶ್ವರ ಖಂಡ್ರೆ ಪ್ರತಿಪಾದಿಸಿದರು.

ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳಿನ ಕಲ್ಪನೆಯನ್ನು ನೀಡಿ, ವಿಶ್ವದ ಪ್ರಥಮ ಸಂಸತ್ತು ಅನುಭವ ಮಂಟಪ ಸ್ಥಾಪಿಸಿದರು. ಅಲ್ಲಿ 770 ವಿವಿಧ ವೃತ್ತಿಯ, ವಿವಿಧ ಸಮುದಾಯದ ಅಮರಗಣಂಗಳು ಪಾಲ್ಗೊಳ್ಳುತ್ತಿದ್ದರು. ಅವರೆಲ್ಲರೂ ವಚನಗಳನ್ನು ರಚಿಸಿದ್ದಾರೆ. ಪ್ರಜಾಪ್ರಭುತ್ವದ ಪರಿಕಲ್ಪನೆಗೆ ತಳಹದಿಯಾದ ಅನುಭವ ಮಂಟಪ ಬಸವಕಲ್ಯಾಣದಲ್ಲಿ ನಿರ್ಮಾಣವಾಗುತ್ತಿದೆ ಎಂದರು.

2015ರಲ್ಲಿ ತಾವು ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ, ಮಾಡಿದ ಮನವಿಗೆ ಮನ್ನಣೆ ನೀಡಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆಧುನಿಕ ಅನುಭವ ಮಂಟಪ ನಿರ್ಮಾಣಕ್ಕೆ ಅನುಮೋದನೆ ನೀಡಿ ಬಜೆಟ್ ನಲ್ಲಿ ಘೋಷಿಸಿದರು. ಇತ್ತೀಚೆಗೆ ಆಧುನಿಕ ಅನುಭವ ಮಂಟಪ ಕಾಮಗಾರಿಗೆ 105 ಕೋಟಿ ಬಿಡುಗಡೆ ಮಾಡುವುದರೊಂದಿಗೆ ಈವರೆಗೆ 280 ಕೋಟಿ ರೂ. ಬಿಡುಗಡೆ ಮಾಡಿದ್ದಾರೆ. ಪ್ರಸ್ತುತ ಕಾಮಗಾರಿ ಭರದಿಂದ ಸಾಗಿದ್ದು, ಮುಂದಿನ ವರ್ಷದೊಳಗೆ ಇದರ ಲೋಕಾರ್ಪಣೆ ಮಾಡಲಾಗುವುದು ಎಂದರು.

ವಚನಗಳಲ್ಲಿ ಜೀವಾಮೃತವಿದೆ. ವಚನಗಳಲ್ಲಿರುವ ಸಾರವನ್ನು ಅರಿತು ನಡೆದರೆ ಬಾಳು ಹಸನಾಗುತ್ತದೆ. ನಾವು ಬಸವಾದಿ ಶರಣರ ವಚನಗಳನ್ನು ಅರಿತು ನಡೆದರೆ ನಮ್ಮ ಜನ್ಮ ಸಾರ್ಥಕವಾಗುತ್ತದೆ. ಇಂತಹ ಪುತ್ಥಳಿ, ಪ್ರತಿಮೆಗಳ ಸ್ಥಾಪನೆ ನಮ್ಮಲ್ಲಿ ಅಂತಹ ಮಹಾಪುರುಷರ ಆದರ್ಶ ಪಾಲನೆಗೆ ಪ್ರೇರಣೆ ನೀಡುತ್ತದೆ ಎಂದರು.

ಯುವಶಕ್ತಿ, ಅಣುಶಕ್ತಿಗಿಂತ ಮಿಗಿಲಾದ್ದು, ಸಮಾಜದ ಆಧಾರಸ್ತಂಭವಾದ ಯುವಶಕ್ತಿ ಮುಖ್ಯವಾಹಿನಿಗೆ ಬರಬೇಕು. ಅವರು ದುಶ್ಚಟ, ದುರ್ಗುಣಗಳಿಗೆ ಬಲಿಯಾಗಬಾರದು.

ಸಮಾಜಕ್ಕೆ ಆಸ್ತಿಯಾಗಬೇಕು. ಅವರಿಗೆ ಮಾತೆಯರು ವಚನಗಳನ್ನು ಕಲಿಸುವ ಮೂಲಕ ಸಂಸ್ಕಾರ ಕಲಿಸಬೇಕು. ಹರ, ಚರ ಗುರುಮೂರ್ತಿಗಳು ವ್ಯಸನಮುಕ್ತ ಸಮಾಜದ ನಿರ್ಮಾಣಕ್ಕೆ ಸಂಕಲ್ಪ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಸುತ್ತೂರು ಮಹಾ ಸಂಸ್ಥಾನದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ, ಸಂಸದ ಸುಧಾಕರ್, ಶಾಸಕರಾದ ಧೀರಜ್ ಮುನಿರಾಜ್, ಶರತ್ ಬಚ್ಚೇಗೌಡ ಮತ್ತಿತರರು ಪಾಲ್ಗೊಂಡಿದ್ದರು.

# ಕಠಾರಿಪಾಳ್ಯ ಕರಗಕ್ಕೆ ಸಾಂಪ್ರದಾಯಿಕ ಪೂಜೆ ಸಲ್ಲಿಕೆ

ಕೋಲಾರ

ನಗರದ ಕಠಾರಿಪಾಳ್ಯದಲ್ಲಿ ಕೋಲಾರ ಜಿಲ್ಲಾ ತಿಗಳ ವಹ್ನಿಕುಲ ಕ್ಷತ್ರಿಯ ಸಮನ್ವಯ ಸಮಿತಿ ವತಿಯಿಂದ ಧರ್ಮರಾಯಸ್ವಾಮಿ ಹಾಗೂ ದ್ರೌಪತಾದೇವಿಯ ಹೂವಿನ ಕರಗ ಮಹೋತ್ಸವವು ಶಕ್ಯುತ್ಸವವಾಗಿ ಅದ್ದೂರಿಯಿಂದ ನಡೆದಿದೆ ಎಂದು ಸಮುದಾಯದ ಜಿಲ್ಲಾ ಮುಖಂಡ ಎಲ್.ಎ. ಮಂಜುನಾಥ್ ಹರ್ಷ ವ್ಯಕ್ತಪಡಿಸಿದರು.

ಕಠಾರಿಪಾಳ್ಯ ಹೂವಿನ ಕರಗ ಹೊತ್ತ ಕರಗದ ಪೂಜಾರಿ ಬೇಗಮಂಗಲ ಕೃಷ್ಣಮೂರ್ತಿ ಮತ್ತು ತಂಡ ಸಂಪ್ರದಾಯದಂತೆ ದ್ರೌಪತಾದೇವಿಯ ಹೂವಿನ ಕರಗವು ತಿಗಳ ಸಮುದಾಯದ ಮುಖಂಡರಾದ ಎಲ್.ಎ. ಮಂಜುನಾಥ್ ಅವರ ಮನೆಗೆ ಆಗಮಿಸಿ ಪೂಜೆಯನ್ನು ಸ್ವೀಕರಿಸಿದ ಸಂದರ್ಭದಲ್ಲಿ ಅವರು ಮಾತನಾಡುತ್ತಿದ್ದರು.

ಈ ಸಂದರ್ಭದಲ್ಲಿ ಎಲ್.ಎ.ಮಂಜುನಾಥ್ ಮಾತನಾಡಿ, ವಿಶೇಷವಾಗಿ ತಿಗಳ ಸಮುದಾಯದ ವಹ್ನಿಕುಲ ಕ್ಷತ್ರಿಯರು ದೈವಾರಾಧನೆಯನ್ನು ಮಾಡುತ್ತೇವೆ. ಈ ಕರಗಕ್ಕೆ 800 ವರ್ಷಗಳ ಇತಿಹಾಸವಿದೆ. ಪ್ರತೀ ವರ್ಷದಂತೆ ಈ ವರ್ಷವೂ ಸಹ ಹೂವಿನ ಕರಗ ಮಾಡಿದ್ದು, ವಂಶದ ಕುಲಸ್ಥರಾಗಿ ನಮ್ಮ ಮನೆಗೆ ಕರೆಸಿ ಕರಗಕ್ಕೆ ವಿಶೇಷ ಪೂಜೆ ಮಾಡಿದ್ದೇವೆ ಎಂದರು. ತಿಗಳ ಸಮುದಾಯದವರು ಅನಾದಿ ಕಾಲದಿಂದಲೂ ಕರಗ ಆಚರಣೆ ಮಾಡುತ್ತಿದ್ದು, ಇದು ನಮ್ಮ ಸಮುದಾಯಕ್ಕೆ ಪಾಂಡವರಿಂದ ಬಂದ ಕೊಡುಗೆಯಾಗಿದೆ. ಆದರೆ ಕೆಲವರು ಕರಗವನ್ನು ಶಕ್ಯುತ್ಸವವಾಗಿ ಮಾಡದಿರುವುದು ಕಂಡುಬರುತ್ತಿದೆ. ಆದರೆ ಬೇರೆಯವರು ಕರಗ ಮಾಡಲು ಆಗುವುದಿಲ್ಲ, ಇದನ್ನು ತಿಳಿದುಕೊಳ್ಳಬೇಕು. ಅವರಿಗೆ ದೇವರೇ ಒಳ್ಳೆಯ ಬುದ್ಧಿಕೊಡಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀಮತಿ ಜಯಂತಿ ಮಂಜುನಾಥ್, ನಿತಿನ್ ಚಕ್ರವರ್ತಿ, ದಿವ್ಯಾ ನಿತಿನ್, ವರುಣ್, ನಿಖಿತಾ ಚಕ್ರವರ್ತಿ, ಶೈಲಮ್ಮ, ಪೂಜಾ, ಚೌಡೇಗೌಡ, ಭರತ್, ಕಠಾರಿಪಾಳ್ಯ ಕರಗ ದೇವಸ್ಥಾನದ ಕಾರ್ಯದರ್ಶಿ ನಾಗರಾಜ್, ರಾಘವೇಂದ್ರ, ಕುಟ್ಟಿ ಮುಂತಾದವರು ಹಾಜರಿದ್ದರು.



# ಚತುಷ್ಪಥ ಹೆದ್ದಾರಿ ಯೋಜನೆಗೆ ಸಿದ್ಧತೆ: ಜಿಲ್ಲಾಧಿಕಾರಿ ರವಿ

ಕೋಲಾರ

ಬೆಂಗಳೂರು – ಹೊಸೂರು – ಕೃಷ್ಣಗಿರಿ ಹೆದ್ದಾರಿಯಲ್ಲಿನ ಅತಿಯಾದ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಮತ್ತು ದಕ್ಷಿಣದ ಜಿಲ್ಲೆಗಳ ನಡುವೆ ಸುಗಮ ಸಂಚಾರ ಕಲ್ಪಿಸಲು ಎನ್.ಹೆಚ್.ಎ.ಐ ವತಿಯಿಂದ ನಿರ್ಮಿಸಲು ಉದ್ದೇಶಿಸಿರುವ ಎಸ್.ಟಿ.ಆರ್.ಆರ್ – ಕುಪ್ಪಂ ಗ್ರೀನ್ ಫೀಲ್ಡ್ ಹೆದ್ದಾರಿ ಯೋಜನೆಯ ಕುರಿತು ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹತ್ವದ ಸಮಾಲೋಚನಾ ಸಭೆ ನಡೆಯಿತು.



ಜಿಲ್ಲಾಧಿಕಾರಿಗಳಾದ ಡಾ. ಎಂ. ಆರ್. ರವಿ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ ಎನ್.ಹೆಚ್.ಎ.ಐ ಅಧಿಕಾರಿಗಳು ಯೋಜನೆಯ ನೀಲಿನಕ್ಷೆ ಮತ್ತು ಉದ್ದೇಶಿತ ಮಾರ್ಗಗಳ ಬಗ್ಗೆ ವಿವರವಾದ ಪ್ರಾತ್ಯಕ್ಷಿಕೆ ನೀಡಿದರು.

ಪ್ರಸ್ತುತ ನಿರ್ಮಾಣ ಹಂತದಲ್ಲಿರುವ ಬೆಂಗಳೂರು ಸುತ್ತಮುತ್ತಲಿನ ಉಪನಗರ ವರ್ತುಲ ರಸ್ತೆ ಯನ್ನು ಆಂಧ್ರಪ್ರದೇಶದ ಕುಪ್ಪಂ ಬಳಿಯ ಎನ್.ಹೆಚ್–42 ಕ್ಕೆ ಈ ಹೊಸ ಹೆದ್ದಾರಿ ಸಂಪರ್ಕಿಸಲಿದೆ. ಒಟ್ಟು 53 ಕಿ.ಮೀ ಉದ್ದದ ಈ ಯೋಜನೆಯಲ್ಲಿ ಸುಮಾರು 35 ಕಿ.ಮೀ ರಸ್ತೆ ಕೋಲಾರ ಜಿಲ್ಲೆಯ ಮೂಲಕ ಹಾದುಹೋಗಲಿದೆ. ಇದು ಜಿಲ್ಲೆಯ ಬಂಗಾರಪೇಟೆ ಮತ್ತು ಮಾಲೂರು ತಾಲೂಕುಗಳ ಪ್ರಮುಖ ಭಾಗಗಳನ್ನು ಒಳಗೊಳ್ಳಲಿದೆ.

ಹೊಸೂರು ಮತ್ತು ಕೃಷ್ಣಗಿರಿ ಮೂಲಕ ಸಾಗುವ ವಾಹನಗಳು ಬೆಂಗಳೂರು ನಗರವನ್ನು ಪ್ರವೇಶಿಸದೆಯೇ ಈ ಹೊಸ ಮಾರ್ಗದ ಮೂಲಕ ಸುಲಭವಾಗಿ ಸಂಚರಿಸಬಹುದಾಗಿದೆ. ಇದರಿಂದ ಸಮಯ ಮತ್ತು ಇಂಧನ ಎರಡೂ ಉಳಿತಾಯವಾಗಲಿದೆ ಎಂದು ಅವರು ಅಭಿಪ್ರಾಯ ಪಟ್ಟರು.

ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅವರು, ಯೋಜನೆಯ ಅನುಷ್ಠಾನದ ವೇಳೆ ಸ್ಥಳೀಯ ರೈತರಿಗೆ ಮತ್ತು ಅರಣ್ಯ ಪ್ರದೇಶಕ್ಕೆ ಧಕ್ಕೆ ಬರದಂತೆ ಎಚ್ಚರಿಕೆ ವಹಿಸಲು ಸೂಚಿಸಿದರು.

ಹೆದ್ದಾರಿ ನಿರ್ಮಾಣದಿಂದ ಜಮೀನು ಕಳೆದುಕೊಳ್ಳುವ ರೈತರಿಗೆ ಸಮರ್ಪಕ ಪರಿಹಾರ ನೀಡಬೇಕು. ಅಲ್ಲದೆ, ರಸ್ತೆಯ ಎರಡೂ ಬದಿಗಳಲ್ಲಿ ರೈತರ ಓಡಾಟಕ್ಕೆ ಅನುಕೂಲವಾಗುವಂತೆ ಸರ್ವಿಸ್ ರಸ್ತೆಗಳನ್ನು ಕಡ್ಡಾಯವಾಗಿ ನಿರ್ಮಿಸಬೇಕು ಎಂದು ತಿಳಿಸಿದರು.

ಬಂಗಾರಪೇಟೆ ತಾಲೂಕಿನ ಕಾಮಸಮುದ್ರ ಸೇರಿದಂತೆ ಜಿಲ್ಲೆಯ ಅರಣ್ಯ ವ್ಯಾಪ್ತಿಯಲ್ಲಿ ರಸ್ತೆ ಹಾದುಹೋಗುವಾಗ ಕನಿಷ್ಠ ಪ್ರಮಾಣದ ಅರಣ್ಯ ನಾಶವಾಗುವಂತೆ ನೋಡಿಕೊಳ್ಳಲು ಅರಣ್ಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸುವಂತೆ ಸೂಚಿಸಿದರು.

ಈ ಹೆದ್ದಾರಿಯು ಜಿಲ್ಲೆಯ ಮಾಸ್ತಿ, ಬಲಮಂದೆ ಹಾಗೂ ಬಿಇಎಮ್‌ಎಲ್ ಕೈಗಾರಿಕಾ ಪ್ರದೇಶಗಳಿಗೆ ಹತ್ತಿರವಾಗಿ ಹಾದುಹೋಗುವುದರಿಂದ, ಭವಿಷ್ಯದಲ್ಲಿ ಕೋಲಾರ ಜಿಲ್ಲೆಯ ಆರ್ಥಿಕ ಚಟುವಟಿಕೆಗಳಿಗೆ ಹೆಚ್ಚಿನ ವೇಗ ಸಿಗಲಿದೆ ಎಂದು ಅವರು ಆಶಯ ವ್ಯಕ್ತಪಡಿಸಿದರು.

ಯೋಜನೆಯ ಅಂತಿಮ ರೂಪರೇಷೆ ಸಿದ್ಧಪಡಿಸುವ ಮುನ್ನ ಅರಣ್ಯ, ಕಂದಾಯ, ಕೆಪಿಟಿಸಿಎಲ್ ಸೇರಿದಂತೆ ಎಲ್ಲಾ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳೊಂದಿಗೆ ಮತ್ತೊಂದು ಸುತ್ತಿನ ಸಮನ್ವಯ ಸಭೆ ನಡೆಸಿ, ಯಾವುದೇ ತಾಂತ್ರಿಕ ಅಡಚಣೆಗಳಿಲ್ಲದಂತೆ ಕ್ರಮ ವಹಿಸಲು ಭಾರತದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಧಿಕಾರಿಗಳಿಗೆ ತಿಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್. ಪಿ. ಬಾಗೇವಾಡಿ, ಕೆಜಿಎಫ್ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಗದೀಶ್, ಎನ್.ಹೆಚ್.ಎ.ಐ ಅಧೀಕ್ಷಕ ಅಭಿಯಂತರರು ಮತ್ತು ಹಿರಿಯ ಅಧಿಕಾರಿಗಳು, ಸಾರಿಗೆ ಅಧಿಕಾರಿ ವೇಣುಗೋಪಾಲ್, ಕೆಎಸ್‌ಆರ್‌ಟಿಸಿ ಉಪವಿಭಾಗಿಯ ನಿಯಂತ್ರಣಾಧಿಕಾರಿ ಶ್ರೀನಾಥ್, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಹಶೀಲ್ದಾರರು ಉಪಸ್ಥಿತರಿದ್ದರು.

# ಬಿಜೆಪಿ ಇತಿಹಾಸ, ಸಿದ್ಧಾಂತ ಜನರಿಗೆ ತಿಳಿಸಿ: ಜ್ಯೋತಿಗಣೇಶ್

ತುಮಕೂರು

ಪಕ್ಷದ ಕಾರ್ಯಕರ್ತರು ಬಿಜೆಪಿಯ ಇತಿಹಾಸ ತಿಳಿಯಬೇಕು. ಸಾಮಾಜಿಕ ಜಾಲತಾಣ ಸೇರಿದಂತೆ ವಿವಿಧ ಮಾಧ್ಯಮಗಳ ಮೂಲಕ ಪಕ್ಷದ ಧ್ಯೇಯೋದ್ಧೇಶಗಳನ್ನು ಜನರಿಗೆ ಪರಿಚಯಿಸಬೇಕು. ವಿವಿಧ ಆಯಾಮಗಳಲ್ಲಿ ಕೆಲಸ ಮಾಡುತ್ತಾ ಸಂಘಟನೆ ಮಾಡಿ ಪಕ್ಷವನ್ನು ಅಧಿಕಾರಕ್ಕೆ ತರಲು ಶ್ರಮವಹಿಸಬೇಕು ಎಂದು ಶಾಸಕ ಜಿ.ಬಿ. ಜ್ಯೋತಿಗಣೇಶ್ ಅವರು ಕಾರ್ಯಕರ್ತರಿಗೆ ಸಲಹೆ ಮಾಡಿದರು.



ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಬಿಜೆಪಿ ಸಂಸ್ಥಾಪನಾ ದಿನಾಚರಣೆ ಸಂದರ್ಭದಲ್ಲಿ ಬಿಜೆಪಿ ಸ್ಥಾಪನೆಗೆ ಕಾರಣಕರ್ತರಾದ ಮಹನೀಯರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಶಾಸಕರು, ಲೋಕಸಭೆಯಲ್ಲಿ ಒಂದು ಸ್ಥಾನದಿಂದ ಆರಂಭಗೊಂಡು ಅಧಿಕಾರ ಹಿಡಿಯುವ ಮಟ್ಟಕ್ಕೆ ಬೆಳೆದಿರುವ ಬಿಜೆಪಿ ಇಂದು ವಿಶ್ವದ ಅತಿ ದೊಡ್ಡ ರಾಜಕೀಯ ಪಕ್ಷವಾಗಿ ಹೊರಹೊಮ್ಮಿದೆ. ರಾಷ್ಟ್ರೀಯತೆ, ಸ್ವದೇಶಿ, ದೇಶದ ಅಭಿವೃದ್ಧಿಯ ಎಂಬ ಸಿದ್ಧಾಂತಗಳಲ್ಲಿ ಯಾವತ್ತೂ ಹೊಂದಾಣಿಕೆ ಮಾಡಿಕೊಳ್ಳದೆ ಇಂದಿಗೂ ತನ್ನ ತತ್ವಸಿದ್ಧಾಂತಗಳಿಗೆ ಬಿಜೆಪಿ ಬದ್ಧವಾಗಿ ಮುನ್ನಡೆಯುತ್ತಿದೆ ಎಂದು ಹೇಳಿದರು.

1951ರಲ್ಲಿ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರು ಭಾರತೀಯ ಜನಸಂಘವನ್ನು ಸ್ಥಾಪಿಸಿದರು. ನೆಹರೂ ಸಂಪುಟದಿಂದ ರಾಜಿನಾಮೆ ನೀಡಿದ ಮುಖರ್ಜಿಯವರು ರಾಷ್ಟ್ರೀಯ ಸ್ವಯಂಸೇವಕರ ಸಂಘದ ಬೆಂಬಲದೊಂದಿಗೆ ಭಾರತೀಯ ಜನಸಂಘ ಸ್ಥಾಪಿಸಿದರು, ಹಿಂದುತ್ವ, ರಾಷ್ಟ್ರೀಯತೆ ಮತ್ತು ಏಕೀಕೃತ ಭಾರತ ಸಿದ್ಧಾಂತವನ್ನು ಸಂಘ ಪ್ರತಿಪಾದಿಸಿತು. ಒಂದು ದೇಶ ಒಂದು ಸಂಸ್ಕೃತಿ ಎಂಬ ಸಿದ್ಧಾಂತದಡಿ ಭಾರತೀಯ ಜನಸಂಘ ಸ್ಥಾಪನೆಯಾಯಿತು. 1977ರಲ್ಲಿ ಜನತಾ ಪಕ್ಷದೊಂದಿಗೆ ವಿಲೀನಗೊಂಡು ನಂತರ ಅಟಲ್ ಬಿಹಾರಿ ವಾಜಪೇಯಿ, ಲಾಲ್ ಕೃಷ್ಣ ಅಡ್ವಾಣಿ ನೇತೃತ್ವದಲ್ಲಿ ಜನಸಂಘದ ಸದಸ್ಯರು ಪ್ರತ್ಯೇಕಗೊಂಡು 1980, ಏಪ್ರಿಲ್ 6ರಂದು ಇದು ಭಾರತೀಯ ಜನತಾಪಕ್ಷವಾಗಿ ಸ್ಥಾಪನೆಗೊಂಡು, ಅಟಲ್ ಬಿಹಾರಿ ವಾಜಪೇಯಿ ಅವರು ಬಿಜೆಪಿಯ ಮೊದಲ ಅಧ್ಯಕ್ಷರಾದರು ಎಂದು ಜ್ಯೋತಿಗಣೇಶ್ ಅವರು ಬಿಜೆಪಿ ಸ್ಥಾಪನೆ ಹಿನ್ನೆಲೆ ವಿವರಿಸಿದರು.

1984ರ ಚುನಾವಣೆಯಲ್ಲಿ ಬಿಜೆಪಿ ಕೇವಲ ಎರಡು ಸ್ಥಾನಗಳನ್ನು ಗೆದ್ದರೂ ತಳಮಟ್ಟದ ಸಂಘಟನೆ ಮತ್ತು ಸೈದ್ಧಾಂತಿಕ ಸ್ಪಷ್ಟತೆಯತ್ತ ಗಮನಹರಿಸಿತು. 1990ರಲ್ಲಿ ಅಯೋಧ್ಯೆ ರಾಮಜನ್ಮ ಭೂಮಿ ಆಂದೋಲನ ಆರಂಭಿಸಿದ ನಂತರ ಪಕ್ಷವು ರಾಷ್ಟ್ರವ್ಯಾಪಿ ಜನಪ್ರಿಯತೆ ಗಳಿಸಿತು. 1996ರಿಂದ 2004ರವರೆಗೆ ಮೂರು ವರ್ಷಗಳಲ್ಲಿ ವಾಜಪೇಯಿ ನೇತೃತ್ವದಲ್ಲಿ ಎನ್‌ಡಿಎ ನೇತೃತ್ವದ ಸರ್ಕಾರಗಳು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದವು. 1914ರಿಂದ ನರೇಂದ್ರಮೋದಿಯವರ ನೇತೃತ್ವದಲ್ಲಿ ಬಿಜೆಪಿ ಸ್ವಂತ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿತು. ಇಂತಹ ಅನೇಕ ಮಹನೀಯರು ಕಟ್ಟಿ ಬೆಳೆಸಿದ ಬಿಜೆಪಿಗೆ ಮತ್ತಷ್ಟು ಶಕ್ತಿ ತುಂಬಲು ಮುಖಂಡರು, ಕಾರ್ಯಕರ್ತರು ಸಂಸ್ಥಾಪನಾದಿನದಂದು ಸಂಕಲ್ಪ ಮಾಡಬೇಕು ಎಂದು ಮನವಿ ಮಾಡಿದರು.

ಸಮಾರಂಭದ ಅಧ್ಯಕ್ಷತೆವಹಿಸಿದ್ದ ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್. ರವಿಶಂಕರ್ ಹೆಬ್ಬಾಕ ಮಾತನಾಡಿ, ಸೈದಾಂತಿಕ ನಿಲುವಿನ ಆಧಾರದ ಮೇಲೆ ಬಿಜೆಪಿಯನ್ನು ಕಟ್ಟಿದ ಮಹನೀಯರನ್ನು ಈ ಸಂದರ್ಭದಲ್ಲಿ ನಾವೆಲ್ಲಾ ಸ್ಮರಿಸಬೇಕು. ಬಿಜೆಪಿ ಬೆಳವಣಿಗೆಗೆ ದೇಶಾದ್ಯಂತ ಅನೇಕ ನಾಯಕರು ಶ್ರಮಿಸಿದ್ದಾರೆ. ಜಿಲ್ಲೆಯಲ್ಲೂ ಬಹಳಷ್ಟು ಮುಖಂಡರು ಬಿಜೆಪಿ ಬೆಳವಣಿಗೆಗೆ ಕಾರಣರಾಗಿದ್ದಾರೆ ಅವರೆಲ್ಲಾ ಅಭಿನಂದನೀಯರು ಎಂದರು.

ಬಿಜೆಪಿ ರಾಜ್ಯ ಕಾರ್ಯದರ್ಶಿ ಅಂಬಿಕಾ ಹುಲಿನಾಯ್ಕರ್, ಜಿಲ್ಲಾ ಹಿರಿಯ ಉಪಾಧ್ಯಕ್ಷ ವೈ.ಹೆಚ್. ಹುಚ್ಚಯ್ಯ, ಪ್ರಧಾನ ಕಾರ್ಯದರ್ಶಿ ಗಂಗರಾಜು, ಹಿರಿಯ ಕಾರ್ಯಕರ್ತೆ ಅಂಬಿಕಾ ಮಹೇಶ್ ಭಾಗವಹಿಸಿದ್ದರು. ಇದಕ್ಕೂ ಮೊದಲು ಬಿಜೆಪಿ ಕಾರ್ಯಾಲಯದಲ್ಲಿ ಜಿಲ್ಲಾಧ್ಯಕ್ಷ ರವಿಶಂಕರ್ ಹೆಬ್ಬಾಕ, ಶಾಸಕ ಜಿ.ಬಿ. ಜ್ಯೋತಿಗಣೇಶ್ ಹಾಗೂ ಮುಖಂಡರು ಬಿಜೆಪಿ ಧ್ವಜಾರೋಹಣ ನೆರವೇರಿಸಿ ಧ್ವಜವಂದನೆ ಸಲ್ಲಿಸಿದರು.

ಸಂಸ್ಥಾಪನಾ ದಿನಾಚರಣೆಯಲ್ಲಿ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ನವಚೇತನ್, ನಿಕಟಪೂರ್ವ ನಗರ ಅಧ್ಯಕ್ಷ ಟಿ.ಹೆಚ್.ಹನುಮಂತರಾಜು, ಮುಖಂಡರಾದ ಕೆ.ಎ. ಕುಮಾರ್, ಪ್ರೀತಮ್ ಜೈನ್, ಗಣೇಶ್‌ಪ್ರಸಾದ್, ಸತ್ಯಮಂಗಲ ಜಗದೀಶ್, ಬನಶಂಕರಿ ಬಾಬು, ಎನ್. ವೇಂಕಟೇಶಾಚಾರ್, ಶಿವಕುಮಾರ್, ಜಗದೀಶ್, ಪುರುಷೋತ್ತಮ್, ಚೆಂಗಾವಿ ರವಿ, ಗಂಗೇಶ್ ಹದ್ದಿನಕಲ್ಲು, ರೇಖಾ ಶಿವಕುಮಾರ್, ಶ್ರೀನಿವಾಸ್, ರಘು, ಪ್ರವೀಣ್, ಕಿರಣ್, ದರ್ಶನ್ ಮೊದಲಾದವರು ಭಾಗವಹಿಸಿದ್ದರು.

ಬಿಜೆಪಿ ಸಂಸ್ಥಾಪನ ದಿನದ ಅಂಗವಾಗಿ ನಗರದ ಬಿಜೆಪಿ ಕಾರ್ಯಕರ್ತರು ತಮ್ಮ ಮನೆಗಳ ಮೇಲೆ ಬಿಜೆಪಿ ಧ್ವಜ ಹಾರಿಸಿ ಗೌರವ ಸಲ್ಲಿಸಿ ಸಂಭ್ರಮಿಸಿದರು.

# ಕಾರ್ಮಿಕರೇ ಜೇನುಗಳಿದ್ದಂತೆ: ಮಾಸ್ತಿ ಟಿ.ಸಿ. ರಮೇಶ್ ಶ್ಲಾಘನೆ



ಮಾಸ್ತಿ

"ಜೇನಿನ ಸವಿಯ ಹಿಂದೆ ಕಾರ್ಮಿಕ ಜೇನುಗಳ ಪರಿಶ್ರಮವಿರುವಂತೆ, ನನ್ನ ಬದುಕಿನ ಏಳಿಗೆಯ ಹಿಂದೆ ನನ್ನ ಜೊತೆ ಕೆಲಸ ಮಾಡುವ ಸಹೋದ್ಯೋಗಿಗಳ ಶ್ರಮ ಅಡಗಿದೆ," ಎಂದು ಶ್ರೀ ನಾರಾಯಣ ಗುರು ಸೇವಾ ಚಾರಿಟಬಲ್ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷರಾದ ಮಾಸ್ತಿ ಟಿ.ಸಿ. ರಮೇಶ್ ಭಾವುಕರಾಗಿ ನುಡಿದರು.

ಮಾಸ್ತಿಯಲ್ಲಿರುವ ಟ್ರಸ್ಟ್ ಕಚೇರಿ ಆವರಣದಲ್ಲಿ ಕಾರ್ಮಿಕರು ಆಯೋಜಿಸಿದ್ದ ತಮ್ಮ 55ನೇ ಜನ್ಮದಿನೋತ್ಸವ ಹಾಗೂ ಅನ್ನದಾನ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಯಾವುದೇ ಅದ್ದೂರಿತನವಿಲ್ಲದೆ, ರಮೇಶ್ ಅವರೊಂದಿಗೆ ಕೆಲಸ ಮಾಡುವ ಕಾರ್ಮಿಕರೆಲ್ಲರೂ ಒಗ್ಗೂಡಿ ಅನ್ನದಾನ ಮಾಡುವ ಮೂಲಕ ತಮ್ಮ ನೆಚ್ಚಿನ ನಾಯಕನ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಿದರು. ಈ ಅನಿರೀಕ್ಷಿತ ಪ್ರೀತಿಗೆ ಮನಸೋತ ರಮೇಶ್ ಅವರು, "ನನ್ನ ಕಾರ್ಮಿಕ ಬಂಧುಗಳು ಇಂತಹ ವಿಶಿಷ್ಟ ಕಾರ್ಯಕ್ರಮ ರೂಪಿಸುತ್ತಾರೆ ಎಂದು ಭಾವಿಸಿರಲಿಲ್ಲ. ಅವರ ಮನಸ್ಸು ಗೆಲ್ಲುವ ರೀತಿಯಲ್ಲಿ ನಾನು ನಡೆದುಕೊಳ್ಳುತ್ತಿದ್ದೇನೆ ಎಂಬುದು ಇಂದು ನನಗೆ ಮನವರಿಕೆಯಾಗಿದೆ," ಎಂದು ಹರ್ಷ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಜ್ವಾಲಾಮುಖಿ ಡಾ. ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಸತೀಶ್, ಗಣೇಶ್, ಸುನಿಲ್ ಕುಮಾರ್, ನವೀನ್, ಸಫಿವುಲ್ಲಾ, ವೇಣು, ಭರತ್ ಸೇರಿದಂತೆ ನೂರಾರು ಅಭಿಮಾನಿಗಳು ಹಾಗೂ ಹಿತೈಷಿಗಳು ಭಾಗವಹಿಸಿದ್ದರು.

# 'ಮತ ಮಾರಿಕೊಳ್ಳಬೇಡಿ, ಸಂವಿಧಾನದ ಹಕ್ಕನ್ನು ಗೌರವಿಸಿ'




ಬಂಗಾರಪೇಟೆ

"ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ದೇಶದ ಪ್ರತಿಯೊಬ್ಬರಿಗೂ ಮತದಾನದ ಹಕ್ಕು ನೀಡುವ ಮೂಲಕ ಸಾಮಾನ್ಯ ವ್ಯಕ್ತಿಯೂ ಅಧಿಕಾರ ಹಿಡಿಯುವ ಪ್ರಜಾಪ್ರಭುತ್ವ ವ್ಯವಸ್ಥೆ ಕಲ್ಪಿಸಿದ್ದಾರೆ," ಎಂದು ಎಸ್‌ಬಿಎಸ್‌ಪಿ ರಾಜ್ಯಾಧ್ಯಕ್ಷ ಅಭಿಮನ್ಯು ಮಣಿ ಪಿ. ತಿಳಿಸಿದರು.

ನಗರದ ಹೊರವಲಯದಲ್ಲಿರುವ ಪಕ್ಷದ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ವಿವಿಧ ತಾಲ್ಲೂಕುಗಳ ಕಾರ್ಯಕರ್ತರ 'ಪಕ್ಷ ಸೇರ್ಪಡೆ' ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮತದಾನದ ಶಕ್ತಿಯನ್ನು ವಿವರಿಸಿದ ಅವರು, "ಹಿಂದೆ ರಾಜವಂಶದಲ್ಲಿ ಹುಟ್ಟಿದವರು ಮಾತ್ರ ಆಡಳಿತ ನಡೆಸುವ ವ್ಯವಸ್ಥೆಯಿತ್ತು. ಆದರೆ ಇಂದು ಮತದಾನ ಎಂಬ ಅಸ್ತ್ರದ ಮೂಲಕ ಜನಸಾಮಾನ್ಯರೂ ನಾಯಕರಾಗಬಹುದು. ಆದ್ದರಿಂದ ಮತವನ್ನು ಮಾರಿಕೊಳ್ಳದೆ, ಆಸೆ–ಆಮಿಷಗಳಿಗೆ ಬಲಿಯಾಗದೆ ಉತ್ತಮ ಅಭ್ಯರ್ಥಿಯನ್ನು ಆಯ್ಕೆ ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಉಳಿಸಬೇಕು," ಎಂದು ಕರೆ ನೀಡಿದರು.

ರಾಷ್ಟ್ರೀಯ ಅಧ್ಯಕ್ಷ ಓಂ ಪ್ರಕಾಶ್ ರಾಜ್‌ಭರ್ ಅವರ ಸರಳತೆಯನ್ನು ಶ್ಲಾಘಿಸಿದ ಅಭಿಮನ್ಯು ಮಣಿ ಅವರು, "ನಮ್ಮದು ಬಡವರ ಪರವಾದ ಪಕ್ಷ. ಯಾವುದೇ ದೊಡ್ಡ ಬಂಡವಾಳವಿಲ್ಲದೆ, ಕೇವಲ ಸಾಮಾನ್ಯ ಸದಸ್ಯತ್ವ ಶುಲ್ಕದಿಂದಲೇ ಪಕ್ಷವನ್ನು ಮುನ್ನಡೆಸಲಾಗುತ್ತಿದೆ. ಬಂಗಾರಪೇಟೆ ತಾಲ್ಲೂಕಿನಲ್ಲಿ ಈಗಾಗಲೇ 7,000 ಬಿತ್ತಿಪತ್ರಗಳನ್ನು ಹಂಚುವ ಮೂಲಕ ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಲಾಗಿದೆ," ಎಂದರು.

ಆಂಧ್ರ ಪ್ರದೇಶ, ಬೆಂಗಳೂರು, ಕೋಲಾರ, ಕೆಜಿಎಫ್ ಹಾಗೂ ಮಾಲೂರು ಭಾಗಗಳಿಂದ ನೂರಾರು ಕಾರ್ಯಕರ್ತರು ಪಕ್ಷದ ತತ್ವಗಳನ್ನು ಮೆಚ್ಚಿ ಅಧಿಕೃತವಾಗಿ ಎಸ್‌ಬಿಎಸ್‌ಪಿ ಸೇರಿದರು.

ರಾಜ್ಯ ಪ್ರಚಾರ ಸಮಿತಿ ಅಧ್ಯಕ್ಷ ಪಿವಿಸಿ ಮಣಿ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ಪ್ರಮುಖ ಮುಖಂಡರು ಮತ್ತು ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ದಾಖಲೆ ಸಮೇತ ಸಂತ್ರಸ್ತ ಸ್ಪಷ್ಟನೆ



ಬೇತಮಂಗಲ

ಕಳೆದ ಕೆಲವು ತಿಂಗಳಿಂದ ಅರ್ಜುನ್ ಬಾಬು ಹಾಗೂ ಅವರ ಸಂಗಡಿಗರು ಪತ್ರಿಕೆ ಮತ್ತು ಯೂಟ್ಯೂಬ್ ಚಾನೆಲ್‌ಗಳಲ್ಲಿ ನನ್ನ ವಿರುದ್ಧ ಮಾಡುತ್ತಿರುವ ಎಲ್ಲಾ ಆರೋಪಗಳು ಸತ್ಯಕ್ಕೆ ದೂರವಾದುದು ಎಂದು ಮಹೇಶ್ ಕುಮಾರ್ ಅವರು ಸುದ್ದಿಗಾರರಿಗೆ ತಿಳಿಸಿದರು.

ತಮ್ಮ ಕುಟುಂಬದ ಮೇಲಿರುವ ಆರೋಪಗಳ ಬಗ್ಗೆ ಸ್ಪಷ್ಟನೆ ನೀಡಿದ ಅವರು, "ನಮ್ಮ ತಾಯಿಯವರಾದ ರಾಜೇಶ್ವರಿ ಅವರಿಗೆ 30 ಗುಂಟೆ ಜಮೀನು ಮಂಜೂರಾಗಿರುತ್ತದೆ. ಈ ಬಗ್ಗೆ ಹಲವು ಬಾರಿ ಕಂದಾಯ ಇಲಾಖೆಗೆ ಅರ್ಜಿ ಸಲ್ಲಿಸಿದರೂ ಯಾವುದೇ ಹಿಂಬರಹ ನೀಡಿರಲಿಲ್ಲ. ಅಂತಿಮವಾಗಿ 2024ರಲ್ಲಿ ಎಸಿ ನ್ಯಾಯಾಲಯದಲ್ಲಿ ದಾವೆ ಹೂಡಲಾಗಿತ್ತು. ನ್ಯಾಯಾಲಯವು ನಮ್ಮ ತಾಯಿಯ ಪರವಾಗಿ ಆದೇಶ ನೀಡಿದ್ದು, ತಹಶೀಲ್ದಾರ್ ಅವರು ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ ರಾಜೇಶ್ವರಿ ಅವರ ಹೆಸರಿಗೆ ಖಾತೆ ಮಾಡುವಂತೆ ಆದೇಶಿಸಿದ್ದಾರೆ," ಎಂದು ವಿವರಿಸಿದರು.

ತಾಲ್ಲೂಕು ಭೂಮಾಪಕರು, ಉಪತಹಶೀಲ್ದಾರ್, ಆರ್.ಐ. ಹಾಗೂ ಗ್ರಾಮ ಲೆಕ್ಕಾಧಿಕಾರಿಗಳ ಸಮ್ಮುಖದಲ್ಲಿ ಸ್ಥಳ ಪರಿಶೀಲನೆ ನಡೆದಿದೆ. "ಅಳತೆ ಸಮಯದಲ್ಲಿ ಕೆರೆ ಕೋಡಿ ಮತ್ತು ರಸ್ತೆ ಇರುವುದು ಕಂಡುಬಂದಿದೆ. ಆ 30 ಗುಂಟೆ ಜಮೀನಿನಲ್ಲಿ ನಮ್ಮ ತಾಯಿ ಸ್ವಾಧೀನದಲ್ಲಿದ್ದಾರೆ. ಈ ಜಮೀನು ಕಾಯ್ದಿರಿಸಿರುವ ಉದ್ದೇಶಕ್ಕೆ ಬಳಸಲು ಯೋಗ್ಯವಲ್ಲ ಎಂದು ಅಧಿಕಾರಿಗಳೇ ವರದಿ ನೀಡಿದ್ದಾರೆ. ಪ್ರಕರಣ ಇನ್ನೂ ನ್ಯಾಯಾಲಯದಲ್ಲಿರುವುದರಿಂದ ನಾವು ಕಾನೂನಿನ ಆದೇಶಕ್ಕೆ ಬದ್ಧರಾಗಿದ್ದೇವೆ," ಎಂದು ಅವರು ತಿಳಿಸಿದರು.

ಮಹೇಶ್ ಕುಮಾರ್ ಅವರ ಪರ ವಕೀಲರಾದ ಕೆ.ಸಿ. ನಾಗರಾಜ್ ಮಾತನಾಡಿ, "ನಮ್ಮ ಕಕ್ಷಿದಾರರ ಮೇಲೆ ಅರ್ಜುನ್ ಬಾಬು ಮತ್ತು ತಂಡದವರು ಉದ್ದೇಶಪೂರ್ವಕವಾಗಿ ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಿದ್ದಾರೆ. ಈ ಕುರಿತು ಈಗಾಗಲೇ ದೂರು ನೀಡಲಾಗಿದೆ. ಪೊಲೀಸರ ವರದಿಯ ಆಧಾರದ ಮೇಲೆ ಆರೋಪ ಮಾಡಿದವರ ವಿರುದ್ಧ ಶೀಘ್ರದಲ್ಲೇ ಮಾನನಷ್ಟ ಮೊಕದ್ದಮೆ ಹೂಡಲಾಗುವುದು," ಎಂದು ಎಚ್ಚರಿಸಿದರು.

# ಶ್ರೀ ಪಟಾಲಮ್ಮ - ವೀರಸೊಣ್ಣಮ್ಮ ದೇವಿ ರಥೋತ್ಸವ ಸಂಪನ್ನ

ಶಿಡ್ಲಘಟ್ಟ

ತಾಲ್ಲೂಕಿನ ವರದನಾಯಕನಹಳ್ಳಿ ಗ್ರಾಮದ ಹೊರವಲಯದಲ್ಲಿ ನೆಲೆಸಿರುವ ಪ್ರಸಿದ್ಧ ಶ್ರೀ ಪಟಾಲಮ್ಮದೇವಿ ಮತ್ತು ಶ್ರೀ ವೀರಸೊಣ್ಣಮ್ಮ ದೇವಿಯವರ 30ನೇ ವರ್ಷದ ಬ್ರಹ್ಮ ರಥೋತ್ಸವ ಹಾಗೂ ಕಾಯಿ ಉಟ್ಲು ಮಹೋತ್ಸವವು ಅತ್ಯಂತ ವಿಜೃಂಭಣೆಯಿಂದ ನೆರವೇರಿತು.

ಜಾತ್ರಾ ಮಹೋತ್ಸವದ ಅಂಗವಾಗಿ ದೇವಿಯ ವಿಗ್ರಹಗಳಿಗೆ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ಬೆಳಿಗ್ಗೆಯಿಂದಲೇ ವಿವಿಧ ಪೂಜಾ ಕೈಂಕರ್ಯಗಳು ನಡೆದು, ಮಹಾ ಮಂಗಳಾರತಿಯ ನಂತರ ಭಕ್ತರಿಗೆ ತೀರ್ಥ ಪ್ರಸಾದ ವಿನಿಯೋಗಿಸಲಾಯಿತು. ನಂತರ ಅಲಂಕೃತ ರಥದಲ್ಲಿ ಉತ್ಸವ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಮಂಗಲವಾದ್ಯಗಳೊಂದಿಗೆ ದೇವಾಲಯದ ಸುತ್ತ ಪ್ರದಕ್ಷಿಣೆ ಹಾಕಲಾಯಿತು.

ರಥೋತ್ಸವದ ಉದ್ದಕ್ಕೂ ಕೀಲುಕುದುರೆ, ಗಾರುಡಿ ಗೊಂಬೆ ಹಾಗೂ ಮರದ ಕಾಲು ಕಟ್ಟಿದ ವೇಷಧಾರಿಗಳ ಪ್ರದರ್ಶನ ಸೇರಿದಂತೆ ವಿವಿಧ ಜನಪದ ಕಲಾತಂಡಗಳು ಮೆರವಣಿಗೆಗೆ ವಿಶೇಷ ಕಳೆ ನೀಡಿದವು. ಭಕ್ತರು ಇಷ್ಟಾರ್ಥ ಸಿದ್ಧಿಗಾಗಿ ದವನ ಚುಚ್ಚಿದ ಬಾಳೆಹಣ್ಣನ್ನು ರಥದ ಕಳಶಕ್ಕೆ ಎಸೆದು ಭಕ್ತಿ ಸಮರ್ಪಿಸಿದರು.

ಜಾತ್ರೆಯ ಅಂಗವಾಗಿ ದೇವಾಲಯದ ಆವರಣದಲ್ಲಿ ಬತ್ತಾಸು, ಆಟಿಕೆ ಹಾಗೂ ಸೌಂದರ್ಯ ವರ್ಧಕಗಳ ಅಂಗಡಿಗಳು ಭರ್ಜರಿಯಾಗಿ ತಲೆ ಎತ್ತಿದ್ದವು. ಬಿಸಿಲಿನ ಬೇಗೆಯಿಂದ ತಪ್ಪಿಸಿಕೊಳ್ಳಲು ಭಕ್ತರು ಎಳನೀರು, ಕಲ್ಲಂಗಡಿ ಹಾಗೂ ತಂಪು ಪಾನೀಯಗಳ ಮೊರೆ ಹೋಗಿದ್ದರು. ಸುತ್ತಮುತ್ತಲಿನ ಗ್ರಾಮಸ್ಥರು ಎತ್ತಿನ ಬಂಡಿಗಳಲ್ಲಿ ಪಾನಕ, ಮಜ್ಜಿಗೆ ಹಾಗೂ ಹೆಸರುಬೇಳೆಯನ್ನು ತಂದು ಪ್ರಸಾದ ರೂಪದಲ್ಲಿ ಹಂಚಿದರು. ಸಂಜೆ ಅಮ್ಮನವರ ಹೆಸರಿನಲ್ಲಿ 'ಕ್ಷೀರ ಉಟ್ಲು' ಮತ್ತು 'ಕಾಯಿ ಉಟ್ಲು' ಮಹೋತ್ಸವ ಸಡಗರದಿಂದ ನಡೆಯಿತು. ದೇವಾಲಯದ ಅಭಿವೃದ್ಧಿ ಸಮಿತಿಯ ವತಿಯಿಂದ ಭಕ್ತಾದಿಗಳಿಗೆ ಉಚಿತ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು. ಕಾರ್ಯಕ್ರಮದಲ್ಲಿ ದೇವಸ್ಥಾನದ ಅಭಿವೃದ್ಧಿ ಸಮಿತಿ ಸದಸ್ಯರು ಹಾಗೂ ವಿವಿಧ ಗ್ರಾಮಗಳ ಮುಖಂಡರು ಉಪಸ್ಥಿತರಿದ್ದರು.



ಬಿಜೆಪಿಯ 47ನೇ ಸಂಸ್ಥಾಪನಾ ದಿನಾಚರಣೆಯನ್ನು ಕೇರಳದ ತಿರುವನಂತಪುರದ ಮಾರ್ಗರ್ಜಿ ಭವನದಲ್ಲಿ ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು. ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಈ ಭವ್ಯ ಕಾರ್ಯಕ್ರಮದಲ್ಲಿ ಭಾಗವಹಿಸಿ, ಪಕ್ಷದ ಧ್ವಜಾರೋಹಣ ನೆರವೇರಿಸಿದರು. ಈ ಐತಿಹಾಸಿಕ ಸಂದರ್ಭದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಹಾಗೂ ಪ್ರಮುಖ ನಾಯಕರುಗಳಾದ ರಾಜೀವ್ ಚಂದ್ರಶೇಖರ್, ವಿನೋದ್ ತಾವ್ಡೆ, ಪ್ರಕಾಶ್ ಜಾವಡೇಕರ್ ಅವರು ಭಾಗವಹಿಸಿದ್ದರು. ಅಲ್ಲದೆ, ಕೇರಳದ ಹಿರಿಯ ನಾಯಕರುಗಳಾದ ಎಂ.ಟಿ. ರಮೇಶ್, ಅಡ್ವೊಕೇಟ್ ಎಸ್. ಸುರೇಶ್, ಅಡ್ವೊಕೇಟ್ ವಿ.ವಿ. ರಾಜೇಶ್, ಅನಿಲ್ ಕೆ. ಆಂಟನಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.



ಸೋಮವಾರ ಯಶವಂತಪುರ ವಿಧಾನಸಭಾ ಕ್ಷೇತ್ರ ನಗರ ಮಂಡಲ ಅಧ್ಯಕ್ಷರಾದ ಅನಿಲ್ ಚಳಗೇರಿ ಅವರ ನೇತೃತ್ವದಲ್ಲಿ ಕ್ಷೇತ್ರದ ವಿವಿಧೆಡೆ ಬಿಜೆಪಿ ಸಂಸ್ಥಾಪನಾ ದಿನಾಚರಣೆ ನಡೆಸಲಾಯಿತು.

# ರೋಗಗಳನ್ನು ಜಯಿಸಲು ಶಾರೀರಿಕ ಚಿಕಿತ್ಸೆಯ ಜೊತೆಗೆ ಅಧ್ಯಾತ್ಮಿಕ ಉಪಾಯ ಅಗತ್ಯ

ಶಿರೋಡಾ (ಗೋವಾ)

"ಯಾವುದೇ ರೀತಿಯ ರೋಗವನ್ನು ಸಂಪೂರ್ಣವಾಗಿ ಗುಣಪಡಿಸಲು ಶಾರೀರಿಕ ಚಿಕಿತ್ಸೆಯಷ್ಟೇ ಆಧ್ಯಾತ್ಮಿಕ ಉಪಾಯಗಳನ್ನು ಮಾಡುವುದು ಕೂಡ ಅತ್ಯಂತ ಅಗತ್ಯವಾಗಿದೆ," ಎಂದು ಮಹರ್ಷಿ ಅಧ್ಯಾತ್ಮ ವಿಶ್ವವಿದ್ಯಾಲಯದ ಸಂಶೋಧಕರಾದ ಶಾನ್ ಕ್ಲಾರ್ಕ್ ಅಭಿಪ್ರಾಯಪಟ್ಟರು.

ಇಲ್ಲಿನ 'ಗೋಮಂತಕ ಆಯುರ್ವೇದ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ'ದಲ್ಲಿ ಆಯೋಜಿಸಲಾಗಿದ್ದ 'ಚಿಕಿತ್ಸೆಯಲ್ಲಿ ಅಧ್ಯಾತ್ಮದ ಪಾತ್ರ' ಎಂಬ ವಿಷಯದ ಕುರಿತಾದ ಅತಿಥಿ ಉಪನ್ಯಾಸದಲ್ಲಿ ಅವರು ಮಾತನಾಡುತ್ತಿದ್ದರು.

ಅಧ್ಯಾತ್ಮಿಕ ಮೂಲ ಕಾರಣಗಳು:

ಸಂಶೋಧನಾ ತಂಡದ ಪ್ರಕಾರ, ಜೀವನದ ಶೇ. 50ಕ್ಕಿಂತ ಹೆಚ್ಚು ಸಮಸ್ಯೆಗಳು ಆಧ್ಯಾತ್ಮಿಕ ಸ್ವರೂಪದ್ದಾಗಿರುತ್ತವೆ. ಪ್ರಾರಬ್ಧ ಕರ್ಮ ಮತ್ತು ಪಿತೃದೋಷಗಳು ಗಂಭೀರ ಕಾಯಿಲೆಗಳಿಗೆ ಪ್ರಮುಖ ಕಾರಣಗಳಾಗಿರಬಹುದು.

ವೈದ್ಯಕೀಯ ಕ್ಷೇತ್ರದಲ್ಲಿ ಅಧ್ಯಾತ್ಮ:



1990ರ ದಶಕದಿಂದ ಅಮೆರಿಕದ ಶೇ. 90ರಷ್ಟು ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಅಧ್ಯಾತ್ಮ ಆಧಾರಿತ ಪಠ್ಯಕ್ರಮಗಳನ್ನು ಅಳವಡಿಸಿಕೊಳ್ಳಲಾಗಿದೆ. ಭಾರತೀಯ ಆಯುರ್ವೇದವು ಮೊದಲಿನಿಂದಲೂ ಸತ್ವ ಗುಣದ ಹೆಚ್ಚಳ ಹಾಗೂ ರಜ–ತಮ ಗುಣಗಳ ನಿರ್ಮೂಲನೆಗೆ ಒತ್ತು ನೀಡಿದೆ.

ಆಧುನಿಕ ತಂತ್ರಜ್ಞಾನದ ಬಳಕೆ:

ಔರಾ ಮತ್ತು ಎನರ್ಜಿ ಸ್ಕ್ಯಾನರ್‌ಗಳ ಮೂಲಕ ನಡೆಸಿದ ಸಂಶೋಧನೆಯಲ್ಲಿ ನಕಾರಾತ್ಮಕ ಶಕ್ತಿಗಳು ವೈದ್ಯಕೀಯ ಸಮಸ್ಯೆಗಳನ್ನು ಹೇಗೆ ಉಂಟುಮಾಡುತ್ತವೆ ಎಂಬ ನಿಷ್ಕರ್ಷಗಳನ್ನು ತಂಡವು ಮಂಡಿಸಿತು.

ಪಿತೃ ದೋಷ ಮತ್ತು ರೋಗಗಳು:

ಎಕ್ಸಿಮಾ, ಸಂತಾನೋತ್ಪತ್ತಿ ಸಮಸ್ಯೆ, ಗರ್ಭಪಾತ ಹಾಗೂ ವ್ಯಸನದಂತಹ ಸಮಸ್ಯೆಗಳಿಗೆ ಕೇವಲ ಔಷಧಿ ಸಾಕಾಗುವುದಿಲ್ಲ; ಅಲ್ಲಿ ಆಧ್ಯಾತ್ಮಿಕ ಚಿಕಿತ್ಸೆಯೂ ಬೇಕಾಗುತ್ತದೆ ಎಂದು ಸಂಶೋಧಕರು ತಿಳಿಸಿದರು.

ಸಂಶೋಧನಾ ತಂಡವು ಸಮಗ್ರ ಆರೋಗ್ಯಕ್ಕಾಗಿ ಕೆಲವು ಸರಳ ಆಧ್ಯಾತ್ಮಿಕ ಮಾರ್ಗಗಳನ್ನು ಸೂಚಿಸಿದೆ.

ದೇವರ ನಾಮಸ್ಮರಣೆ ಮಾಡುವುದು.

ಉಪ್ಪು ನೀರಿನ ಉಪಾಯ (15 ನಿಮಿಷಗಳ ಕಾಲ ಪಾದಗಳನ್ನು ಉಪ್ಪು ನೀರಿನಲ್ಲಿ ಇಡುವುದು).

ಸ್ವಭಾವದೋಷ ನಿವಾರಣೆ ಮಾಡಿಕೊಳ್ಳುವುದು.

ತಾಜಾ ಹಾಗೂ ಸಾತ್ವಿಕ ಸಸ್ಯಾಹಾರಿ ಆಹಾರ ಸೇವನೆ.

ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ನೀಲೇಶ್ ಕೋರಡೆ, ಗೋವಾ ಕೌನ್ಸಿಲ್ ಆಫ್ ಆಯುರ್ವೇದದ ಅಧ್ಯಕ್ಷೆ ಡಾ. ಸ್ನೇಹಾ ಭಾಗವತ್ ಸೇರಿದಂತೆ ಸುಮಾರು 100ಕ್ಕೂ ಹೆಚ್ಚು ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಗೂ ಪ್ರಾಧ್ಯಾಪಕರು ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy